ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟ ಜಿಲ್ಲೆ ಮುಧೋಳ ತಾಲ್ಲೂಕು ಬರಗಿ ಏತ ನೀರಾವರಿ ಯೋಜನೆ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 26,52,081/–ಗಳ ಮೇಲೆ ಶೇಕಡ 6.66ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ.28,28,710/–

ಗಳಿಗೆ (ಇಪ್ಪತ್ತೆಂಟು ಲಕ್ಷ ಇಪ್ಪತ್ತೆಂಟು ಸಾವಿರದ ಏಳುನೂರ ಹತ್ತು ರೂ.ಗಳು ಮಾತ್ರ) ಶ್ರೀ ಎಫ್.ಎನ್.ಪಾಟೀಲ, ಒಂದನೇ ದರ್ಜೆ ಗುತ್ತಿಗೆದಾರರು. ಇವರಿಗೆ ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ:20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

(ಕೆ.ಸುಧಾಕರ ಶೆಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ಪಿ.ಆರ್. 776

ಜಲ ಸಂಪನ್ಮೂಲ ಸಚಿವಾಲಯ

ವಿಷಯ: ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಕುಂದಗೋಳ ಶಿರೂರ ರಸ್ತೆ ಹತ್ತಿರ ಬೆಣ್ಣಿಹಳ್ಳಕ್ಕೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್‌ನ್ನು ಅನುಮೋದಿಸುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ಸನೀಇ 02 ನಯೋಕಾ 2009 ದಿನಾಂಕ 05.02.2009.

(2) ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ದಿನಾಂಕ: 08.01.2010ರ ಪತ್ರದ ಸಂಖ್ಯೆ: ಮುಇಂ/ ಸನೀ(ಉ)ವಲಯ /ಬಿಜೆಪಿ/ ಎಇ-3/2009-10/148

(3) ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ(ದಕ್ಷಿಣ)ವಲಯ, ಬೆಂಗಳೂರು ರವರ ದಿನಾಂಕ 24.02.2010ರ ಪತ್ರ ಸಂಖ್ಯೆ: ಮುಸದ/ ಆಪ್ತಶಾಖೆ/ ಟೆಂಡರ್/ 08-09/660

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ನಬಾರ್ಡ್‌ಆರ್.ಐ.ಡಿ.ಎಫ್.-14ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುವ 260 ಕಾಮಗಾರಿಗಳಲ್ಲಿ ರೂ.155.00 ಲಕ್ಷ ಅಂದಾಜು ಮೊತ್ತದ ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕಿನ ಕುಂದಗೋಳ-ಶಿರೂರ ರಸ್ತೆ ಹತ್ತಿರ ಬೆಣ್ಣಿಹಳ್ಳಕ್ಕೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯು ಸಹ ಸೇರಿದೆ. ಸದರಿ ಕಾಮಗಾರಿಯ ರೂ.151.00 ಲಕ್ಷ ಮೊತ್ತದ ಅಂದಾಜಿಗೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಧಾರವಾಡ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಕರೆಯಲಾದ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	ದಿನಾಂಕ 24.09.2009
ಜಿಲ್ಲಾ ಟೆಂಡರ್ ಬುಲೆಟಿನ್	ದಿನಾಂಕ 19.09.2009
ಕರ್ನಾಟಕ ರಾಜ್ಯ ಪತ್ರ	ದಿನಾಂಕ 17.09.2009
ಕನ್ನಡ ಪ್ರಭ/ಸಂಯುಕ್ತ ಕರ್ನಾಟಕ ದಿನಪತ್ರಿಕೆ	ದಿನಾಂಕ 24.09.2009

ಈ ಟೆಂಡರ್ ಕರೆಗೆ ಪ್ರತಿಕ್ರಯಿಸಿ ಖಾಲಿ ಟೆಂಡರ್ ಫಾರಂ ಪಡೆದ 04 ಜನ ಗುತ್ತಿಗೆದಾರರ ಪೈಕಿ ಮೂರು ಗುತ್ತಿಗೆದಾರರು ಮಾತ್ರ ನಿಗದಿತ ದಿನದಂದು ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸಿರುತ್ತಾರೆ. ಇವರ ತಾಂತ್ರಿಕ ಬಿಡ್‌ಗಳನ್ನು ದಿನಾಂಕ02.11.2009 ರಂದು ತೆರೆಯಲಾಗಿದ್ದು ಒಬ್ಬರು ಗುತ್ತಿಗೆದಾರರ ಟೆಂಡರ್ ಮಾತ್ರ ಅರ್ಹವಾಗಿರುತ್ತದೆ. ದಿನಾಂಕ 21.11.2009ರಂದು ಆರ್ಥಿಕ ಬಿಡ್ ತೆರೆಯಲಾಗಿದ್ದು ವಿವರಗಳು ಕೆಳಕಂಡಂತಿವೆ.

<table>
<tr><td colspan="3">ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ</td><td colspan="2">ರೂ 1,27,70,537/-</td></tr>
<tr><td colspan="3">ಪ್ರಸಕ್ತ ಸಾಲಿನ ದರಪಟ್ಟಿಯ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ</td><td colspan="2">ರೂ 1,27,12,396/-</td></tr>
<tr><td>ಕ್ರಮ ಸಂಖ್ಯೆ</td><td>ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್</td><td>ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ</td><td>ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ</td><td>ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ</td></tr>
<tr><td>1</td><td>ಬಿ.ಎನ್.ಪೋಲೀಸ್ ಪಾಟೀಲ, ಒಂದನೇ ದರ್ಜೆ ಗುತ್ತಿಗೆದಾರರು.</td><td>1,46,32,902/-</td><td>14.58 ಹೆಚ್ಚು</td><td>15.11 ಹೆಚ್ಚು</td></tr>
</table>

ಮೇಲ್ಕಂಡಂತೆ ಶ್ರೀ ಬಿ.ಎನ್. ಪೋಲೀಸ್ ಪಾಟೀಲ್, 1ನೇ ದರ್ಜೆ ಗುತ್ತಿಗೆದಾರರು ಇವರು ನಮುದಿಸಿರುವ ದರಗಳಂತೆ ಟೆಂಡರ್ ಮೊತ್ತವು1,46,32,902 ಗಳಾಗಿದ್ದು, ಇದನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಗಣಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೆ.15.11ರಷ್ಟು ಹೆಚ್ಚಾಗಿರುತ್ತದೆ. ಸದರಿಯವರ ಟೆಂಡರ್‌ನ್ನು ಸಂದಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 30.01.2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳಿಗೆ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,27,12,396/-ಗಳ ಮೇಲೆ ಶೇಕಡ 13.50ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ.1,44,28,569/-ಗಳಿಗೆ ಕಾಮಗಾರಿಯನ್ನು ಶ್ರೀ ಬಿ.ಎನ್. ಪೋಲೀಸ್ ಪಾಟೀಲ, ಒಂದನೇ ದರ್ಜೆ ಗುತ್ತಿಗೆದಾರರು ಇವರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 3ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 2 ಅಪಿಬಂ 2009 ಬೆಂಗಳೂರು, ದಿನಾಂಕ 10ನೇ ಮಾರ್ಚ್2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕಿನ ಕುಂದಗೋಳ-ಶಿರೂರ ರಸ್ತೆ ಹತ್ತಿರ ಬೆಣ್ಣಿಹಳ್ಳಕ್ಕೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 1,27,12,396/- ಗಳ ಮೇಲೆ ಶೇಕಡ 13.50 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,44,28,569/-ಗಳಿಗೆ (ಒಂದು ಕೋಟಿ ನಲವತ್ತ ನಾಲ್ಕು ಲಕ್ಷ ಇಪ್ಪತ್ತೆಂಟು ಸಾವಿರದ ಐನೂರ ಅರವತ್ತೊಂಬತ್ತು ರೂ.ಗಳು ಮಾತ್ರ) ಶ್ರೀ ಬಿ.ಎನ್. ಪೋಲೀಸ್ ಪಾಟೀಲ, ಒಂದನೇ ದರ್ಜೆ ಗುತ್ತಿಗೆದಾರರು, ಇವರಿಗೆ ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ: 20/01/2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

(ಕೆ.ಸುಧಾಕರ ಶೆಟ್ಟಿ),

ಪಿ.ಆರ್. 777

ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

HEALTH AND FAMILY WELFARE SECRETARIAT

Sub :- Creation of Quality Assurance Cell and Blood Bank cell in the Directorate of Health and Family Welfare Services –reg.

Read :- Proceedings of the 5th meeting of the Project Governing Board held on 17-02-2010

Preamble:

The Karnataka Health System Development and Reform Project envisages the strengthening of institutional capacity. As per the Aide – Memoire of the World Bank, it was agreed that separate Cells would be created in the Directorate of Health and Family Welfare Services. The separate Cells are (a) a Quality Assurance Cell to improve and provide quality health care to the people and (b) a Blood Bank Cell to monitor the Blood Banks in the State.

A proposal was therefore placed before the Project governing Board in the 5th meetig held on 17-02-2010 to create the following Cells in the Directorate of Health and Family Welfare Services.

a) Quality Assurance Cell
b) Bood Bank Cell

It was also proposed to create the following posts so that qualified personnel can help implementation of the objectives of the Cells.

a) Quality Assurance Cell

The Objective of the cell is to propose a strategy, design and approach for a broader, State-wide effort at improving the quality of health services offered in the public health care system.

Details of posts to be created:

Sl. No	Designation of the post	Qualification	Remunera - tion Per Month (in Rs)	No.of Posts	Remuneration per annum (in Rs)	Remarks
1.	Quality Assurance Consultant (one for Headquaters and at one per Revenue Division)	MBBS with Hospital Management/ MBBS with MABH Assessors Certificate/MD (P & SM) with Hospital Management/ MBA with Hospital Management with five years hospital experience	40,000-00	5	24,00,000-00	To be procured from the market
2 a)	Support Staff: Computer Programmer	Any degree with Computer Knowledge	8000-00	1	96,000-00	To be hired through an agency
b)	Group ‘d’		6000-00	1	72,000-00	To be hired through an agency
			Total		25,68,000-00	

c) Blood Bank Cell

The Government of Karnataka has established Blood Banks thoughout the State in the district hospitals and major hospitals. The Blood Bank Cell is required to monitor and supervise the blood banking system in the State for effective functioning of Blood Banks and availability of Blood to patients.

Details of posts to be created :

Sl. No.	Designation of the post	Qualification	Remuneration per Month (in Rs.)	No.of Posts	Remuneration per annum (in Rs.)	Remaks
1	Blood Bank Consultant	MD Pathology Diploma in Clinical Pathology	40,000-0	1	4,80,000-00	To be procured from the market
2 a)	Support Staff: Computer Programmer	Any degree with Computer Knowledge	8000-00	1	96,000-00	To be hired through an agency
b)	Group 'D'		6000-00	1	72,000-00	To be hired through an agency
		Total			6,48,000-00	

An approximate budget estimate was worked out as above and placed before the Project Governing Board in its 5th meeting held on 17-02-2010.

In the Proceedings read above, the Project Governing Board has accorded approval for the above proposals.

Hence, the following Order.

Government Order No. HFW/KHSDRP/PHCF/QAC/16/09-10 Bangalore, dated : 15-03-2010

Under the circumstances mentioned in the preamble, Government are pleased to create the following:

1.Quality Assurance Cell

2.Blood Bank Cell

Both these cells are created in the Directorate of Health and Family Welfare Services with immediate effect with the following posts:

Sl. No.	Name of the post	No. of Posts	Remuneration Per Month (in Rs.)	Remuneration per annum (in Rs.)	Source
Quality Assurance Cell					
1	Quality Assurance Consultant (one for Headquarters and at one per each Revenue Division	5	40,000-00	24,00,000-00	To be procured from the market
2 a)	Support Staff: Computer Programmer	1	8000-00	96,000-00	To be hired through an agency
b)	Group 'D'	1	6000,00	72000-00	To be hired through an agency
		Total		**25,68,000-00**	

Blood	Bank Cell				
1	Blood Bank Consultant	1	40,000-00	4,80,000-00	To be procured from the market
2 a)	Support Staff : Computer Programmer	1	8000-00	96,000-00	To be hired through an agency
b)	Group 'D'	1	6000-00	72,000-00	To be hired through an agency
	Total			**6,48,000-00**	

The posts will be filled up on a temporary basis and will remain co-terminus with the Project period. Hiring of personnel shall be by following relevant laws/procedures / guidelines.

Approval is also given for the estimated budget required for establishing the Cells and expenditure to be incurred thereon. The expenditure shall be borne on the Head of Account "2210-06-800-0-84 (Plan)" under the Management and Evaluation component of KHSDRP for the corresponding financial year. Each Cell will carry out the assignments as per its responsibilities. The work of each Cell will be regularly monitored and supervised by the Project and senior officers of the Department as per instructions issued by the Govt. from time to time. The Quality Assurance Cell and Blood Bank Cell be established under the supervision of Deputy Project Administrator, KHSDRP and Deputy Director (PHCF), KHSDRP who will be the officers in charge for setting up the Cells.

By Order and in the name of the Governor of Karnataka

(**M. Shashidhar)**
Deputy Secretary to Government,
KHSDRP
Health and Family Welfare Department

P.R. 783

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ತಿದ್ದುಪಡಿ

ಸಂಖ್ಯೆ : ಆಕುಕ 9 ಎಂ ಎಂ ಸಿ 2010, ಬೆಂಗಳೂರು ದಿನಾಂಕ 11–03–2010

ಸರ್ಕಾರದ ಆದೇಶ ಸಂಖ್ಯೆ : ಅಕುಕ 395 ಎಂಎಂಸಿ 2007 ದಿನಾಂಕ : 06–01–2010ರ ಅನುಬಂಧ–1ರ ಕ್ರಮ ಸಂಖ್ಯೆ '2' ರಲ್ಲಿ " ಡಾ: ಪಿ.ವಿ. ವೆಂಕಟರಾಜಮ್ಮ" ಎಂಬುದಕ್ಕೆ ಬದಲಾಗಿ " ಡಾ: ಪಿ.ಆರ್. ವೆಂಕಟರಾಜಮ್ಮ" ಎಂದು ತಿದ್ದುಕೊಂಡು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ವಿ. ಶ್ರೀರಾಮರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಪಿಆರ್–784

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಡಾ: ಆಶಾ ಎಸ್. ಸೇವಾನಿರತ ಸ್ನಾತಕೋತ್ತರ ವ್ಯಾಸಂಗದ ವಿದ್ಯಾರ್ಥಿ ಇವರು ವ್ಯಾಸಂಗವನ್ನು ಬಿಡಲು ಅನುಮತಿ ನೀಡುವ ಬಗ್ಗೆ :-

ಓದಲಾಗಿದೆ : 1) ಸರ್ಕಾರದ ಅಧಿಸೂಚನೆ ಸಂಖ್ಯೆ : ಆಕುಕ 86 ಹೆಚ್‌ಎಸ್‌ಹೆಚ್ 09 (ಭಾಗ-2) ದಿನಾಂಕ: 30/06-2009.

2) ಆಯುಕ್ತರು, ಆಕುಕ ಸೇವೆಗಳು, ಬೆಂಗಳೂರು ಇವರ ಪತ್ರ ಸಂಖ್ಯೆ :ಜೆಆರ್‌ಒ (ಎಂ) 41/2009-10, ದಿನಾಂಕ : 08-01-2010.

ಪ್ರಸ್ತಾವನೆ :

ಡಾ: ಆಶಾ ಎಸ್. ವೈದ್ಯಾಧಿಕಾರಿ, ಜಿಲ್ಲಾ ಆಸ್ಪತ್ರೆ, ಮಡಿಕೇರಿ, ಇವರನ್ನು ಸೇವಾನಿರತ ವೈದ್ಯರ ಕೋಟಾದಲ್ಲಿ ಮೊದಲಬಾರಿಗೆ ಡಿಪ್ಲೋಮ ಇನ್ ಅನಸ್ತೇಶಿಯಾ ವಿಷಯದಲ್ಲಿ ಸ್ನಾತಕೋತ್ತರ ವ್ಯಾಸಂಗಕ್ಕೆ ವಿಮ್ಸ್, ಬಳ್ಳಾರಿ ಇಲ್ಲಿಗೆ ಮೇಲೆ ಓದಲಾದ ಕ್ರಮಾಂಕ (1)ರ ಅಧಿಸೂಚನೆಯಲ್ಲಿ ಕೆಲವೊಂದು ಷರತ್ತುಗಳೊಂದಿಗೆ ನಿಯೋಜಿಸಲಾಗಿತ್ತು. ಇದರನ್ವಯ ಸದರಿ ವೈದ್ಯರು ದಿನಾಂಕ 09-07-2009 ರಂದು ವ್ಯಾಸಂಗಕ್ಕೆ ಹಾಜರಾಗಿರುತ್ತಾರೆ ಆದರೆ, ವೈಯಕ್ತಿಕ ಕಾರಣದಿಂದ ವ್ಯಾಸಂಗವನ್ನು ಮುಂದುವರಿಸಲು ಸಾಧ್ಯವಾಗದೇ ಇದ್ದುದರಿಂದ ಈ ವ್ಯಾಸಂಗವನ್ನು ಮೊಟಕುಗೊಳಿಸಿದ್ದಾರೆ. ಇದರಿಂದ ಕರಾರು ಪತ್ರ ಹಾಗೂ ನಿಯಮಾನುಸಾರ ಸರ್ಕಾರಕ್ಕೆ ಮತ್ತು ಖಾಸಗಿ ಕಾಲೇಜಿಗೆ ಸಂದಾಯ ಮಾಡಬೇಕಾಗಿರುವ ದಂಡದ ಮೊತ್ತ ಮತ್ತು ಇತರ ಶುಲ್ಕವನ್ನು ಸಂದಾಯ ಮಾಡಿರುವುದರಿಂದ ಹಾಗೂ ಸರ್ಕಾರಕ್ಕೆ ಸಂದಾಯ ಮಾಡಬೇಕಾಗಿರುವ ಮೊತ್ತವನ್ನು ಪಾವತಿ ಮಾಡಲು ಒಪ್ಪಿರುವುದರಿಂದ ಇವರು ಉನ್ನತ ವ್ಯಾಸಂಗವನ್ನು ಮೊಟಕುಗೊಳಿಸಲು ಅನುಮತಿ ನೀಡಿ, ಸ್ಥಳ ನಿಯುಕ್ತಿಗೊಳಿಸುವಂತೆ ಮೇಲೆ ಓದಲಾಧ ಕ್ರಮಾಂಕ (2)ರಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರು ಕೋರಿದ್ದಾರೆ.

ಸದರಿ ವೈದ್ಯರು ಸೇವಾನಿರತ ಕೋಟಾದಲ್ಲಿ ಸ್ನಾತಕೋತ್ತರ ವ್ಯಾಸಂಗಕ್ಕೆ ನಿಯೋಜಿಸಿದಾಗ ಬರೆದುಕೊಟ್ಟ ಕರಾರು ಪತ್ರಗಳು ಮತ್ತು Karnataka Conduct of Entrance Test for selection and admission to Post Graduate Medical and Dental degree and Diploma Courses Rules 2006 ರಲ್ಲಿರುವ ಷರತ್ತುಗಳಿಗೆ ಅನುಗುಣವಾಗಿ ಈ ಪ್ರಕರಣವನ್ನು ಪರಿಶೀಲಿಸಿ, ಇವರು ಸ್ನಾತಕೋತ್ತರ ವ್ಯಾಸಂಗವನ್ನು ಮೊಟಕುಗೊಳಿಸಲು ಅನುಮತಿ ನೀಡಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 559 ಹೆಚ್‌ಎಸ್‌ಹೆಚ್ 2009, ಬೆಂಗಳೂರು, ದಿನಾಂಕ 10ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಡಾ. ಆಶಾ ಎಸ್. ವೈದ್ಯಾಧಿಕಾರಿ, ಇವರು ಕೆಳಕಂಡ ಷರತ್ತುಗಳಿಗೆ ಅನುಗುಣವಾಗಿ ಸೇವಾನಿರತ ಕೋಟಾದಲ್ಲಿ ಸ್ನಾತಕೋತ್ತರ ವ್ಯಾಸಂಗವನ್ನು ಮೊಟಕುಗೊಳಿಸಲು ಸರ್ಕಾರವು ಅನುಮತಿ ನೀಡಿದೆ ಮತ್ತು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ, ಸರ್ವೆ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇಲ್ಲಿ ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗೆ ನೇಮಕ ಮಾಡಿದೆ.

1 ಸ್ನಾತಕೋತ್ತರ ವ್ಯಾಸಂಗಕ್ಕೆ ತೆರಳುವ ಸಮಯದಲ್ಲಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇವರಿಗೆ ಸಂದಾಯ ಮಾಡಿರುವ ರೂ. 25,000/-ಗಳನ್ನು ದಂಡವನ್ನಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವುದು ಹಾಗೂ ಖಾಸಗಿ ಕಾಲೇಜಿಗೆ ಸ್ನಾತಕೋತ್ತರ ವ್ಯಾಸಂಗಕ್ಕೆ ಸಂದಾಯ ಮಾಡಿದ ಫೀ ಗೆ ಸಮಾನಾಂತರವಾದ ಮೊತ್ತವನ್ನು ಪ್ರತಿ ತಿಂಗಳು ಅವರ ಸಂಬಳದಲ್ಲಿ ಕಟಾಯಿಸುವ ಬಗ್ಗೆ ಕ್ರಮ ತೆಗೆದುಕೊಳ್ಳಲು ಆಯುಕ್ತರಿಗೆ ನಿರ್ದೇಶಿಸಿದೆ.

2 ಸದರಿ ವೈದ್ಯರನ್ನು ಮುಂದಿನ ಮೂರು ಶೈಕ್ಷಣಿಕ ವರ್ಷಗಳ ಕಾಲಾವಧಿಯಲ್ಲಿ ಸೇವಾನಿರತ ಕೋಟಾದಲ್ಲಿ ಸ್ನಾತಕೋತ್ತರ/ಡಿಪ್ಲೊಮ ಪ್ರವೇಶ ಪರೀಕ್ಷೆ ತೆಗೆದುಕೊಳ್ಳುವುದನ್ನು ನಿಷೇಧಿಸಲಾಗಿದೆ.

3 ಸ್ನಾತಕೋತ್ತರ ವ್ಯಾಸಂಗಕ್ಕೆ ಹಾಜರಾದ ದಿನಾಂಕದಿಂದ ಪುನ: ನೇಮಕಾತಿ ಮಾಡಿದ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗುವ ದಿನಾಂಕದವರೆಗೆ ಅವರ ಹಕ್ಕಿನಲ್ಲಿರುವ ರಜೆ ಅಥವಾ ರಜೆ ಇಲ್ಲದಿದ್ದಲ್ಲಿ ಅಸಾಧಾರಣ ರಜೆ ಮಂಜೂರು ಮಾಡಿ ಈ ಅವಧಿಯನ್ನು ಸಕ್ರಮಗೊಳಿಸುವ ಬಗ್ಗೆ ಕ್ರಮ ತೆಗೆದುಕೊಳ್ಳುವಂತೆ ಆಯುಕ್ತರಿಗೆ ಸೂಚಿಸಿದೆ.

ಸದರಿ ವೈದ್ಯರು ನೇಮಕ ಮಾಡಿದ ಹುದ್ದೆಯಲ್ಲಿ ಹಾಜರಾಗಿ ಸಂಬಂಧಪಟ್ಟ ಎಲ್ಲರಿಗೂ ಸಿ.ಟಿ.ಸಿ. ಯನ್ನು ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಐ. ಹೇಮನಾಥ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

(ಸೇವೆಗಳು-1)

ಪಿಆರ್-785

INFORMATION TECHNOLOGY, BIO-TECHNOLOGY AND SCIENCE & TECHNOLOGY SECRETARIAT

Sub :- Global Investors Meet-2010 Constitution of Task Force for IT and BT Investment Promotion

Read :- Government Order No. ITD 60 ADM 2009, Dated 16-09-09

Preamble:

In the Government Order read above, the Task Force for IT and BT Investment Promotion has been constituted for planning co-ordinating, review and monitoring the various activities related to Global Investors Meet ' 2010 with the following members:-

1.	Hon'ble Minister for Housing BWSSB, Information IT & BT,	Chairman
2.	CMD Wipro	Member
3.	CMD Biocon	Member
4.	CEO Infosys	Member
5.	Chairman, ISA	Member
6.	President ABLE	Member
7.	Director STPI	Member
8.	CEO, Prestige Group	Member
9.	CEO, Embassy Group	Member
10.	Principal Secretary, C&I	Member
11.	Principal Secretary, UDD	Member
12.	Principal Secretary, e-Governance	Member
13.	Secretary, Revenue Department	Member
14.	Commissioner, BDA	Member
15.	Director, IT & BT	Member
16.	CEO, KIADB	Member
17.	MD, KUM	Member
18.	Regional Director, NASSCOM	Member
19.	Regional Director, MAIT	Member
20.	Sri Uday Garudachar	Member
21.	Principal Secretary, IT BT and S& T Dept,	Member, Secretary

It is considered necessary to nominate Sri Rajesh P. Chinchevadi BE Computer Science Gaduate, who has more than 17 years of experience in IT Industry and has served as Senior Manager in MNCs like HP, GE etc., and has also assisted the State Government in IT, BT event as programme advisor in Bangalore IT Biz 2009 as one more member of the above Task Force, Hence, the Order.

Government Order No. ITD 60 ADM 2009, Bangalore, dated : 17-03-2010

In the circumstances explained in the preamble Government are pleased to nominate "Sri Rajesh P. Chinchevadi BE Computer Science Graduate, # 73, 5th Cross, B.K. Residency, Gottigere, Bannerghatta Road, Bangalore -560083" as member of the Task Force for IT and BT Investment Promotion relating to Global Investors Meet 2010 constituted in the Government Order read above.

By Order and in the name of the Governor of Karnataka

(**M.V. Krishnamurthy)**
Under Secretary to Government
Department of Information Technology,
Bio-technology and Science & Technology

P.R. 786

COMMERCE AND INDUSTRIES SECRETARIAT

Sub: Constitution of State Level Co-ordination Committee for Administration of New Industrial Policy 2009-14

Read:
1. G.O.No: CI 121 SPC 1982 dated: 30.10.1982.
2. G.O.No: CI 146 SPC 1988 dated: 05.12.1998.
3. G.O.No: CI 167 SPC 2001 dated: 30.06.2001.
4. G.O.No: CI 231 SPI 2002 dated: 21.12.2002.
5. G.O.No: CI 424 SPI 2006 dated: 27.02.2007.
6. G.O.No: CI 233 SPI 2008 dated: 28.02.2009.
7. Commissioner's Letter dated: 15.02.2010.

Preamble:

State Level Co- ordination Committee for administering the Incentives and concessions package provided in the Industrial Policy had been constituted whenever New Industrial Policies were announced. The main objective was to facilitate the Proper interpretation of the policy and to give guidelines to Industries and department officers for implementation of package of Incentives and Concessions.

The Government has announced New Industrial Policy 2009-14 vide the Order read at (6) above.

The Commissioner for Industrial Development and Director of Industries and Commerce vide letter (7) above has requested the Government to reconstitute State Level Co-ordination Committee afresh for administration and interpretation of New Industrial Policy- 2009-14 and package of incentives and concessions.

Hence the following Order.

Government Order No. CI 99 SPI 2009, Bangalore, Dated the 18th March 2010

In the Circumstances explained in the preamble portion of the Order, Government is pleased to reconstitute the State Level Co-ordination Committee for administration and interpretation of New Industrial policy-2009-14 and package of incentives and concessions.

1.	The Principal Secretary, Commerce and Industries Department	-	Chairman
2.	The Secretary (SSI) Commerce and Industries Department	-	Member
3.	The Secretary of Government (Budget & Resources) Finance Department	-	Member
4.	The Comissioner for Commercial Taxes	-	Member
5.	The Managing Director , KSIIDC.	-	Member
6.	The Managing Director , KSFC.	-	Member
7.	The Commissioner for Industrial Development and Director of Industries And Commerce.	-	Member-Secretary
8.	Additional Secretary (Law Justice & Human rights)	-	Member
9.	The Director, (Technical cell), Commerce & Industries Department.	-	Member
10.	The joint Director, (ID) Directorate of Industries & Commerce	-	Member
11.	The Joint Director,(Technical Cell) Commerce & Industries Department.	-	Member

2. the Committee shall have the following terms of reference:

a. To administer the package of incentives and concessions announced in the New Industrial Policy 2009-14 as per G.O. No. CI 233 SPI 2008 dated 28.02.2009

b. To administer the Incentives Package granted to the Industries under the earlier policies.

c. To delegate such powers as deemed fit to the District Level Officers for administration of the Incentives package.

3. In all matters of doubt about the applicability of any part of the package of incentives to any industrial investment, the decision of the State Level co-ordination Committee shall be final.

4. The term of this Committee shall be valid for a period of 5 years with effect from 1st April 2009.

5. The Commissioner for Industrial Development and Director for Industries & Commerce shall with the prior approval of the State Level committee, separately issue a Manual of Procedures and Guidelines for the effective implementation of the Industrial policy-Incentives package.

By Order and in the name of the Governor of Karnataka,

PR. 809

(Aparna Pavate)
Desk Officer (Technical Cell)
Commerce & Industries Department.

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ವಿಷಯ : ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆಗಳ ಕಾಮಗಾರಿ ಅನುಷ್ಠಾನಕ್ಕಾಗಿ 2009–10 ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1) ಆಯುಕ್ತರು ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರವರ ಪತ್ರ ಸಂಖ್ಯೆ: ಡಿಎಸ್‌ಕೆ/ರಕರ/ಅನುದಾನ/3/2009–10 ದಿನಾಂಕ 19.06.2009.
2) ಸರ್ಕಾರದ ಆದೇಶ ಸಂಖ್ಯೆ: ವಾಕೈ 88 ಆಂಆಸ (1)2009 ದಿನಾಂಕ:22.4.2009.
3) ಸರ್ಕಾರದ ಆದೇಶ ಸಂಖ್ಯೆ: ಸಿಐ 147 ಎಸ್‌ಜಿಎಫ್ 2009,ದಿನಾಂಕ:28.07.2009.
4) ಆಯುಕ್ತರು ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರವರ ಪತ್ರ ಸಂಖ್ಯೆ : ಡಿಎಸ್ ಕೆ/ರಕರ/ಅನುದಾನ 3/2009–10ದಿನಾಂಕ 12–11–2009.

ಪ್ರಸ್ತಾವನೆ :

ರಾಜ್ಯದ ಈ ಕೆಳಕಂಡ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆ ಕಾಮಗಾರಿಗಳ ಅನುಷ್ಠಾನಕ್ಕಾಗಿ 2009–10ನೇ ಸಾಲಿನಲ್ಲಿ ಒದಗಿಸಲಾಗಿರುವ ರೂ.165/– ಲಕ್ಷಗಳನ್ನು ಬಿಡುಗಡೆಗೊಳಿಸಲು ಸಕ್ಕರೆ ನಿರ್ದೇಶಕರು ಮೇಲೆ ಓದಲಾದ ಉಲ್ಲೇಖ (1)ರ ದಿನಾಂಕ 19.06.2009 ಪತ್ರದಲ್ಲಿ ಪ್ರಸ್ತಾಪಿಸಿರುತ್ತಾರೆ.

(ರೂ.ಲಕ್ಷಗಳಲ್ಲಿ)

ಕ್ರ.ಸಂ.	ಕಾರ್ಖಾನೆಯ ಹೆಸರು	ವರ್ಷ	ಮೊತ್ತ	ಕಿ.ಮೀ.
1	ಹಿರಣ್ಯಕೇಶಿ ಸ.ಸ.ಕಾ, ಸಂಕೇಶ್ವರ	1999–2000	43.40	15.00
2	ಶ್ಯಾಮನೂರು ಶುಗರ್ಸ್, ದುಗ್ಗಾವತಿ	2000–2001	0.21	–
3	ಶ್ರೀ ರೇಣುಕಾ ಶುಗರ್ಸ್, ಮನೋಳಿ	2000–2001	62.40	32.00
4	ದಾವಣಗೆರೆ ಶುಗರ್ಸ್, ಕುಕ್ಕವಾಡ	2000–2001	7.13	4.00
5	ಬೀದರ್ ಸ.ಸ.ಕಾ, ಹಳ್ಳಿಖೇಡ್ (ಒಟ್ಟು ಮೊತ್ತ. ರೂ 93.92 ರಲ್ಲಿ ರೂ. 51.86ನ್ನು ಭಾಗಶಃ ಬಿಡುಗಡೆಗೆ ಕೋರಿದ್ದಾರೆ)	2000–2001	51.86	10.00
	ಒಟ್ಟು		165.00	61.00

ಮೇಲೆ ಓದಲಾದ (2)ರ ಆದೇಶದಲ್ಲಿ 2009-10 ನೇ ಸಾಲಿಗೆ ಈ ಉದ್ದೇಶಕ್ಕಾಗಿ ರೂ. 165.00 ಲಕ್ಷಗಳ ಅನುದಾನವನ್ನು ಇಲಾಖೆಯ ಲೆಕ್ಕ ಶೀರ್ಷಿಕೆ 4860-04-800-0-01 ರಸ್ತೆಗಳು 172 (ಯೋಜನೆ) ಅಡಿಯಲ್ಲಿ ಒದಗಿಸಲಾಗಿದೆ. ಸದರಿ ಹಣ ಬಿಡುಗಡೆ ಮಾಡಲು ಸಕ್ಕರೆ ನಿರ್ದೇಶಕರು ಉಲ್ಲೇಖ (1) ರಲ್ಲಿನ ದಿನಾಂಕ: 19-06.2009ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ (3)ರಲ್ಲಿರುವ ದಿನಾಂಕ 28.07.2009ರ ಸರ್ಕಾರಿ ಆದೇಶದಲ್ಲಿ 2009-10ನೇ ಸಾಲಿನಲ್ಲಿ ಒದಗಿಸಲಾಗಿದ್ದ ರೂ.165.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಾಗಿ ರೂ.41.25 ಲಕ್ಷಗಳನ್ನು ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಕಾಮಗಾರಿಗಳಿಗೆ ಆದ್ಯತೆ ಮೇಲೆ ಬಿಡುಗಡೆಮಾಡುವ ಸಲುವಾಗಿ ಆಯುಕ್ತರು ಕಬ್ಬು ಅಭಿವೃದ್ಧಿರವರಿಗೆ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4) ರಲ್ಲಿರುವ ಆಯುಕ್ತರು ಕಬ್ಬು ಅಭಿವೃದ್ಧಿ ರವರ ದಿನಾಂಕ 12.11.2009ರ ಪತ್ರದಲ್ಲಿ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ 2009-10ನೇ ಸಾಲಿನಲ್ಲಿ ಒದಗಿಸಲಾಗಿರುವ 165.00 ಲಕ್ಷ ರೂ.ಗಳಲ್ಲಿ ಬಾಕಿ ಉಳಿದಿರುವ 123.75 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಆಯುಕ್ತರು ಕಬ್ಬು ಅಭಿವೃದ್ಧಿರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಐ 147 ಎಸ್‌ಜಿಎಫ್ 2009 (2) ಬೆಂಗಳೂರು, ದಿನಾಂಕ: 9.03.2010

ಆಯುಕ್ತರು,ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಪ್ರಸ್ತಾವನೆಯಲ್ಲಿ ಕೋರಿರುವಂತೆ ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಬರುವ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕ್ರಿಯಾ ಯೋಜನೆಯನ್ನು ಕಾರ್ಯಗತಗೊಳಿಸಲು 2009-10 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 4860-04-800-0-01-ರಸ್ತೆಗಳು 172 (ಯೋಜನೆ) ಅಡಿಯಲ್ಲಿ ಒದಗಿಸಲಾಗಿರುವ ರೂ.165.00 ಲಕ್ಷಗಳ ಅನುದಾನದಲ್ಲಿ ರೂ.41.25 ಲಕ್ಷಗಳನ್ನು ಮೇಲೆ ಓದಲಾದ (3)ರ ಆದೇಶದಲ್ಲಿ ಈಗಾಗಲೇ ಬಿಡುಗಡೆಗೊಳಿಸಲಾಗಿದ್ದು, ಬಾಕಿ ಉಳಿದಿರುವ ರೂ. 123.75 ಲಕ್ಷಗಳನ್ನು (ಒಂದು ನೂರ ಇಪ್ಪತ್ತ ಮೂರು ಲಕ್ಷ ಎಪ್ಪತ್ತೈದು ಸಾವಿರ ರೂ.ಗಳು ಮಾತ್ರ) ಪ್ರಸ್ತಾವನೆಯಲ್ಲಿ ನಮೂದಿಸಿರುವ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡುವ ಸಲುವಾಗಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ರವರಿಗೆ ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ370/ವೆಚ್ಚ-1/2010, ದಿನಾಂಕ 12.03.2010 ರಲ್ಲಿ ನೀಡಲಾದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 810

(ಪಿ. ಆನಂದ್ ಕುಮಾರ್)
ಪೀಠಾಧಿಕಾರಿ (ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು ತುಂಗಾ ನದಿಯಿಂದ ಮಹೀಷಿ ಮತ್ತು ಹೆದ್ದೂರು ಗ್ರಾಮಗಳಿಗೆ ಏತ ನೀರಾವರಿ ಯೋಜನೆ ಕಾಮಗಾರಿಯ ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಸನೀಇ 10 ನಯೋಕಾ 2007, ದಿನಾಂಕ : 13.05.2008.
2. ದಿನಾಂಕ 29.01.2010ರ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರುರವರ ಪತ್ರದ ಸಂಖ್ಯೆ: ಮುಸದ/ತಾಂ.3/ಸಇಂ.8/ಶಿವಮೊಗ್ಗ/ಇ-ಟೆಂಡರ್/2009-10/304
3. ದಿ:02.02.2010.ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ 24.02.2010ರ ಪತ್ರ ಸಂಖ್ಯೆ: ಮುಸದ/ ಆಪ್ತ ಶಾಖೆ/ ಟೆಂಡರ್/08-09/660

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಹೆಚ್ಚಿನ ಆತ್ಮಹತ್ಯೆಗಳು ವರದಿಯಾಗಿರುವ ಜಿಲ್ಲೆಗಳಲ್ಲಿ ರೈತರ ಪುನರ್ವಸತಿಗಾಗಿ ವಿಶೇಷ ಪ್ಯಾಕೇಜಿನಡಿ ರೂ.9036.00 ಲಕ್ಷ ಮೊತ್ತದಲ್ಲಿ 162 ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು ಈ ಪೈಕಿ ಅಂದಾಜು ಮೊತ್ತದ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು, ತುಂಗಾ ನದಿಯಿಂದ ಮಹೀಷಿ ಗ್ರಾಮಕ್ಕೆ ಏತ ನೀರಾವರಿ ಯೋಜನೆ ನಿರ್ಮಾಣ ಕಾಮಗಾರಿಯ ರೂ.81.00 ಲಕ್ಷ ಮೊತ್ತದ ಹಾಗೂ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು ತುಂಗಾ ನದಿಯಿಂದ ಹೆದ್ದೂರು ಗ್ರಾಮಕ್ಕೆ ಏತ ನೀರಾವರಿ ಯೋಜನೆಯ ರೂ.81.50 ಲಕ್ಷ ಅಂದಾಜಿನ 2 ಕಾಮಗಾರಿಗಳು ಸೇರಿರುತ್ತವೆ. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರುರವರು ಕ್ರಮವಾಗಿ

ನೋಂದಣಿ ಸಂಖ್ಯೆ 366/2009–10ರಲ್ಲಿ ಹಾಗೂ ನೋಂದಣಿ ಸಂಖ್ಯೆ 377/2009–10ರಲ್ಲಿ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಶಿವಮೊಗ್ಗ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರಕ್ಯೂರ್‌ಮೆಂಟ್ ಮುಖಾಂತರ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	ದಿನಾಂಕ:16.10.2009
ಡೆಕ್ಕನ್ ಹೆರಾಲ್ಡ್ ದಿನ ಪತ್ರಿಕೆ	ದಿನಾಂಕ:22.10.2009
ವಿಜಯ ಕರ್ನಾಟಕ ದಿನ ಪತ್ರಿಕೆ	ದಿನಾಂಕ:23.10.2009

ಈ ಟೆಂಡರ್ ಕರೆಗೆ ಪ್ರತಿಕ್ರಿಯಿಸಿ 2 ಜನ ಗುತ್ತಿಗೆದಾರರು ಇ– ಪ್ರಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಭರಿಸಿರುವುದಾಗಿ ವರದಿಯಾಗಿದೆ. ಈ ಪೈಕಿ ಒಬ್ಬ ತಾಂತ್ರಿಕ ಬಿಡ್‌ಗಳನ್ನು ದಿನಾಂಕ 09.07.2009 ರಂದು ತೆರೆದಿದ್ದು ಇದರಲ್ಲಿ ಒಬ್ಬ ಗುತ್ತಿಗೆದಾರರು ಮಾತ್ರ ತಾಂತ್ರಿಕ ಬಿಡ್‌ಗಳನ್ನು ಸಲ್ಲಿಸಿರುವುದಾಗಿ ದಿನಾಂಕ 21.11.2009 ರಂದು ತಾಂತ್ರಿಕ ಬಿಡ್‌ಗಳು ತೆರೆದಾಗ ತಿಳಿದು ಬಂದಿರುವುದಾಗಿ ವರದಿಯಾಗಿದೆ. ಸದರಿ ಗುತ್ತಿಗೆದಾರರು ಅರ್ಹರೆಂದು ಪರಿಗಣಿಸಿ ಇವರ ಆರ್ಥಿಕ ಬಿಡ್‌ಗಳನ್ನು ತೆರೆದಿರುತ್ತಾರೆ. ಇವರ ಟೆಂಡರ್‌ನ್ನು ದಿನಾಂಕ 16.12.2009 ರಂದು ತೆರೆಯಲಾಗಿದ್ದು ವಿವರಗಳು ಕೆಳಕಂಡಂತಿವೆ.

ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕೃತ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ			ರೂ 1,47,40,933/–	
ಸಿಮೆಂಟ್ ಮತ್ತು ಉಕ್ಕಿನ ಪ್ರಸಕ್ತ ಮಾರುಕಟ್ಟೆ ದರಗಳನ್ನು ಪರಿಗಣಿಸಿದಂತೆ ಪರಿಷ್ಕೃತ ಟೆಂಡರಿಗೆ ಇಡಲಾದ ಮೊತ್ತ			ರೂ 1,47,40,933/–	
1	ಎಸ್.ಕೆ. ಧರ್ಮೇಶ್, 1ನೇ ದರ್ಜೆ ಗುತ್ತಿಗೆದಾರರು	1,75,66,558/–	19.17 ಹೆಚ್ಚು	19.17 ಹೆಚ್ಚು

ಮೇಲ್ಕಂಡಂತೆ ಏಕೈಕ ಅರ್ಹ ಟೆಂಡರ್‌ದಾರರಾದ ಶ್ರೀ ಎಸ್ ಕೆ ಧರ್ಮೇಶ್, 1ನೇ ದರ್ಜೆ ಗುತ್ತಿಗೆದಾರರು ಇವರು ನಮೂದಿಸಿರುವ ದರಗಳಂತೆ ಟೆಂಡರ್ ಮೊತ್ತವು ರೂ. 1,75,66,558/– ಗಳಾಗಿದ್ದು ಇದನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಗಣಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.19.17ರಷ್ಟು ಹೆಚ್ಚಾಗಿರುತ್ತದೆ. ಸದರಿಯವರ ಟೆಂಡರ್‌ನ್ನು ಸಂದಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಮುಖ್ಯ ಇಂಜಿನಿಯರ್‌ರವರು ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 30.01.2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಮಂಜೂರಾದ ಅಂದಾಜಿನ ದರಗಳ ಹಾಗೂ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳಿಗೆ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,47,40,933/–ಗಳ ಮೇಲೆ ಶೇಕಡಾ 14.00 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ.1,68,04,664/– ಗಳಿಗೆ ಕಾಮಗಾರಿಯನ್ನು ಶ್ರೀ ಎಸ್.ಕೆ, ಧರ್ಮೇಶ್ ಒಂದನೇ ದರ್ಜೆ ಗುತ್ತಿಗೆದಾರರು. ಇವರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 3ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ .

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 05 ಏನೀಯೋ 2010, ಬೆಂಗಳೂರು, ದಿನಾಂಕ: 15ನೇ ಮಾರ್ಚ್ 2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು ತುಂಗಾ ನದಿಯಿಂದ ಮಹೀಷಿ ಮತ್ತು ಹೆದ್ದೂರು ಗ್ರಾಮಗಳಿಗೆ ಏತ ನೀರಾವರಿ ಯೋಜನೆ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳಿಗೆ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,47,40,933/– ಗಳ ಮೇಲೆ ಶೇಕಡ 14.00 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ.1,68,04,664/– ಗಳಿಗೆ (ಒಂದು ಕೋಟಿ ಅರವತ್ತೆಂಟು ಲಕ್ಷ ನಾಲ್ಕು ಸಾವಿರದ ಆರುನೂರ ಅರವತ್ತನಾಲ್ಕು ರೂ.ಗಳು

ಮಾತ್ರ) ಶ್ರೀ ಎಸ್.ಕೆ. ಧರ್ಮೇಶ್, ಒಂದನೇ ದರ್ಜೆ ಗುತ್ತಿಗೆದಾರರು. ಇವರಿಗೆ ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002 ದಿನಾಂಕ 20/01/2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.811

(ಕೆ. ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಶ್ರೀ ಮುರುಘಾಮಠ, ಚಿತ್ರದುರ್ಗ ಇಲ್ಲಿ ವಸ್ತು ಸಂಗ್ರಹಾಲಯದ ಸ್ಥಾಪನೆಗೆ ಸರ್ಕಾರದಿಂದ ಧನ ಸಹಾಯ ಮಾಡುವ ಬಗ್ಗೆ.

ಓದಲಾಗಿದೆ :
1. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರ ದಿನಾಂಕ: 15-09-2009 ಪತ್ರ ಸಂಖ್ಯೆ: ಡಿಎಎಂ:ಇಎಸ್‌ಟಿ.3ಧನ ಸಹಾಯ: 2009-10/39.
2. ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 219 ಕೆಎಂಯು 2008, ದಿನಾಂಕ: 11-12-2009.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಸನಿ:13:ಹೊ.ಯೋ2009-10, ದಿನಾಂಕ 10-02-2010.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ: 15-09-2009ರ ಪತ್ರದಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು, ಇವರು ಶ್ರೀ ಶಿವಮೂರ್ತಿಮುರುಘಾ ಶರಣರು ಶ್ರೀ ಮುರುಘಾ ಮಠ, ಚಿತ್ರದುರ್ಗ, ಇವರು ಚಿತ್ರದುರ್ಗದಲ್ಲಿ ಪ್ರಾದೇಶಿಕ ಹಾಗೂ ಸ್ಥಳೀಯ ವಸ್ತುಸಂಗ್ರಹಾಲಯ ಸ್ಥಾಪಿಸಲು ರೂ. 5,36,50,000-00ಗಳ ಪ್ರಸ್ತಾವನೆ ಸಲ್ಲಿಸಿದ್ದು ಇದರಲ್ಲಿ ರೂ 3.00 ಕೋಟಿಗಳನ್ನು ಪ್ರಾರಂಭಿಕ ಮೊತ್ತವಾಗಿ ಬಿಡುಗಡೆ ಮಾಡಲು ಕೋರಿರುತ್ತಾರೆಂದು ತಿಳಿಸಿ, ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 11-12-2009ರ ಸರ್ಕಾರಿ ಆದೇಶದಲ್ಲಿ ಚಿತ್ರದುರ್ಗದ ಶ್ರೀ ಮುರುಘಾ ಮಠದಲ್ಲಿ ವಸ್ತುಸಂಗ್ರಹಾಲಯ ಸ್ಥಾಪಿಸಲು ಹಾಗೂ ಪ್ರಾಚ್ಯವಸ್ತುಗಳ ಪ್ರದರ್ಶನಕ್ಕಾಗಿ ವಿಶೇಷ ಪ್ರಕರಣವೆಂದು ಪರಿಗಣಿಸಿ ರೂ. 100.00 ಲಕ್ಷಗಳ ಸಹಾಯಾನುದಾನವನ್ನು ಅಧ್ಯಕ್ಷರು, ಶ್ರೀ ಮುರುಘಾ ಮಠ, ಚಿತ್ರದುರ್ಗ, ಇವರಿಗೆ ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರಿಗೆ ಮಂಜೂರಾತಿ ನೀಡಲಾಗಿತ್ತು.

ಮೇಲೆ (3)ರಲ್ಲಿ ಓದಲಾದ ದಿ: 10-02-2010ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರು ದಿನಾಂಕ 11-12-2009ರ ಸರ್ಕಾರದ ಆದೇಶದಲ್ಲಿ ನಮೂದಿಸಿದ ಲೆಕ್ಕಶೀರ್ಷಿಕೆಯು ಬೇರೆ ಇಲಾಖೆಗೆ ಸಂಬಂಧಿಸಿದ್ದು ಅದರಿಂದ ಹಣ ಡ್ರಾ ಮಾಡಲು ಸಾಧ್ಯವಾಗುವುದಿಲ್ಲವೆಂದು ತಿಳಿಸಿರುತ್ತಾರೆ. ಮತ್ತು ಲೆಕ್ಕಶೀರ್ಷಿಕೆ 2205-00-800-0-07-059 (ಯೋಜನೆ) ಯಡಿ ಮಂಜೂರು ಮಾಡಲು ಪತ್ರ ಬರೆದಿರುತ್ತಾರೆ. ಆರ್ಥಿಕ ಇಲಾಖೆಗೆ ಕಡತ ಕಳುಹಿಸಿ ಲೆಕ್ಕಶೀರ್ಷಿಕೆಯನ್ನು ಸೂಚಿಸಲು ಕೋರಲಾಗಿತ್ತು. ಅದರ ಪ್ರಕಾರ ಆರ್ಥಿಕ ಇಲಾಖೆ, ಲೆಕ್ಕಶೀರ್ಷಿಕೆ 2205-00-102-4-31-059 (ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ) ಇದರಡಿಯಲ್ಲಿ ಬಿಡುಗಡೆ ಮಾಡಲು ಸಹಮತಿ ನೀಡಿರುತ್ತಾರೆ. ಆದುದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 219 ಕೆಎಂಯು 2008 ಬೆಂಗಳೂರು, ದಿನಾಂಕ : 20–03–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮುರುಘಾ ಮಠ ಚಿತ್ರದುರ್ಗ ಇಲ್ಲಿ ವಸ್ತು ಸಂಗ್ರಹಾಲಯ ಸ್ಥಾಪಿಸಲು ಸರ್ಕಾರದ ಸಹಾಯಾನುದಾನವಾಗಿ ರೂ. 100.00 ಲಕ್ಷ (ರೂ. ಒಂದು ನೂರು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರಿಗೆ ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205–00–102–4–31–059 (ಕನ್ನಡ ಮತ್ತು ಸಂಸ್ಕೃತಿಗೆ ಪ್ರೋತ್ಸಾಹ) ಇದರಡಿಯಲ್ಲಿ ಭರಿಸತಕ್ಕದ್ದು. ಸದರಿ ಸಂಸ್ಥೆಯಿಂದ ಹಣ ಉಪಯೋಗದ ಬಗ್ಗೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರು ಹಣಬಳಕೆ ಪತ್ರವನ್ನು ಪಡೆದು ಸರ್ಕಾರಕ್ಕೆ ಸಲ್ಲಿಸುವುದು ಮತ್ತು ಸಮರ್ಪಕ ಹಣ ಬಳಕೆಯ ಬಗ್ಗೆ ನಿರ್ದೇಶಕರು, ಜವಾಬ್ದಾರರಾಗಿರುತ್ತಾರೆ. ದಿನಾಂಕ: 11–12–2009ರ ಸರ್ಕಾರಿ ಆದೇಶ ಸಂಖ್ಯೆ ಕಸಂವಾಪ್ರ 219 ಕೆಎಂಯು 2008ನ್ನು ಆ ದಿನಾಂಕದಿಂದಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 990 ವೆಚ್ಚ–7/2009 ದಿನಾಂಕ: 19–03–2010ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 823

ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು
ಪ್ರವಾಸೋದ್ಯಮ ಇಲಾಖೆ (ಆಡಳಿತ ಕನ್ನಡ)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಕನ್ನಡ ಭವನದ ಚಾಲುಕ್ಯ ವಿಭಾಗದ ಲಿಫ್ಟ್‌ನ ವಾರ್ಷಿಕ ನಿರ್ವಹಣಾ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅವರ ಪತ್ರ ಸಂಖ್ಯೆ ಕಸನಿ/10/ನಯನ/ಲಿಫ್ಟ್/2009–10, ದಿನಾಂಕ: 10–02–2010.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 10–02–2010ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಕನ್ನಡ ಭವನದ ಚಾಲುಕ್ಯ ವಿಭಾಗದಲ್ಲಿ ಅಳವಡಿಸಿರುವ ಲಿಫ್ಟ್‌ನ ಸಂಸ್ಥೆಯಾದ ಮೆ.. ಒ.ಟಿ.ಪಿ.ಎಸ್. ಎಲಿವೇಟರ್ ಬೆಂಗಳೂರು ಇವರ ವಾರ್ಷಿಕ ನಿರ್ವಹಣಾ ಅವಧಿ ದಿನಾಂಕ 01–09–2009ಕ್ಕೆ ಮುಗಿದಿದ್ದು ದಿನಾಂಕ 01–10–2009ರಿಂದ 30–09–2010ರ ವರೆಗೆ ಲಿಫ್ಟ್‌ನ ವಾರ್ಷಿಕ ನಿರ್ವಹಣಾ ವೆಚ್ಚ ರೂ. 61.534–00 ಗಳನ್ನು ಪಾವತಿಸಬೇಕಾಗಿದೆ. ಸದರಿ ಲಿಫ್ಟ್‌ನ ನಿರ್ವಹಣೆಯು ಅತ್ಯವಶ್ಯಕವಾಗಿರುತ್ತದೆ. ಆದುದರಿಂದ ದಿನಾಂಕ: 01–10–2009 ರಿಂದ 30–09–2010ರ ವರೆಗೆ ಲಿಫ್ಟ್‌ನ ವಾರ್ಷಿಕ ನಿರ್ವಹಣೆಯನ್ನು ಮೆ.. ಒ.ಟಿ.ಪಿ.ಎಸ್. ಎಲಿವೇಟರ್ ಬೆಂಗಳೂರು ಇವರಿಗೆ ನಿರ್ವಹಿಸಲು ಅನುಮತಿ ನೀಡಿ ಈ ಸಂಬಂಧವಾಗಿ ಸದರಿ ಸಂಸ್ಥೆಗೆ ಪಾವತಿಸಲು ರೂ. 61,534–00ಗಳನ್ನು ಬಿಡುಗಡೆ ಮಾಡಿ ಸರ್ಕಾರದ ಆದೇಶವನ್ನು ಹೊರಡಿಸಬೇಕಾಗಿ ವಿನಂತಿಸಿರುತ್ತಾರೆ. ಈ ವೆಚ್ಚವನ್ನು ಪ್ರಸಕ್ತ ಸಾಲಿನ ಲೆಕ್ಕ ಶೀರ್ಷಿಕೆ 4202–04–800–1–01–139 (ಯೋಜನೆ) ನಯನ ರಂಗಮಂದಿರ ನಿರ್ವಹಣೆಗಾಗಿ ನಿಗದಿಪಡಿಸಲಾದ ಮೊತ್ತದಲ್ಲಿ ಭರಿಸಬಹುದಾಗಿದೆ ಎಂದು ತಿಳಿಸಿರುತ್ತಾರೆ.

ಕನ್ನಡ ಭವನದ ಚಾಲುಕ್ಯ ವಿಭಾಗದ ಲಿಫ್ಟ್‌ನ ದಿನಾಂಕ 01–10–2009 ರಿಂದ 30–09–2010ರ ವರೆಗಿನ ವಾರ್ಷಿಕ ನಿರ್ವಹಣೆಯನ್ನು ಮೆ.. ಒ.ಟಿ.ಪಿ.ಎಸ್. ಎಲಿವೇಟರ್, ಬೆಂಗಳೂರು. ಇವರಿಗೆ ವಹಿಸಲು ಹಾಗೂ ಸದರಿ ಸಂಸ್ಥೆಗೆ ವಾರ್ಷಿಕ ನಿರ್ವಹಣೆಯ ವೆಚ್ಚ ರೂ. 61.534–00 ಗಳನ್ನು ಪಾವತಿಸಲು ಸರ್ಕಾರವು ತೀರ್ಮಾನಿಸಿ, ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರಿ ಆದೇಶ ಸಂಖ್ಯೆ : ಕಸಂವಾಪ್ರ 27 ಕಸನಿ 2010, ಬೆಂಗಳೂರು, ದಿನಾಂಕ : 15–03–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೆಂಗಳೂರು ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ಚಾಲುಕ್ಯ ವಿಭಾಗದಲ್ಲಿ ಅಳವಡಿಸಿರುವ ಲಿಫ್ಟ್‌ನ ಸಂಸ್ಥೆಯಾದ ಮೆ.. ಒ.ಟಿ.ಪಿ.ಎಸ್. ಎಲಿವೇಟರ್ ಬೆಂಗಳೂರು ಇವರಿಗೆ ದಿನಾಂಕ 01–10–2009 ರಿಂದ 30–09–2010 ರವರೆಗೆ ಲಿಫ್ಟ್‌ನ ವಾರ್ಷಿಕ ನಿರ್ವಹಣೆಯನ್ನು ವಹಿಸಲು ಹಾಗೂ ಈ ಸಂಬಂಧ ತಗಲುವ ವೆಚ್ಚ ರೂ. 61.534–00 (ರೂಪಾಯಿ ಅರವತ್ತೊಂದು ಸಾವಿರದ ಐದುನೂರ ಮೂವತ್ತಾನಾಲ್ಕು ಮಾತ್ರ)

ಗಳನ್ನು ಪಾವತಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ಮಂಜೂರಾತಿಯನ್ನು ಈ ಕೆಳಕಂಡ ಷರತ್ತಿನೊಂದಿಗೆ ನೀಡಿದೆ.

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ. 1999 ಹಾಗೂ ಅದರ ನಿಯಮಗಳು 2000ದ ಪ್ರಕಾರ ಕ್ರಮವಹಿಸುವುದು.
2. ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

ಈ ಮೊತ್ತವನ್ನು 2009-10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 4202-04-800-1-01-139 (ಯೋಜನೆ) ಪ್ರಧಾನ ಕಾಮಗಾರಿಗಳಡಿಯಲ್ಲಿ ನಿಗದಿಪಡಿಸಿರುವ ರೂ. 50.00 ಲಕ್ಷಗಳ ಅನುದಾನದ ಮೊತ್ತದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಶಿಇ 449 ಐಎಫ್(ಬಿ ಮತ್ತು ಎ) 2010. ದಿನಾಂಕ 05-03-2010ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 825

ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು
ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಸರ್ಕಾರಿ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರ ಶಾಲೆ, ಇಲ್ಲಿ ಅಳವಡಿಸಿರುವ ಪ್ಯಾಸೆಂಜರ್ ಲಿಫ್ಟ್‌ಗೆ ಕೆಲವೊಂದು ಉಪಕರಣಗಳನ್ನು ಆಳವಡಿಸಲು ಹಾಗೂ ವಾರ್ಷಿಕ ನಿರ್ವಹಣೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು: ಇವರ ಪತ್ರ ಸಂಖ್ಯೆ: ಡಿಎಎಂ:ಇಎಸ್‌ಟಿ:3: ಲಿಫ್ಟ್ ನಿರ್ವಹಣೆ: 2009-10/61, ದಿನಾಂಕ: 01-03-2010.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 01-03-2010ರ ಪತ್ರದಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಇವರು ಪ್ರಸ್ತಾವನೆ ಸಲ್ಲಿಸಿ, ಸರ್ಕಾರಿ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರ ಶಾಲೆ, ಇಲ್ಲಿ ಅಳವಡಿಸಿರುವ ಪ್ಯಾಸೆಂಜರ್ ಲಿಫ್ಟ್‌ಗೆ ಕೆಲವೊಂದು ಉಪಕರಣಗಳನ್ನು ಅಳವಡಿಸಲು ಹಾಗೂ ವಾರ್ಷಿಕ ನಿರ್ವಹಣೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ. ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯ ಅಧೀನ ಕಛೇರಿಯಾದ ಸರ್ಕಾರಿ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರ ಶಾಲೆ, ಬೆಂಗಳೂರು ಇಲ್ಲಿ ಅಳವಡಿಸಿರುವ ಪ್ಯಾಸೆಂಜರ್ ಲಿಫ್ಟ್ ತಾಂತ್ರಿಕ ತೊಂದರೆಯಿಂದ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲವಾದ ಕಾರಣ ಸರ್ಕಾರಿ ವಸ್ತು ಸಂಗ್ರಹಾಲಯಕ್ಕೆ ಬರುವ ಸಾರ್ವಜನಿಕರು ಹಾಗೂ ಅಂಗವಿಕಲರ ವೀಕ್ಷಕರಿಗೆ ಮೇಲಿನ ಅಂತಸ್ತಿಗೆ ಹೋಗಲು ತೊಂದರೆಯಾಗುತ್ತಿದೆ ಎಂದು ತಿಳಿಸಿ ಉಪಕರಣಗಳನ್ನು ಅಳವಡಿಸಲು ಹಾಗೂ ವಾರ್ಷಿಕ ನಿರ್ವಹಣೆಗೆ ಸೇರಿದಂತೆ ಒಟ್ಟಾರೆ ಅಂದಾಜು ರೂ. 1.98 ಲಕ್ಷಗಳಾಗುತ್ತದೆ ಎಂದು ತಿಳಿಸಿರುವರು. ಅಲ್ಲದೆ ಲೆಕ್ಕಶೀರ್ಷಿಕೆ 2205-00-107-0-01 (ಯೋಜನೆ) 059-ಇತರೆ ಖರ್ಚುಗಳಡಿಯಲ್ಲಿ ನೀಡಿರುವ ಅನುದಾನ ರೂ. 20.00 ಲಕ್ಷಗಳಲ್ಲಿ ಸದರಿ ವೆಚ್ಚವನ್ನು ಭರಿಸಲಾಗುವುದೆಂದು ತಿಳಿಸಿರುವರು.

ಇದನ್ನು ಪರಿಶೀಲಿಸಿದ ಸರ್ಕಾರವು ಸರ್ಕಾರಿ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರಶಾಲೆ, ಇಲ್ಲಿ ಆಳವಡಿಸಿರುವ ಪ್ಯಾಸೆಂಜರ್ ಲಿಫ್ಟ್‌ಗೆ ಕೆಲವೊಂದು ಉಪಕರಣಗಳನ್ನು ಅಳವಡಿಸಲು ಹಾಗೂ ವಾರ್ಷಿಕ ನಿರ್ವಹಣೆಗೆ ರೂ. 1.98 ಲಕ್ಷ ಹಣವನ್ನು ಖರ್ಚು ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಕಸಂವಾಪ್ರ 55 ಕೆಎಂಯು 2010, ಬೆಂಗಳೂರು, ದಿನಾಂಕ : 19–03–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರಿ ವಸ್ತು ಸಂಗ್ರಹಾಲಯ ಮತ್ತು ವೆಂಕಟಪ್ಪ ಚಿತ್ರ ಶಾಲೆ, ಇಲ್ಲಿ ಅಳವಡಿಸಿರುವ ಪ್ಯಾಸೆಂಜರ್ ಲಿಫ್ಟ್‌ಗೆ ಕೆಲವೊಂದು ಉಪಕರಣಗಳನ್ನು ಅಳವಡಿಸಲು ಹಾಗೂ ವಾರ್ಷಿಕ ನಿರ್ವಹಣೆಗೆ ರೂ. 1.98 ಲಕ್ಷ (ರೂ. ಒಂದು ಲಕ್ಷ ತೊಂಬತ್ತೆಂಟು ಸಾವಿರ ಮಾತ್ರ) ಹಣವನ್ನು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ ಇವರಿಗೆ ಮಂಜೂರು ಮಾಡಿ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಅದರಡಿ ನಿಯಮಾವಳಿಗಳು 2000ಕ್ಕನುಗುಣವಾಗಿ ಕ್ರಮ ತೆಗೆದುಕೊಳ್ಳುವ ಷರತ್ತಿಗೊಳಪಟ್ಟ ಆಡಳಿತಾತ್ಮಕ ಅನುಮೊದನೆ ನೀಡಲಾಗಿದೆ.

ಈ ಮೊತ್ತವನ್ನು 2009–10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205–00–107–0–01 (ಯೋಜನೆ) 059 ಇತರೆ ಖರ್ಚುಗಳಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ಇವರ ಟಿಪ್ಪಣಿ ಸಂಖ್ಯೆ: ಶಿಇ 611 ಐಎಫ್(ಬಿ ಮತ್ತು ಎ) 2010. ದಿನಾಂಕ 19–03–2010ರಲ್ಲಿ ಸಹಮತಿಯನ್ನು ಪಡೆದು ಹಾಗೂ ಇಲಾಖಾ ಕಾರ್ಯದರ್ಶಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10–07–96ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 826

ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು
ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಮದ್ದೂರು ತಾಲ್ಲೂಕು ಶಿವಪುರ ಸತ್ಯಾಗ್ರಹ ಸೌಧದ ಮತ್ತು ಆವರಣದಲ್ಲಿರುವ ಕಾಮಗಾರಿಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ.

ಉಲ್ಲೇಖ : ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ಇವರ ಪತ್ರ ಸಂಖ್ಯೆ: ಎಂಎಸ್‌ಸಿ(2)67/1999–2000, ದಿನಾಂಕ 26–08–2009.

ಪ್ರಸ್ತಾವನೆ :

2009–10ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಮದ್ದೂರು ತಾಲ್ಲೂಕು ಶಿವಪುರ ಸತ್ಯಾಗ್ರಹ ಸೌಧದ ಮತ್ತು ಆವರಣದಲ್ಲಿರುವ ಕಾಮಗಾರಿಗಳನ್ನು ಅಭಿವೃದ್ಧಿ ಮಾಡಲಾಗುವುದೆಂದು ಘೋಷಣೆ ಮಾಡಿರುತ್ತಾರೆ.

ಮೇಲೆ ಓದಲಾದ ದಿನಾಂಕ 26–08–2009ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ಇವರು ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕು ಶಿವಪುರ ಸತ್ಯಾಗ್ರಹ ಸೌಧದ ಮತ್ತು ಆವರಣದಲ್ಲಿರುವ ಕಾಮಗಾರಿಗಳನ್ನು ಅಭಿವೃದ್ಧಿ ಮಾಡಲು ರೂ. 600.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಿ ಈ ಹಿಂದೆಯೇ ಅನುಮೋದನೆ ನೀಡಲು ಕೋರಲಾಗಿತ್ತು. ರಾಜ್ಯ ಬಜೆಟ್‌ನಲ್ಲಿ ರೂ. 2.00 ಕೋಟಿಗಳ ಅನುದಾನವನ್ನು ಮಾತ್ರ ಮೀಸಲಿಟ್ಟಿದ್ದು ತಾವು ದೂರವಾಣಿ ಮೂಲಕ ನೀಡಿದ ನಿರ್ದೇಶನದಂತೆ ರೂ. 160.00 ಲಕ್ಷಗಳಿಗೆ ಪರಿಷ್ಕೃತ ಅಂದಾಜು ಪಟ್ಟಿಯನ್ನು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಮಂಡ್ಯ ಇವರಿಂದ ಪಡೆಯಲಾಗಿದ್ದು ಈ ಮೊತ್ತದಲ್ಲಿ ಸತ್ಯಾಗ್ರಹ ಸೌಧ ಕಟ್ಟಡದ ಅಭಿವೃದ್ಧಿ ಕಾಮಗಾರಿಗಳಾದ ಕಾಂಪೌಂಡು ನಿರ್ಮಾಣ, ಅನೆಕ್ಸ್ ಕಟ್ಟಡ ಪೂರಕ ಕಾಮಗಾರಿ. ಉದ್ಯಾನವನ ಅಭಿವೃದ್ಧಿ, ಶೌಚಾಲಯ ದುರಸ್ತಿ, ಸತ್ಯಾಗ್ರಹ ಸೌಧದ ದುರಸ್ತಿ ಹಾಗೂ ಇತರೆ ಕಾಮಗಾರಿಗಳನ್ನು ಕೈಗೊಳ್ಳಬೇಕಾಗಿರುವುದರಿಂದ ರೂ. 160.00 ಲಕ್ಷಗಳನ್ನು ಬಿಡುಗಡೆ ಮಾಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕೆಂದು ಕೋರಿರುತ್ತಾರೆ.

ಮದ್ದೂರು ತಾಲ್ಲೂಕು ಶಿವಪುರದ ಸತ್ಯಾಗ್ರಹ ಸೌಧದ ಮತ್ತು ಆವರಣದಲ್ಲಿರುವ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ರೂ. 100.00 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಕಸಂವಾಪ್ರ 57 ಸಾಪ್ರನಿ 2009, ಬೆಂಗಳೂರು, ದಿನಾಂಕ : 15–03–2010

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮದ್ದೂರು ತಾಲ್ಲೂಕು ಶಿವಪುರ ಸತ್ಯಾಗ್ರಹ ಸೌಧದ ಮತ್ತು ಆವರಣದಲ್ಲಿರುವ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ರೂ. 1.00 ಕೋಟಿಗಳನ್ನು ಜಿಲ್ಲಾಧಿಕಾರಿಗಳು,

ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಬಿಡುಗಡೆ ಮಾಡಿದೆ ಹಾಗೂ ಈ ಕಾಮಗಾರಿಯನ್ನು ರೂ. 1.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಷರತ್ತುಗಳು:

1) ಕಾಮಗಾರಿಯ ಅಂದಾಜು ಪಟ್ಟಿಗೆ ಸಕ್ಷಮ ಪ್ರಾಧಿಕಾರದಿಂದ/ತಾಂತ್ರಿಕ ಅನುಮೋದನೆಯನ್ನು ಪಡೆದು ಕಾಮಗಾರಿ ಕೈಗೊಳ್ಳುವುದು.
2) ಕಾಮಗಾರಿಯನ್ನು ಟೆಂಡರ್ ಕರೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000ರಂತೆ ಕಾಮಗಾರಿ ಕೈಗೊಂಡು ನಂತರ ಪ್ರಗತಿ ಆಧರಿಸಿ, ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುವುದು.
3) ಕಾಮಗಾರಿಯನ್ನು ಪೂರ್ಣಗೊಳಿಸಲು ಸಮಯ ನಿಗಧಿ ಪಡಿಸಿಕೊಂಡು ಆ ಸಮಯದೊಳಗೆ ಪೂರ್ಣಗೊಳಿಸುವುದು.
4) ಕಾಮಗಾರಿಯನ್ನು ಜಿಲ್ಲಾದಿಕಾರಿಗಳು, ಮಂಡ್ಯ ಜಿಲ್ಲೆ ಇವರ ಮೇಲುಸ್ತುವಾರಿಯಲ್ಲಿ ಕೈಗೊಳ್ಳುವುದು.
5) ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ. 1.00 ಕೋಟಿಗಳಿಗೆ ನಿಗದಿಪಡಿಸಿಕೊಳ್ಳುವುದು.
6) ಪ್ರಗತಿ ಆಧರಿಸಿ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುವುದು.
7) ಹಣ ಬಳಕೆ ಪ್ರಮಾಣ ಪತ್ರ ಪಡೆಯುವುದು.

ಈ ಅನುದಾನವನ್ನು 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-102-4-31 (ಕನ್ನಡ ಮತ್ತು ಸಂಸ್ಕೃತಿಗೆ ಉತ್ತಾಹ) ಇದರಡಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ 22-10-2009ರ ಟಿಪ್ಪಣಿ ಸಂಖ್ಯೆ: ಆಇ 982 ವೆಚ್ಚ-7 2009 ರಲ್ಲಿ ಆರ್ಥಿಕ ಇಲಾಖೆಯ ಸಹಮತಿಯನ್ನು ಹಾಗೂ ದಿನಾಂಕ: 04-03-2010ರ ಟಿಪ್ಪಣಿ ಸಂಖ್ಯೆ: ಯೋಇ/76/ಜಶ/2009 ರಲ್ಲಿ ಯೋಜನಾ ಇಲಾಖೆಯ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 827

ಎಂ.ಕೆ. ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು
ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಇಂಧನ ಸಚಿವಾಲಯ

ವಿಷಯ : ಮೆ.. ಫೋಟಾನ್ ಎನರ್ಜಿ ಸಿಸ್ಟಮ್ಸ್ ಲಿಮಿಟೆಡ್ ಕಂಪನಿಗೆ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಯಗಚಿ ಕಿರು ಜಲ ವಿದ್ಯುತ್ ಯೋಜನೆಯನ್ನು ಮರು ಹಂಚಿಕೆ ಮಾಡಿರುವುದನ್ನು ದೃಢೀಕರಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ: ಡಿಇ 66 ಎನ್‌ಸಿಇ 2001 (1) ದಿನಾಂಕ: 29-11-2001.
2. ಸರ್ಕಾರಿ ಆದೇಶ ಸಂಖ್ಯೆ: ಡಿಇ 66 ಎನ್‌ಸಿಇ 2001 (2) ದಿನಾಂಕ: 29-11-2001.
3. ಸರ್ಕಾರಿ ಆದೇಶ ಸಂಖ್ಯೆ: ಡಿಇ 66 ಎನ್‌ಸಿಇ 2001 (3) ದಿನಾಂಕ: 29-11-2001.
4. ಸರ್ಕಾರಿ ಆದೇಶ ಸಂಖ್ಯೆ: ಡಿಇ 120 ಎನ್‌ಸಿಇ 2001 ದಿನಾಂಕ: 30-11-2001.
5. ಸರ್ಕಾರಿ ಆದೇಶ ಸಂಖ್ಯೆ: ಇಎನ್ 357 ಎನ್‌ಸಿಇ 2005 ದಿನಾಂಕ: 1-7-2006.
6. ಸರ್ಕಾರಿ ಆದೇಶ ಸಂಖ್ಯೆ: ಇಎನ್ 58 ಎನ್‌ಸಿಇ 2007 ದಿನಾಂಕ: 3-9-2007.
7. ಘನ ಉಚ್ಚನ್ಯಾಯಾಲಯದ ಆದೇಶ ದಿನಾಂಕ: 29-6-2009.
8. ದಿನಾಂಕ: 6-02-2010ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ಆದೇಶದಲ್ಲಿ ಮೆ: ಫೋಟಾನ್ ಎನರ್ಜಿ ಸಿಸ್ಟಮ್ಸ್‌ರವರಿಗೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಸಂಪೆಕಟ್ಟೆ ಗ್ರಾಮದ ಬಳಿ 3.5 ಮೆ.ವ್ಯಾ. ಸಾಮರ್ಥ್ಯದ (2 x 1.75 MW) ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಮೆ: ಫೋಟಾನ್ ಎನರ್ಜಿ ಸಿಸ್ಟಮ್ಸ್‌ರವರಿಗೆ ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲ್ಲೂಕಿನ ಹೊಸಹೊಳಲು ಗ್ರಾಮದ ಬಳಿ 0.5 ಮೆ.ವ್ಯಾ. ಸಾಮರ್ಥ್ಯದ (1 x 500 KW) ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಮೆ: ಫೋಟಾನ್ ಎನರ್ಜಿ ಸಿಸ್ಟಮ್ಸ್ ಲಿಮಿಟೆಡ್ ಕಂಪನಿಗೆ ಹಾಸನ ಜಿಲ್ಲೆಯ ಬೇಲೂರು ಪಟ್ಟಣ (water from Irrigation canal of Yagachi river) ಬಳಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ಮೆ: ಮಾರುತಿ ಪವರ್ ಜೆನ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ಚಿಕ್ಕಬ್ಯಾಡಗೆರೆ ಎಂಬಲ್ಲಿ ಯಗಚಿ ಬ್ರ್ಯಾಂಚ್ ಕೆನಾಲ್‌ಗೆ ಅಡ್ಡಲಾಗಿ 0.8 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆದೇಶದಲ್ಲಿ ಮೆ: ಫೋಟಾನ್ ಎನರ್ಜಿ ಸಿಸ್ಟಮ್ಸ್ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆಯಾಗಿದ್ದ ಈ ಕೆಳಗಿನ 3 ಯೋಜನೆಗಳನ್ನು ರದ್ದುಪಡಿಸಲಾಗಿತ್ತು;–

ಕ್ರಮ ಸಂಖ್ಯೆ	ಯೋಜನೆಯ ಸ್ಥಳ	ಯೋಜನೆಯ ಸಾಮರ್ಥ್ಯ (ಮೆಗಾ ವ್ಯಾಟ್‌ನಲ್ಲಿ)
1.	ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಸಂಪೆಕಟ್ಟೆ ಗ್ರಾಮದ ಬಳಿ	3.5
2.	ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲ್ಲೂಕಿನ ಹೊಸಹೊಳಲು ಗ್ರಾಮದ ದೊಡ್ಡಕೆರೆ	0.5
3.	ಹಾಸನ ಜಿಲ್ಲೆಯ ಬೇಲೂರು ಪಟ್ಟಣದ ಯಗಚಿ ನದಿಯ ನೀರಾವರಿ ಕಾಲುವೆ ನೀರನ್ನು ಉಪಯೋಗಿಸಿಕೊಂಡು	1.00

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ದಿನಾಂಕ: 3–9–2007ರ ಆದೇಶದಲ್ಲಿ ಮೆ: ಮಾರುತಿ ಪವರ್ ಜೆನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಸರ್ಕಾರಿ ಆದೇಶ ಸಂಖ್ಯೆ: ಡಿಇ120 ಎನ್‌ಸಿಇ 2001 ದಿನಾಂಕ: 30–11–2001ರಲ್ಲಿ ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ಚಿಕ್ಕಬ್ಯಾಡಗೆರೆ ಎಂಬಲ್ಲಿ ಯಗಚಿ ಬ್ರ್ಯಾಂಚ್ ಕೆನಾಲ್‌ಗೆ ಅಡ್ಡಲಾಗಿ ಹಂಚಿಕೆ ಮಾಡಲಾದ 0.8 ಮೆಗಾ ವ್ಯಾಟ್ ಸಾಮರ್ಥ್ಯದ ಯಗಚಿ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸಲಾಗಿತ್ತು ಹಾಗೂ ಮೆ: ಫೋಟಾನ್ ಎನರ್ಜಿ ಸಿಸ್ಟಮ್ಸ್ ಲಿಮಿಟೆಡ್ ಕಂಪನಿಗೆ ಹಾಸನ ಜಿಲ್ಲೆಯ ಬೇಲೂರು ಟೌನ್ (ಯಗಚಿ ನದಿಯ ನೀರಾವರಿ ಕಾಲುವೆಯ ನೀರಿನಿಂದ)ನಲ್ಲಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಯಗಚಿ ಕಿರು ಜಲ ವಿದ್ಯುತ್ ಯೋಜನೆಯನ್ನು ಮರು ಹಂಚಿಕೆ ಮಾಡಲಾಗಿತ್ತು.

ಮೆ: ಮಾರುತಿ ಪವರ್ ಜೆನ್ (ಇಂಡಿಯಾ) ಲಿಮಿಟೆಡ್‌ರವರು ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 16502/2007ನ್ನು ದಾಖಲಿಸಿ, ಈ ಕೆಳಕಂಡ ಕೋರಿಕೆಯನ್ನು ಸಲ್ಲಿಸಿದ್ದರು:–

"i) quash the impugned order of the 1st respondent at Annexure-F dated 3-9-2007 in No. EN 58 NCE 2007 as illegal by issuing a writ of certiorari;

ii) direct the 1st respondent to restore the Order of Annexure-A passed by the 1st respondent in No.DE 120 NCE 2001, dated 30-11-2001 by issuing a writ of Mandamus; and xxxxxxx"

ಸದರಿ ರಿಟ್ ಅರ್ಜಿಯು ದಿನಾಂಕ: 18–08–2008 ರಂದು ಇತ್ಯರ್ಥವಾಗಿದ್ದು. ಈ ಕೆಳಕಂಡಂತೆ ಆದೇಶವಾಗಿದೆ:–

"(a) Writ Petition is allowed.
(b) The impugned Order is hereby quashed.
(c) Similarly, the allotments made in favour of both the persons are also quashed. The authorities are directed to consider both the application of the petitioner and the third
(d) Respondent afresh in accordance with law and then allot the project to any one of them.

(e) No costs.

ಘನ ಉಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಸದರಿ ವಿಷಯವನ್ನು ದಿನಾಂಕ: 13–01–2009ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಹಂಚಿಕೆ ಸಮಿತಿ ಸಭೆಯ ನಿರ್ಣಯ ಈ ಕೆಳಕಂಡಂತಿದೆ:–

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ : 23-03-10 ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 20,098,536-00ಗಳ ಮೇಲೆ ಶೇಕಡ 6.36 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 21,36,279-00 ಗಳಿಗೆ ಕಾಮಗಾರಿಯನ್ನು ಶ್ರೀ ಅಶೋಕ ಎಸ್. ಶೆಟ್ಟಿ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2 ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 25 ಏನೀಯೋ 2010, ಬೆಂಗಳೂರು, ದಿನಾಂಕ : 24ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲೆ, ಹಾನಗಲ್ ತಾಲ್ಲೂಕಿನ ಶೇಷಗಿರಿ ಗ್ರಾಮದ ಹತ್ತಿರ ಏತ ನೀರಾವರಿ ಯೋಜನೆ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿ ಹಾಗೂ ಪ್ರಸಕ್ತ ಸಾಲಿನ ದರಪಟ್ಟಿಯಂತೆ ಪರಿಷ್ಕರಿಸಿದ ಟೆಂಡರಿಗೆ ಇಡಲಾದ ಮೊತ್ತ ರೂ. 20,08,5236-00 ಗಳ ಮೇಲೆ ಶೇಕಡ 6.36 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 21,36,279-00 ಗಳಿಗೆ (ಇಪ್ಪತ್ತೊಂದು ಲಕ್ಷದ ಮೂವತ್ತಾರು ಸಾವಿರದ ಇನ್ನೂರ ಎಪ್ಪತ್ತೊಂಭತ್ತು ರೂ. ಗಳು ಮಾತ್ರ) ಶ್ರೀ ಅಶೋಕ ಎಸ್. ಶೆಟ್ಟಿ, 1ನೇ ದರ್ಜೆ ಗುತ್ತಿಗೆದಾರರಿಗೆ ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಅರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.855

ಕೆ.ಸುಧಾಕರ ಶೆಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಾಗಲಕೋಟೆ ಜಿಲ್ಲೆ, ಹುನಗುಂದ ತಾಲ್ಲೂಕು, ಮಲಪ್ರಭಾ ನದಿಗೆ ಅಡ್ಡಲಾಗಿ ಹಡಗಲಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಅದೇಶ ಸಂಖ್ಯೆ: ಸನೀಇ 06 ನಯೋಕಾ 2009, ದಿನಾಂಕ : 06–01–2010.
2. ಪತ್ರ ಸಂಖ್ಯೆ : ಮುಇಂ/ಸನೀ(ಉ) ವಲಯ/ಬಿಜೆಪಿ/ಎಇ–6/2009–10/1857, ದಿನಾಂಕ : 23–03–10
3. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರ ಪತ್ರ ಸಂಖ್ಯೆ : ಮುಸದ/ಆಪ್ತಶಾಖೆ/ಟೆಂಡರ್/ 09–10, ದಿನಾಂಕ : 23–03–10.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 06–01–10ರ ಸರ್ಕಾರದ ಆದೇಶದಲ್ಲಿ ಆರ್.ಐ.ಡಿ.ಎಫ್–15ರಡಿ ಆಡಳಿತಾತ್ಮಕ ಅನುಮೋದನೆ ನೀಡಿರುವ 385 ಕಾಮಗಾರಿಗಳ ಪೈಕಿ 300.00 ಲಕ್ಷ ರೂ.ಗಳ ಅಂದಾಜಿನ ಬಾಗಲಕೋಟೆ ಜಿಲ್ಲೆ, ಹುನಗುಂದ ತಾಲ್ಲೂಕಿನ ಮಲಪ್ರಭಾ ನದಿಗೆ ಅಡ್ಡಲಾಗಿ ಹಡಗಲಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಕಾಮಗಾರಿಯು ಸಹ ಒಂದಾಗಿದ್ದು, ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	ದಿ : 28–02–2010
ವಿಜಯ ಕರ್ನಾಟಕ ದಿನ ಪತ್ರಿಕೆ	ದಿನಾಂಕ : 18–02–2010

ಈ ಟೆಂಡರ್ ಕರೆಗೆ ಪ್ರತಿಕ್ರಿಯಿಸಿ ಒಬ್ಬ ಗುತ್ತಿಗೆದಾರರು ಮಾತ್ರ ನಿಗದಿತ ದಿನದಂದು ಇ–ಟೆಂಡರಿಂಗ್ ಮೂಲಕ ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸಿರುತ್ತಾರೆ. ಸ್ವೀಕರಿಸಲಾದ ಇವರ ತಾಂತ್ರಿಕ ಬಿಡ್ ಅರ್ಹವಾಗಿದ್ದರಿಂದ, ಇವರ ಆರ್ಥಿಕ ಬಿಡ್‌ನ್ನು ದಿನಾಂಕ : 11–03–10 ರಂದು ತೆರೆಯಲಾಗಿದೆ. ಆರ್ಥಿಕ ಬಿಡ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳ ವಿವರ ಕೆಳಕಂಡಂತಿದೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 2,64,08,595/–
ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಟೆಂಡರಿಗೆ ಇಡಲಾದ ಮೊತ್ತ	ರೂ. 2,66,82,598/–

ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ	ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ
1	ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು	ರೂ. 3,06,60,435/–	16.10 ಹೆಚ್ಚು	14.91 ಹೆಚ್ಚು

ಮೇಲ್ಕಂಡಂತೆ ಶ್ರೀ ಜಿ. ಮಸ್ತಾನಚ್ಯು, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಚಿತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 14.91 ರಷ್ಟು ಹೆಚ್ಚಾಗಿದ್ದು. ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ : 23–03–2010 ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಪ್ಹೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 2,66,82,598–00ಗಳ ಮೇಲೆ ಶೇಕಡ 12.75ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 3,00,84,629–00 ಗಳಿಗೆ ಕಾಮಗಾರಿಯನ್ನು ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 3 ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಚುಲ್ಲಿ ಸರ್ಕಾರವು ಈ ಕೆಳಕಂಡಂತೆ ಅದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 15 ಅಪಿಬಂ 2010, ಬೆಂಗಳೂರು, ದಿನಾಂಕ : 24ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆ, ಹುನಗುಂದ ತಾಲ್ಲೂಕು, ಮಲಪ್ರಭಾ ನದಿಗೆ ಅಡ್ಡಲಾಗಿ ಹಡಗಲಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿಯ ದರಗಳನ್ನು ಪ್ರಸಕ್ತ ಸಾಲಿನ ದರಪಟ್ಟಿಯಂತೆ ಪರಿಷ್ಕರಿಸಿ ಟೆಂಡರಿಗೆ ಇಡಲಾದ ಮೊತ್ತ ರೂ. 2,66,82,598–00 ಗಳ ಮೇಲೆ ಶೇಕಡ 12.75 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 3,00,84,629–00ಗಳಿಗೆ (ಮೂರು ಕೋಟಿ ಎಂಭತ್ತಾಲ್ಕು ಸಾವಿರದ ಆರುನೂರ ಇಪ್ಪತ್ತೊಂಭತ್ತು ರೂ.ಗಳು ಮಾತ್ರ) ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರಿಗೆ. ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಅರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ.ಸುಧಾಕರ ಶೆಟ್ಟಿ
ಸರ್ಕಾರದ ಉಪ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್.856

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ, ಇಂಡಿ ತಾಲ್ಲೂಕು, ದೊಡ್ಡ ಹಳ್ಳಕ್ಕೆ ಅಡ್ಡಲಾಗಿ ಶಿರಾಡೋಣ (ಸೈಟ್-2) ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಕುರಿತು.

ಓದಲಾಗಿದೆ :
1. ಸರ್ಕಾರದ ಅದೇಶ ಸಂಖ್ಯೆ: ಸನೀಇ 06 ನಯೋಕಾ 2009, ದಿನಾಂಕ : 06-01-2010.
2. ಪತ್ರ ಸಂಖ್ಯೆ : ಮುಇಂ/ಸನೀ(ಉ) ವಲಯ/ಬಿಜೆಪಿ/ಪಿಬಿ-9/ಶಿರಾಡೋಣ ಬ್ಯಾರೇಜ್/2009-10/1923, ದಿನಾಂಕ : 22/01-10
3. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಚಿಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರ ಪತ್ರ ಸಂಖ್ಯೆ : ಮುಸದ/ಆಪ್ತಶಾಖೆ/ಟೆಂಡರ್/ 09-10, ದಿನಾಂಕ : 23-03-10.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ದಿನಾಂಕ : 06-01-10ರ ಸರ್ಕಾರದ ಆದೇಶದಲ್ಲಿ ಆರ್.ಐ.ಡಿ.ಎಫ್-15ರಡಿ ಆಡಳಿತಾತ್ಮಕ ಅನುಮೋದನೆ ನೀಡಿರುವ 385 ಕಾಮಗಾರಿಗಳ ಪೈಕಿ 209.00 ಲಕ್ಷ ರೂ.ಗಳ ಅಂದಾಜಿನ ಬಿಜಾಪುರ ಜಿಲ್ಲೆ, ಇಂಡಿ ತಾಲ್ಲೂಕಿನ ದೊಡ್ಡ ಹಳ್ಳಕ್ಕೆ ಅಡ್ಡಲಾಗಿ ಶಿರಾಡೋಣ (ಸೈಟ್-2) ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಕಾಮಗಾರಿಯು ಸಹ ಒಂದಾಗಿದ್ದು, ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

1	ರಾಜ್ಯ ಟೆಂಡರ್ ಬುಲೆಟಿನ್	ದಿ : 04-03-2010
2	ವಿಜಯ ಕರ್ನಾಟಕ ದಿನ ಪತ್ರಿಕೆ ಮತ್ತು ಡೆಕ್ಕನ್ ಹೆರಾಲ್ಡ್ ದಿನಪತ್ರಿಕೆ	ದಿ : 06-03-2010

ಈ ಟೆಂಡರ್ ಕರೆಗೆ ಪ್ರತಿಕ್ರಿಯಿಸಿ ಇಬ್ಬರು ಗುತ್ತಿಗೆದಾರರು ಮಾತ್ರ ನಿಗದಿತ ದಿನದಂದು ಇ-ಟೆಂಡರಿಂಗ್ ಮೂಲಕ ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸಿರುತ್ತಾರೆ. ಸ್ವೀಕರಿಸಲಾದ ಇವರ ತಾಂತ್ರಿಕ ಬಿಡ್‌ಗಳನ್ನು ದಿನಾಂಕ : 15-03-10 ರಂದು ತೆರೆಯಲಾಗಿದ್ದು, ಅದರಲ್ಲಿ ಒಬ್ಬ ಗುತ್ತಿಗೆದಾರರು ಮಾತ್ರ ಅರ್ಹರೆಂದು ಪರಿಗಣಿಸಿ ಇವರ ಆರ್ಥಿಕ ಬಿಡ್‌ನ್ನು ದಿನಾಂಕ : 20-03-10ರಂದು ತೆರೆಯಲಾಗಿದೆ. ಆರ್ಥಿಕ ಬಿಡ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳ ವಿವರ ಕೆಳಕಂಡಂತಿದೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,55,84,477/-

ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ	ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ
1	ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು	ರೂ. 1,67,16,551/-	7.26 ಹೆಚ್ಚು	7.26 ಹೆಚ್ಚು

ಮೇಲ್ಕಂಡಂತೆ ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 7.26 ರಷ್ಟು ಹೆಚ್ಚಾಗಿದ್ದು.

ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ : 23–03–2010 ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಟೆಂಡರಿಗಿಡಲಾದ ಮೊತ್ತ ರೂ. 1,55,84,477–00ಗಳ ಮೇಲೆ ಶೇಕಡ 7.26ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,67,15,910–00 ಗಳಿಗೆ ಕಾಮಗಾರಿಯನ್ನು ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 3 ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 16 ಅಪಿಬಂ 2010, ಬೆಂಗಳೂರು, ದಿನಾಂಕ : 24ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆ, ಇಂಡಿ ತಾಲ್ಲೂಕಿನ ದೊಡ್ಡಹಳ್ಳಕ್ಕೆ ಅಡ್ಡಲಾಗಿ ಶಿರಾಡೋಣ (ಸೈಟ್–2) ಹತ್ತಿರ ಬ್ಯಾರೇಜ್ ನಿರ್ಮಾಣ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿಯ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ ರೂ. 1,55,84,477–00 ಗಳ ಮೇಲೆ ಶೇಕಡ 7.26 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,67,15,910–00 ಗಳಿಗೆ (ಒಂದು ಕೋಟಿ ಅರವತ್ತೇಳು ಲಕ್ಷದ ಹದಿನೈದು ಸಾವಿರದ ಒಂಬೈನೂರ ಹತ್ತು ರೂ.ಗಳು ಮಾತ್ರ) ಶ್ರೀ ಜಿ. ಮಸ್ತಾನಯ್ಯ, 1ನೇ ದರ್ಜೆ ಗುತ್ತಿಗೆದಾರರಿಗೆ. ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಅರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.857

ಕೆ.ಸುಧಾಕರ ಶೆಟ್ಟಿ
ಸರ್ಕಾರದ ಉಪ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಜಾಲಿಬೇರ ಏತ ನೀರಾವರಿ ಯೋಜನೆ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಕುರಿತು.

ಓದಲಾಗಿದೆ :
1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ರವರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜೆಪಿ/ಎಇ–6/2009–10/1336, ದಿನಾಂಕ : 06–03–2010.
2. ದಿನಾಂಕ : 19–03–2010ರಂದು ನಡೆದ ಟೆಂಡರ್ ಪರಿಶೀಲನಾ ಸಭೆಯ ನಡವಳಿ.

ಪ್ರಸ್ತಾವನೆ :

ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಜಾಲಿಬೇರ ಏತ ನೀರಾವರಿ ಯೋಜನೆ ಕಾಮಗಾರಿಯ 30.00 ಲಕ್ಷ ರೂ.ಗಳ ಅಂದಾಜು ಪಟ್ಟಿಗೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರಕ್ಯೂರ್‌ಮೆಂಟ್ ಮೂಲಕ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	ದಿ : 16–01–2010
ಕನ್ನಡ ಪ್ರಭ ದಿನ ಪತ್ರಿಕೆ	ದಿನಾಂಕ : 17–01–10

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಟ್ಟು ಒಬ್ಬರು ಗುತ್ತಿಗೆದಾರರು ಮಾತ್ರ ಖಾಲಿ ಟೆಂಡರ್ ಫಾರಂಗಳನ್ನು ಡೌನ್‌ಲೋಡ್ ಮಾಡಿಕೊಂಡದ್ದು ನಿಗಧಿತ ದಿನಾಂಕದಂದು ಸದರಿ ಗುತ್ತಿಗೆದಾರರು ಇ–ಟೆಂಡರಿಂಗ್ ಮೂಲಕ ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸಿರುತ್ತಾರೆ. ಇವರ ಟೆಂಡರ್‌ನ್ನು 28–01–10 ರಂದು ತೆರೆದು ಪರಿಶೀಲಿಸಲಾಗಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 28,55,784/–
ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಟೆಂಡರಿಗೆ ಇಡಲಾದ ಮೊತ್ತ	ರೂ. 23,82,180/–

ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ	ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ
1	ವ್ಹಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರು	ರೂ. 28,92,630/–	12.90 ಹೆಚ್ಚು	21.43 ಹೆಚ್ಚು

ಮೇಲ್ಕಂಡಂತೆ ಶ್ರೀ ವ್ಹಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 21.43 ರಷ್ಟು ಹೆಚ್ಚಾಗಿದ್ದು. ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ : 19–03–2010 ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 23,82,180–00ಗಳ ಮೇಲೆ ಶೇಕಡ 14ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 27,15,685–00 ಗಳಿಗೆ ಕಾಮಗಾರಿಯನ್ನು ಶ್ರೀ ವ್ಹಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2 ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಅದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 20 ಏನಿಯೋ 2010, ಬೆಂಗಳೂರು, ದಿನಾಂಕ : 20ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಜಾಲಿಬೇರ ಏತ ನೀರಾವರಿ ಯೋಜನೆ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿ ಹಾಗೂ ಪ್ರಸಕ್ತ ಸಾಲಿನ ದರಪಟ್ಟಿಯಂತೆ ಪರಿಷ್ಕರಿಸಿ ಟೆಂಡರಿಗೆ ಇಡಲಾದ ಮೊತ್ತ ರೂ. 23,82,180–00 ಗಳ ಮೇಲೆ ಶೇಕಡ 14 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 27,15,685–00ಗಳಿಗೆ (ಇಪ್ಪತ್ತೇಳು ಲಕ್ಷದ ಹದಿನೈದು ಸಾವಿರದ ಆರುನೂರ ಎಂಭತ್ತೈದು ರೂ.ಗಳು ಮಾತ್ರ) ಶ್ರೀ ವ್ಹಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರಿಗೆ. ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20-01-2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.858

ಕೆ.ಸುಧಾಕರ ಶೆಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಮಲ್ಲಾಪುರ ಏತ ನೀರಾವರಿ ಯೋಜನೆ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಕುರಿತು.

ಓದಲಾಗಿದೆ : 1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ರವರ ಪತ್ರ ಸಂಖ್ಯೆ : ಮುಇಂ/ಸನೀ(ಉ)ವ/ಬಿಜೆಪಿ/ಎಇ-6/2009-10/1310, ದಿನಾಂಕ : 05-03-2010.

2. ದಿನಾಂಕ : 19-03-2010ರಂದು ನಡೆದ ಟೆಂಡರ್ ಪರಿಶೀಲನಾ ಸಭೆಯ ನಡಾವಳಿ.

ಪ್ರಸ್ತಾವನೆ :

ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಮಲ್ಲಾಪುರ ಏತ ನೀರಾವರಿ ಯೋಜನೆ ಕಾಮಗಾರಿಯ 21.00 ಲಕ್ಷ ರೂ.ಗಳ ಅಂದಾಜು ಪಟ್ಟಿಗೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಬಿಜಾಪುರ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರಕ್ಯೂರ್‌ಮೆಂಟ್ ಮೂಲಕ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

1	ಜಿಲ್ಲಾ ಟೆಂಡರ್ ಬುಲೆಟಿನ್	ದಿ : 05-12-09
2	ಪ್ರಜಾವಾಣಿ ದಿನ ಪತ್ರಿಕೆ	ದಿ : 09-12-09

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಟ್ಟು ಇಬ್ಬರು ಗುತ್ತಿಗೆದಾರರು ಖಾಲಿ ಟೆಂಡರ್ ಫಾರಂಗಳನ್ನು ಡೌನ್‌ಲೋಡ್ ಮಾಡಿಕೊಂಡಿದ್ದು ನಿಗಧಿತ ದಿನಾಂಕದಂದು ಇಬ್ಬರೂ ಗುತ್ತಿಗೆದಾರರು ಇ-ಟೆಂಡರಿಂಗ್ ಮೂಲಕ ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸಿರುತ್ತಾರೆ. ಇವರ ಟೆಂಡರ್‌ನ್ನು 08-01-10 ರಂದು ತೆರೆದು ಪರಿಶೀಲಿಸಲಾಗಿದ್ದು ಅದರಲ್ಲಿ ಒಬ್ಬರು ಗುತ್ತಿಗೆದಾರರು ಮಾತ್ರ ಅರ್ಹರಾಗಿರುತ್ತಾರೆ. ವಿವರ ಕೆಳಕಂಡಂತಿದೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 16,47,832/-
ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಟೆಂಡರಿಗೆ ಇಡಲಾದ ಮೊತ್ತ	ರೂ. 16,47,390/-

ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡವಾರು ಹೆಚ್ಚಳ	ಪ್ರಸಕ್ತ ಸಾಲಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ
1	ವ್ಹಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರು	ರೂ. 17,29,763/-	4.97 ಹೆಚ್ಚು	5.002 ಹೆಚ್ಚು

ಮೇಲ್ಕಂಡಂತೆ ಶ್ರೀ ವಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 5.002 ರಷ್ಟು ಹೆಚ್ಚಾಗಿದ್ದು. ಸದರಿಯವರ ಟೆಂಡರ್‌ನ್ನು ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ : 19–03–2010 ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 16,47,390/–ಗಳ ಮೇಲೆ ಶೇಕಡ 4.95 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 17,28,936 ಗಳಿಗೆ ಕಾಮಗಾರಿಯನ್ನು ಶ್ರೀ ವಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2 ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಅದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 22 ಏನಿಯೋ 2010, ಬೆಂಗಳೂರು, ದಿನಾಂಕ : 20ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕು, ಮಲ್ಲಾಪುರ ಏತ ನೀರಾವರಿ ಯೋಜನೆ ಕಾಮಗಾರಿಯ ಮಂಜೂರಾದ ಅಂದಾಜು ಪಟ್ಟಿ ಹಾಗೂ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿದಾಗ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 16,47,290/–ಗಳ ಮೇಲೆ ಶೇಕಡ 4.95ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 17,28,936ಗಳಿಗೆ (ಹದಿನೇಳು ಲಕ್ಷದ ಇಪ್ಪತ್ತೆಂಟು ಸಾವಿರದ ಒಂಬೈನೂರ ಮೂವತ್ತಾರು ರೂ.ಗಳು ಮಾತ್ರ) ಶ್ರೀ ವಿ. ಎಂ. ಹೆಬ್ಬಾಳ, 1ನೇ ದರ್ಜೆ ಗುತ್ತಿಗೆದಾರರಿಗೆ. ಕಾಮಗಾರಿಯನ್ನು ಕೆಳಕಂಡ ಷರತ್ತುಗಳೊಂದಿಗೆ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.859

ಕೆ.ಸುಧಾಕರ ಶೆಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಮೈಸೂರು ಸಕ್ಕರೆ ಕಾರ್ಖಾನೆ (ನಿ) ಇದರ ಪುನಃಶ್ಚೇತನಕ್ಕೆ ಸರ್ಕಾರದಿಂದ ಆರ್ಥಿಕ ನೆರವು– 2009–10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಹಣದ ಬಿಡುಗಡೆ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ : ಸಿಐ 70 ಎಸ್‌ಜಿಎಫ್ 2009 ದಿನಾಂಕ : 03–08–2009
2. ಸರ್ಕಾರದ ಆದೇಶ ಸಂಖ್ಯೆ : ಸಿಐ 70 ಎಸ್‌ಜಿಎಫ್ 2009 (2) ದಿನಾಂಕ : 15–02–2010
3. ವ್ಯವಸ್ಥಾಪಕ ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಸಕ್ಕರೆ ಕಾರ್ಖಾನೆರವರ ಪತ್ರ ಸಂಖ್ಯೆ : ಎಂಎಸ್‌ಕೋ/ಎಂಡಿ/3010 ದಿನಾಂಕ : 25–02–2010.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿರುವ ಸರ್ಕಾರದ ಅದೇಶದಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯ ಪುನಃಶ್ಚೇತನಕ್ಕಾಗಿ ರೂ. 10.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (2) ರಲ್ಲಿರುವ ಸರ್ಕಾರದ ಆದೇಶದಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯ ಪುನಃಶ್ಚೇತನ ಸಂಬಂಧ ಬಂಡವಾಳ ಹೂಡಿಕೆಗಾಗಿ ರೂ. 5.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3) ರಲ್ಲಿರುವ ವ್ಯವಸ್ಥಾಪಕ ನಿರ್ದೇಶಕರು ಮೈಸೂರು ಸಕ್ಕರೆ ಕಾರ್ಖಾನೆ ರವರ ಪತ್ರದಲ್ಲಿ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಯೋಜನಾ ವೆಚ್ಚವನ್ನು 50.00 ಕೋಟಿ ರೂ.ಗಳ ಬದಲಿಗೆ 79.30 ಕೋಟಿ ರೂ.ಗಳಿಗೆ ಹೆಚ್ಚಿಸುವಂತೆ ವರದಿ ಮಾಡಿ 2009–10ನೇ ಸಾಲಿನ ಆಯವ್ಯಯದಲ್ಲಿ ಕಾರ್ಖಾನೆಯ ಪುನಃಶ್ಚೇತನಕ್ಕಾಗಿ ಒದಗಿಸಲಾಗಿರುವ 50.00 ಕೋಟಿ ರೂ.ಗಳ ಅನುದಾನದಲ್ಲಿ ಬಿಡುಗಡೆಗೊಂಡು ಬಾಕಿ ಉಳಿದಿರುವ ಹಣವನ್ನು ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರ ಪ್ರಸ್ತಾವನೆಯನ್ನು ಕುಲಂಕಷವಾಗಿ ಪರಿಶೀಲಿಸಿ 2009–10ನೇ ಸಾಲಿನ ಅನುದಾನದಲ್ಲಿ ಒದಗಿಸಲಾಗಿರುವ 50.00 ಕೋಟಿ ರೂ.ಗಳಲ್ಲಿ ಕಾರ್ಖಾನೆಯ ಸಹ ವಿದ್ಯುತ್ ಘಟಕದ ಕೆಲಸಗಳಿಗಾಗಿ 5.00 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಐ 70 ಎಸ್‌ಜಿಎಫ್ 2009, (3), ಬೆಂಗಳೂರು, ದಿನಾಂಕ : 26ನೇ ಮಾರ್ಚ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಸಕ್ಕರೆ ಕಾರ್ಖಾನೆ (ನಿ), ಮಂಡ್ಯ ಈ ಕಾರ್ಖಾನೆಗೆ 2009–10ನೇ ಸಾಲಿಗೆ ಕಾರ್ಖಾನೆಯ ಪುನಃಶ್ಚೇತನ ಸಂಬಂಧ ಸಹ ವಿದ್ಯುತ್ ಘಟಕದ ಕೆಲಸಗಳಿಗಾಗಿ 5.00 ಕೋಟಿ ರೂ.ಗಳನ್ನು (ಐದು ಕೋಟಿ ರೂ.ಗಳು ಮಾತ್ರ) ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

2009–10ನೇ ಸಾಲಿನ ಅನುದಾನದಲ್ಲಿ ಕಾರ್ಖಾನೆಯ ಪುನಃಶ್ಚೇತನ ಸಂಬಂಧ ಲೆಕ್ಕ ಶೀರ್ಷಿಕೆ "4852–02–190–0–04 (ಯೋಜನೆ) 211 – ಹೂಡಿಕೆ" ಅಡಿಯಲ್ಲಿ ಒದಗಿಸಲಾಗಿರುವ 50.00 ಕೋಟಿ ರೂ.ಗಳಲ್ಲಿ ಮೂರನೆಯ ಕಂತು 5.00 ಕೋಟಿ ರೂ.ಗಳನ್ನು ಬಿಡುಗಡೆಗೆ ಮಂಜೂರು ಮಾಡಲಾಗಿದೆ.

ಹಣ ಸೆಳೆಯುವ ಅಧಿಕಾರಿಯು ಸಹಾಯಕ ನಿರ್ದೇಶಕರು (ಹೆಚ್.ಆರ್.ಡಿ ಆಡಳಿತ ಮತ್ತು ಇಎಂ) ಜಿಲ್ಲಾ ಕೈಗಾರಿಕಾ ಕೇಂದ್ರ ಮಂಡ್ಯ, ಆಗಿದ್ದು ಸದರಿಯವರು ಹಣ ಸೆಳೆಯುವ ಬಿಲ್ಲನ್ನು ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಬೆಂಗಳೂರು ಇವರ ಮೇಲು ಸಹಿಯೊಂದಿಗೆ ಖಜಾನೆಗೆ ಸಲ್ಲಿಸಬೇಕು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಎಫ್‌ಡಿ 500 ವೆಚ್ಚ–1/2010 ದಿನಾಂಕ : 23–03–2010ರಲ್ಲಿ ನೀಡಲಾದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.860

ಪಿ. ಆನಂದಕುಮಾರ್
ಪೀಠಾಧಿಕಾರಿ (ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

COMMERCE & INDUSTRIES SECRETARIAT

Sub :- Approval to the Project Proposal of M/s Posco India Pvt Ltd., to setup 6 MTPA Finex Steel Plant & 400 MW Captive Power Plant.

Read :- Proceedings of the 20th State High Level Clearance Committee (SHLCC) meeting held on 05-01-2010.

Preamble:

M/s Posco India Pvt. Ltd., proposes to establish 6 MTPA Finex Steel Plant & 400 MW Captive Power Plant. with an investment of Rs. 32,336 crores, generating employment to about 20,000 persons.

In the 20TH State High Level Clearance Committee meeting (SHLCC) held on 05-01-2010 the proposal of Company has been approved.

Government has examined the recommendations made by the State High Level Clearance Committee in the 20TH meeting held on 05-01-2010, in all aspects.

Hence the following order.

Government Order No. CI 49 SPI 2010 Bangalore, dated : 19-02-2010

Government is pleased to accord in principle approval for the project proposal of M/s Posco India Pvt. Ltd., to establish 6 MTPA Finex Steel Plant & 400 MW Captive Power Plant, with an investment of Rs. 32,336 crores, generating employment to about 20,000 persons and extend the following infrastructure facilities, incentives and concessions.

INFRASTRUCTURE FACILITIES:-

1. **Land:** 5000 acres to be acquired and allotted by KIADB
2. **Power:** 184 MW to be serviced by GESCOM.
3. **Water:** 44MGD from nearest source.
4. **Incentives and Concessions**: Special incentives and concessions will be considered separately.

General Terms and Conditions:

1. **MOU:** The project proponents will have to sign a MOU with the Government of Karnataka during the Global Investors Meet in June 2010.
2. **Environment :** The promoters to obtain CFE and CFO from the KSPCB and environmental clearance from MOEF, GOI.
3. **Employment:** The Company shall prepare a plan for development of Human Resources required for the project, train local people and provide employment to these trained local youth and comply with Government policy of Employment to local people i.e., Dr. Sarojini Mahishi report. A copy of Human Resources Development plan shall be sent to the Commissioner for ID. & Director of Industries and Commerce for monitoring.
4. **Vendor Development:** wherever there is scope for vendor development for the project, the company shall prepare a vendor development plan, develop local vendors and procure the required inputs, components and sub assemblies from these local vendor units. A copy of the vendor development plan shall be sent to the Commissioner for I.D. & Director of Industries and Commerce for monitoring.
5. **Social Infrastructure Development**: The Company is advised to take up social infrastructure development projects in the vicinity of the proposed location of the unit. A copy of such projects shall be sent to the Commissioner for I.D. & Director of Industries and Commerce for monitoring.
6. **Others :**

   a) The project proponents shall provide employment to at least one member of the family of each land looser as the land is being acquired through KIADB.

   b) The project proponents shall adopt rain water harvesting, waste water recycling and water conservation techniques. Zero discharge facility should be adopted wherever applicable.

   c) The promoters shall take all statutory and other necessary clearances from the competent authorities including GOI and shall submit milestone/progress in implementation of the project regularly, which will be monitored by the Department.

   This approval is valid for a period of two years from the date of issue.

By Order and in the name of the Governor of Karnataka

(**Aparna Pavate**)

Desk Officer (Technical cell)

Commerce and Industries Department

P.R. 501

COMMERCE & INDUSTRIES SECRETARIAT

Sub :- Approval to the Project Proposal of M/s Gail (India) Ltd., to lay Transportation of Natural Gas pipeline from Dabhol (Maharashtra) to Bangalore via Belgaum covering a total distance of 870 kms in many districts.

Read :- Proceedings of the 20TH State High Level Clearance Committee (SHLCC) meeting held on 05-01-2010.

Preamble:

M/s Gail (India) Ltd., proposes to lay Transportation of Natural Gas pipeline from Dabhol (Maharashtra) to Bangalore via Belgaum covering a total distance of 870 kms in many districts. with an investment of Rs. 4544 crores, generating employment to about 770 persons.

In the 20 TH State High Level Clearance Committee meeting (SHLCC) held on 05-01-2010 the proposal of Company has been approved.

Government has examined the recommendations made by the State High Level Clearance Committee in the 20th Meeting held on 05-01-2010 in all aspects.

Hence the following Order

Government Order No. CI 50 SPI 2010 Bangalore, dated : 19-02-2010

Government is pleased to accord in principle approval for the project proposal of M/s Gail India Ltd., to establish a Transportation of Natural Gas Pipeline from Dabhol (Maharashtra) to Bangalore via Belgaum covering a total distance of 870 kms in many districts, with an investment of Rs. 4544 crores, generating employment to about 770 persons and extend the following infrastructure facilities, incentives and concessions.

INFRASTRUCTURE. FACILITIES

1. Land: Right of Use permission under PMP Act and NOC from local authorities.
2. Power: Required quantity of power to be serviced by respective ESCOM's.

General Terms and Conditions:

1. **MOU:** The projects proponents will have to sign a MOU with the Government of Karnataka during the Global Investors Meet in June 2010.
2. **Environment:** The promoters to obtain CFE and CFO from KSPCB and environmental clearance from MOEF, GOI.
3. **Employment:** The Company shall prepare a plan for development of Human Resources required for the project, train local people and provide employment to these trained local youth and comply with Government policy of Employment to local people i.e. Dr. Sarojini Mahishi report. A copy of Human Resources Development plan shall be sent to the Commissioner for I.D. & Director of Industries and Commerce for monitoring.
4. **Vendor Development** : Wherever there is scope for vendor development for the project, the company shall prepare a vendor development plan, develop local vendors and procure the required inputs, components and sub assemblies from these local vendor units. A copy of the vendor development plan shall be sent to the Commissioner for I.D. & Director of Industries and Commerce for monitoring.

5 **Social Infrastructure Development** : The company is advised to take up social Infrastructure development projects in the vicinity of the proposed location of the unit. A copy of such projects shall be sent to the Commissioner for I.D. & Director of Industries and Commerce for monitoring.

6. Others:

a) The projects proponents shall provide employment to atleast one member of the family of each land looser as the land is being acquired through KIADB.

b) The project proponents shall adopt rain water harvesting, waste water recycling and water conservation techniques. Zero discharge facility should be adopted wherever applicable.

c) The promoters shall take all statutory and other necessary clearances from the competent authorities including GOI and shall submit milestones/ progress in implementation of the project regularly, which will be monitored by the Department.

This approval is valid for a period of two years from the date of issue.

By Order and in the name of the Governor of Karnataka

(**Aparna Pavate**)

P.R. 502

Desk Officer (Technical cell)

Commerce and Industries Department

ಜಲ ಸಂಪನ್ಮೂಲ ಸಚಿವಾಲಯ

ವಿಷಯ : ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು ಅಡಗೂರು ದೊಡ್ಡಕೆರೆಯ ಅಭಿವೃದ್ಧಿ–ತುರ್ತು ರಿಪೇರಿ ಕಾಮಗಾರಿಯ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರ ಪತ್ರ ಸಂಖ್ಯೆ:ಮುಸದ/ಬೆಂ/ತಾಂಸ–2/ಸಇಂ–5/ಅಡಗೂರು ದೊಡ್ಡಕೆರೆ/2009/5006, ದಿನಾಂಕ 31–12–2009

ಪ್ರಸ್ತಾವನೆ :

ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು, ಅಡಗೂರು ದೊಡ್ಡಕೆರೆಯ ಅಭಿವೃದ್ಧಿ–ತುರ್ತು ರಿಪೇರಿ ಕಾಮಗಾರಿ 2007–2008ನೇ ಸಾಲಿನ ಸಣ್ಣ ನೀರಾವರಿ ಬೆಂಗಳೂರು ವೃತ್ತದ ದರಪಟ್ಟಿಯಂತೆ ತಯಾರಿಸಲಾದ ರೂ. 2,88,30,000–00 ಗಳಿಗೆ ತಯಾರಿಸಿದ ಅಂದಾಜು ಪಟ್ಟಿಗೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರು ಮೇಲೆ ಓದಲಾದ ದಿನಾಂಕ 31–12–2009ರ ಪತ್ರದಲ್ಲಿ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಸದರಿ ಕೆರೆಯ ಅಚ್ಚುಕಟ್ಟು 56.20 ಹೆಕ್ಟೇರ್, ನೀರು ನಿಲ್ಲುವ ಪ್ರದೇಶ 50.70 ಹೆಕ್ಟೇರ್ ಹಾಗೂ ಏರಿಯ ಉದ್ದ 990 ಮೀ. ಇರುತ್ತದೆ. ಏರಿಯ ಅಗಲ 10.0 ಮೀ ಇರುತ್ತದೆ. ಕೆರೆಗೆ 2 ಕೋಡಿಗಳಿದ್ದು, ಈ ಕೆರೆಯ ಏರಿಯನ್ನು ರಾಜ್ಯ ಹೆದ್ದಾರಿ ಸಂಖ್ಯೆ: 21ರ ಭಾಗವಾಗಿ ಉಪಯೋಗಿಸಲಾಗುತ್ತಿದೆ. ಕಳೆದ ಮಳೆಗಾಲದಲ್ಲಿ ಬಿದ್ದ ಭಾರಿ ಮಳೆಯ ಕಾರಣ 15 ವರ್ಷಗಳ ನಂತರ ಪ್ರಥಮ ಬಾರಿಗೆ ಕೆರೆ ತುಂಬಿ ಹರಿದಿದ್ದು, ಏರಿಯ ಭಾಗದಲ್ಲಿ ಕುಸಿತ ಉಂಟಾಗಿದೆ. ಇದು ರಾಜ್ಯ ಹೆದ್ದಾರಿಯ ಭಾಗವಾಗಿರುವುದರಿಂದ ರಸ್ತೆ ಸಂಚಾರ ಸುಗಮವಾಗಿ ಸಾಗಲು ಹಾಗೂ ಏರಿಯ ಸುರಕ್ಷತೆಯ ದೃಷ್ಟಿಯಿಂದ 10.00 ಲಕ್ಷ ರೂ. ಗಳ ವೆಚ್ಚದಲ್ಲಿ ತುರ್ತು ಕಾಮಗಾರಿ ಕೈಗೊಂಡಿದೆ.

ಸದರಿ ಕೆರೆಯನ್ನು ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯ ಸದಸ್ಯರು ಪರಿವೀಕ್ಷಿಸಿದ್ದು, ಪರಿವೀಕ್ಷಣೆಯ ಸಮಯದಲ್ಲಿ ಬಿರುಕುಗಳು ಉಂಟಾಗಿರುವ ಬಗ್ಗೆ ಹಾಗೂ ಈ ಭಾಗದಲ್ಲಿ ನೀರಿನ ಸೋರುವಿಕೆಯಿಂದ ಏರಿಯ ಸುರಕ್ಷತೆಗೆ ಧಕ್ಕೆ ಉಂಟಾಗುತ್ತಿದ್ದು, ಸದರಿ ಏರಿಯ ದುರಸ್ತಿಗೆ ರೂ. 280.30 ಲಕ್ಷ ರೂ. ಗಳ ಅಂದಾಜು ಪಟ್ಟಿಯನ್ನು ತಯಾರಿಸಿ ಈ ಏರಿಯ ರಿಪೇರಿಯನ್ನು 2010ರ ಮಳೆಗಾಲ ಪ್ರಾರಂಭಕ್ಕಿಂತ ಮುಂಚಿತವಾಗಿ ಅನುಷ್ಠಾನಗೊಳಿಸಲು ಅನುಮೋದನೆ ನೀಡುವಂತೆ ಮುಖ್ಯ ಇಂಜಿನಿಯರ್‌ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸನೀಇ 10 ಕೆಜಿದು 2010, ಬೆಂಗಳೂರು, ದಿನಾಂಕ: 19ನೇ ಫೆಬ್ರವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು, ಅಡಗೂರು ದೊಡ್ಡಕೆರೆಯ ಅಭಿವೃದ್ಧಿ–ತುರ್ತು ರಿಪೇರಿ ಕಾಮಗಾರಿಯ ಅಂದಾಜು ಪಟ್ಟಿಗೆ 2007–2008ನೇ ಸಾಲಿನ ಸಣ್ಣ ನೀರಾವರಿ ಬೆಂಗಳೂರು ವೃತ್ತದ ದರಪಟ್ಟಿಯಂತೆ ತಯಾರಿಸಲಾದ ರೂ. 2,88,30,000–00 ಗಳಿಗೆ (ಎರಡು ಕೋಟಿ ಎಂಭತ್ತೆಂಟು ಲಕ್ಷದ ಮೂವತ್ತು ಸಾವಿರ ರೂ. ಗಳು ಮಾತ್ರ) ಅಂದಾಜು ಪಟ್ಟಿಗೆ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

1) ಕಾಮಗಾರಿಯ ವೆಚ್ಚವು ಯವುದೇ ಕಾರಣಕ್ಕೂ ಅನುಮೋದಿಸಿದ ಟೆಂಡರ್ ಮೊತ್ತಕ್ಕಿಂತ ಹೆಚ್ಚಾಗಬಾರದು ಹಾಗೂ ಕಾಮಗಾರಿಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸತಕ್ಕದ್ದು.

2) ಒಂದುವೇಳೆ ಸ್ಥಳ ಪರಿಸ್ಥಿತಿಗೆ ಅನುಗುಣವಾಗಿ ಹೆಚ್ಚಳ ನಿರೀಕ್ಷಿಸಿದಲ್ಲಿ ತಕ್ಷಣವೇ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕಾಮಗಾರಿಯನ್ನು ಪೂರ್ಣಗೊಳಿಸತಕ್ಕದ್ದು.

3) ಕಾಮಗಾರಿ ಪ್ರಾರಂಭಿಸುವ ಮುನ್ನ ವಿನ್ಯಾಸ ಬದಲಾವಣೆಯಿಂದ ಅಥವಾ ಬೇರೆ ಕಾರಣದಿಂದ ಅನುಮೋದಿಸಿದ ಅಂದಾಜು ಮೊತ್ತ ಹೆಚ್ಚಾಗುವ ಸಂಭವ ಇದ್ದಲ್ಲಿ ತಕ್ಷಣ ಪರಿಷ್ಕೃತ ಅಂದಾಜಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಂತರ ಕಾಮಗಾರಿಯನ್ನು ಪ್ರಾರಂಭಿಸುವುದು.

4) ಕಾಮಗಾರಿಯ ಅಂದಾಜು ಪಟ್ಟಿಗೆ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿ/ತಾಂತ್ರಿಕ ಸಮಿತಿಯ ತೀರುವಳಿ ಪಡೆಯುವುದು.

5) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಅನುಸಾರ ಟೆಂಡರ್ ಕರೆದು ತೆಗೆದುಕೊಳ್ಳತಕ್ಕದ್ದು.

6) ಇ.ಐ.ಆರ್.ಎಲ್/ವರ್ಕ್‌ಸ್ಲಿಪ್‌ಗಳನ್ನು ಸಲ್ಲಿಸಬೇಕಾದಲ್ಲಿ ತಕ್ಷಣವೇ ಸಲ್ಲಿಸತಕ್ಕದ್ದು.

7) ತಾಂತ್ರಿಕ ಮಂಜೂರಾತಿಯನ್ನು ನೀಡುವ ಮೊದಲು ಅಂದಾಜನ್ನು ಮತ್ತೊಮ್ಮೆ ವಿವರವಾಗಿ ಪರಿಶೀಲಿಸುವುದು.

8) ಕೆರೆಯ ಏರಿಯ ಮೇಲೆ ಲೋಕೋಪಯೋಗಿ ಇಲಾಖೆಯ ರಸ್ತೆ ಹಾದು ಹೋಗುವ ಕಾರಣ, ರಸ್ತೆ ನಿರ್ಮಾಣದ ತಾಂತ್ರಿಕ ಅಂಶವನ್ನು ಪಡೆದು ಅದಕ್ಕನುಗುಣವಾಗಿ ಏರಿಯ ಬಲವರ್ಧನೆಗೆ ಕ್ರಮ ಕೈಗೊಳ್ಳತಕ್ಕದ್ದು ಹಾಗೂ ಇದಕ್ಕಾಗಿ ತಗಲುವ ಹೆಚ್ಚುವರಿ ವೆಚ್ಚವನ್ನು ಲೋಕೋಪಯೋಗಿ ಇಲಾಖೆಯಿಂದ ಭರಿಸಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳುವುದು.

9) ಈ ಕಾಮಗಾರಿಯನ್ನು 2010-11ನೇ ಸಾಲಿನ ಆಯವ್ಯಯದಲ್ಲಿ ಸೂಕ್ತ ಅನುದಾನದೊಂದಿಗೆ ಸೇರಿಸಲು ಕ್ರಮ ಕೈಗೊಳ್ಳತಕ್ಕದ್ದು.

ಈ ಉದ್ದೇಶಕ್ಕಾಗಿ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಕೆ "4702-00-101-7-01-139- ಕೆರೆಗಳ ಅಧುನೀಕರಣ (ಯೋಜನೆ) ಅಡಿ ಭರಿಸುವುದು.

ಈ ಆದೇಶವನ್ನು ಇಲಾಖಾ ಕಾರ್ಯದರ್ಶಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ -1 ಟಿಎಫ್‌ಪಿ 2008, ದಿನಾಂಕ 16-05-08ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಕೆ. ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ.ಆರ್. 503

ಸಹಕಾರ ಸಚಿವಾಲಯ

ವಿಷಯ : ಮದ್ದೂರು ಟೌನ್ ಕ್ಲಬ್, ಮದ್ದೂರು, ಈ ಸಂಘಕ್ಕೆ ಆಡಳಿತಾಧಿಕಾರಿಗಳನ್ನು ನೇಮಿಸುವ ಬಗ್ಗೆ :-

ಓದಲಾಗಿದೆ :
1) ಸಹಕಾರ ಸಂಘಗಳ ನಿಬಂಧಕರವರ ಪತ್ರ ಸಂಖ್ಯೆ : ಆರ್‌ಸಿಎಸ್/ಎಡಿಎಂ/102/ಎಸ್‌ಓಆರ್/2009-10, ದಿನಾಂಕ: 22-08-2009
2) ಕಾರಣ ಕೇಳುವ ಸೂಚನಾ ಪತ್ರದ ದಿನಾಂಕ : 07-10-2000.
3) ಅಧ್ಯಕ್ಷರು, ಮದ್ದೂರು ಟೌನ್ ಕ್ಲಬ್, ಮದ್ದೂರು ಇವರು ಕಾರಣ ಕೇಳುವ ಸೂಚನಾ ಪತ್ರಕ್ಕೆ ನೀಡಿರುವ ಉತ್ತರ ದಿನಾಂಕ : 22-10-2009.
4) ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು ಇವರ ಪತ್ರ ಸಂಖ್ಯೆ : ಆರ್‌ಸಿಎಸ್/ಎಡಿಎಂ/102/ಎಸ್‌ಒಆರ್/2009-10, ದಿನಾಂಕ : 16-01-2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ 22-08-2009ರ ಪತ್ರದಲ್ಲಿ ಮದ್ದೂರು ಟೌನ್ ಕ್ಲಬ್, ಮದ್ದೂರು, ಈ ಸಂಘದಲ್ಲಿ ಜರುಗಿರುವ ಅವ್ಯವಹಾರಗಳ ಬಗ್ಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 25ರ ರೀತ್ಯಾ ವಿಚಾರಣೆ ನಡೆಸಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮಂಡ್ಯ ರವರ ಪ್ರಸ್ತಾವನೆಯಂತೆ ಸಂಘದ ವ್ಯವಹಾರದ ಬಗ್ಗೆ ನಡೆಸಲಾದ ವಿಚಾರಣಾ ವರದಿಯಲ್ಲಿ ಕ್ಲಬ್ಬಿನ ವ್ಯವಹಾರಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 11 ಮತ್ತು 12ರಲ್ಲಿ ಸೂಚಿಸಿರುವಂತೆ ದಾಖಲಾತಿಗಳನ್ನು ನಿರ್ವಹಿಸಿರುವ ಬಗೆಗೆ ಬಲವಾದ ಸಂಶಯ

ಉಂಟಾಗಿರುವುದರಿಂದ ಹಾಗು ಈ ಕ್ಲಬ್ಬಿನ ಒಡೆತನಕ್ಕೆ ಸಂಬಂಧಿಸಿದ ಕೆಲವು ವ್ಯಾಪಾರ ಮಳಿಗೆಗಳು ಇದ್ದು ಸದರಿ ಮಳಿಗೆಗಳಿಂದ ಮಾಸಿಕವಾಗಿ ಸಾವಿರಾರು ರೂಪಾಯಿಗಳು ಬಾಡಿಗೆ ರೂಪದಲ್ಲಿ ಕ್ಲಬ್ಬಿಗೆ ಸ್ವೀಕೃತಿಯಾಗುತ್ತಿರುವುದರಿಂದ ಈ ಬಾಡಿಗೆ ಹಣ ದುರುಪಯೋಗವಾಗುವ ಸಾಧ್ಯತೆಗಳು ನಿಚ್ಚಳವಾಗಿರುವುದರಿಂದ ಮತ್ತು ವಿಚಾರಣಾಧಿಕಾರಿಯವರು ವಿಚಾರಣಾ ವರದಿಯಲ್ಲಿ ನೀಡಿರುವ ಅಭಿಪ್ರಾಯಗಳನ್ನು ಗಣನೆಗೆ ತೆಗೆದುಕೊಂಡು ಮತ್ತು ಈ ಕಚೇರಿಯಲ್ಲಿ ಹಾಲಿ ಇರುವ ಆಡಳಿತ ಮಂಡಳಿಯಲ್ಲಿನ ವಿವಾದಗಳಿಗೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿದ್ದು ಸಂಸ್ಥೆಯ ಬಗ್ಗೆ ಹಲವಾರು ದೂರುಗಳೂ ಸಹ ದಾಖಲಾಗಿರುವುದನ್ನು ಪರಿಗಣಿಸಿ ಸಂಸ್ಥೆಯ ಹಿತದೃಷ್ಟಿಯಿಂದ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27–ಎ(ಸಿ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಅಧ್ಯಕ್ಷರು/ಕಾರ್ಯದರ್ಶಿಗಳು ಮದ್ದೂರು ಟೌನ್ ಕ್ಲಬ್, ಮದ್ದೂರು ರವರಿಗೆ ಕಾರಣ ಕೇಳುವ ಸೂಚನಾ ಪತ್ರವನ್ನು ಕಳುಹಿಸಿ :

1. ಸಂಘದ ವಾರ್ಷಿಕ ಮಹಾಸಭೆ ನಡೆಸದೆ ಮಹಾಸಭೆ ನಡೆಸಿರುವುದಾಗಿ ಸುಳ್ಳು ಮಾಹಿತಿ ನೀಡಿರುವುದು.
2. ಸಂಘದಲ್ಲಿರುವ ಸದಸ್ಯರ ಗಮನಕ್ಕೆ ತರದೆ ಇತರರನ್ನು ಸದಸ್ಯರನ್ನಾಗಿ ನೆಮಿಸಿರುವುದು.
3. ಸಂಘದಲ್ಲಿನ ಲೆಕ್ಕ ಪತ್ರಗಳನ್ನು 2001 ರಿಂದ 2008ರ ವರೆಗೆ ಸರಿಯಾಗಿ ನಿರ್ವಹಿಸದೆ ಇರುವುದರಿಂದ ದಾಖಲಾತಿಗಳನ್ನು ತನಿಖೆಗೆ ಒಳಪಡಿಸುವುದು.

ಮೇಲ್ಕಂಡ ಆರೋಪಗಳು ಕಂಡುಬಂದಿದ್ದು, ನೋಂದಣಿ ಕಾಯ್ದೆಯ ಕಲಂ 11 ಮತ್ತು 12 ಉಲ್ಲಂಘನೆಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ)ರ ಪ್ರಕಾರ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದು ಎಂಬ ಬಗ್ಗೆ ಲಿಖಿತ ಹೇಳಿಕೆಯನ್ನು ಸೂಚನಾ ಪತ್ರ ತಲುಪಿದ 15 ದಿವಸಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಿ ಸೂಚನಾ ಪತ್ರವನ್ನು ಹೊರಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಅಧ್ಯಕ್ಷರು, ಮದ್ದೂರು ಟೌನ್ ಕ್ಲಬ್, ಮದ್ದೂರು ರವರು ಸರ್ಕಾರದ ಕಾರಣ ಕೇಳುವ ಸೂಚನಾ ಪತ್ರಕ್ಕೆ ಉತ್ತರ ನೀಡುತ್ತಾ ಕ್ಲಬ್ ಸ್ವಂತ ಅಂಗಡಿ ಮಳಿಗೆಗಳನ್ನು ಹೊಂದಿದ್ದು, ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿದ್ದು, ಕ್ಲಬ್‌ನಿಂದ ಸಾರ್ವಜನಿಕರಿಂದ ಬಂದಂತಹ ಹಣವನ್ನು ಸದುದ್ದೇಶಕ್ಕೆ ಬಳಸುತ್ತಿದೆಯೆಂದು, ಯಾವುದೇ ಅವ್ಯವಹಾರ ನಡೆದಿರುವುದಿಲ್ಲವೆಂತಲೂ, ಈಗಲೂ ಸಹ ಸರ್ಕಾರದಿಂದ ನಿಯೋಜಿಸುವ ಅಧಿಕಾರಿಗಳಿಗೆ ಎಲ್ಲಾ ಲೆಕ್ಕ ಪತ್ರಗಳನ್ನು ಪರಿಶೀಲನೆಗೆ ಒಳಪಡಿಸಲು ಬದ್ಧರಾಗಿರುತ್ತೇವೆಂದು ಕೋರಿಕೊಂಡಿರುತ್ತಾರೆ. ಸದರಿ ಉತ್ತರವನ್ನು ಸಹಕಾರ ಸಂಘಗಳ ನಿಬಂಧಕರಿಗೆ ಕಳುಹಿಸಿಕೊಡುತ್ತಾ ಹೇಳಿಕೆಯನ್ನು ಪರಿಶೀಲಿಸಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ ಸ್ಪಷ್ಟ ಅಭಿಪ್ರಾಯವನ್ನು ನೀಡಲು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಹಾಗೂ ಸಂಘ ಸಂಸ್ಥೆಗಳ ಜಿಲ್ಲಾ ನೋಂದಣಾಧಿಕಾರಿಗಳು ಮಂಡ್ಯ ಜಿಲ್ಲೆ, ಮಂಡ್ಯ ರವರ ವರದಿಯನ್ನು ಪರಿಶೀಲಿಸಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 25(1) ರನ್ವಯ ನಡೆಸಿರುವ ವಿಚಾರಣಾ ವರದಿಯನ್ವಯ ಸದರಿ ಸಂಸ್ಥೆಗೆ ಜರೂರಾಗಿ ಆಡಳಿತಾಧಿಕಾರಿಯನ್ನು ನೇಮಿಸಿ ಸಂಸ್ಥೆಯ ಒಡೆತನದಲ್ಲಿ ವಾಣಿಜ್ಯ ಮಳಿಗೆಗಳಿದ್ದು ಇವುಗಳಿಂದ ಬರುವ ಸಾವಿರಾರು ರೂಪಾಯಿ ಬಾಡಿಗೆ ಹಣ ದುರುಪಯೋಗವಾಗುವ ಸಾಧ್ಯತೆಯಿರುವುದರಿಂದ ಹಣದುರುಪಯೋಗ ತಡೆಯಲು ಚುನಾವಣೆಯ ಮೂಲಕ ಹೊಸ ಪದಾಧಿಕಾರಿಯವರನ್ನು ನೇಮಕಗೊಳ್ಳುವಂತೆ ಸಮಿತಿಗೆ ಸಹಾಯ ಮಾಡಲು ಆಡಳಿತಾಧಿಕಾರಿಯವರನ್ನು ನೇಮಿಸುವುದು ಸೂಕ್ತವೆಂದು ಸಹಕಾರ ಸಂಘಗಳ ನಿಬಂಧಕರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಈ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಸಂಸ್ಥೆಗೆ ಸಂಘಗಳ ನೋಂದಣಿ ಕಾಯ್ದೆಯ 1960ರ ಕಲಂ 27–ಎ ರನ್ವಯ ಆಡಳಿತಾಧಿಕಾರಿಯವರನ್ನು ನೇಮಿಸಲು ತೀರ್ಮಾನಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಇ 120 ಸಿಎಸ್‌ಆರ್ 2009, ಬೆಂಗಳೂರು, ದಿನಾಂಕ: 15ನೇ ಫೆಬ್ರವರಿ 2010

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಮದ್ದೂರು ಟೌನ್ ಕ್ಲಬ್, ಮದ್ದೂರು ಈ ಸಂಸ್ಥೆಯ ಒಡೆತನದಲ್ಲಿ ವಾಣಿಜ್ಯ ಮಳಿಗೆಗಳಿದ್ದು ಇವುಗಳಿಂದ ಬರುವ ಸಾವಿರಾರು ರೂಪಾಯಿ ಬಾಡಿಗೆ ಹಣ ದುರುಪಯೋಗವಾಗುವ ಸಾಧ್ಯತೆಯಿರುವುದರಿಂದ ಹಣದುರುಪಯೋಗ ತಡೆಯಲು ಹಾಗೂ ಚುನಾವಣೆಯ ಮೂಲಕ ಹೊಸ ಪದಾಧಿಕಾರಿಗಳನ್ನು ನೇಮಿಸಬೇಕಾಗಿರುವುದರಿಂದ ಈ ಸಂಸ್ಥೆಯ ಹಿತದೃಷ್ಟಿಯಿಂದ ಈ ಸಂಸ್ಥೆಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮಂಡ್ಯ ಜಿಲ್ಲೆ, ಮಂಡ್ಯ ಇವರನ್ನು ಆಡಳಿತಾಧಿಕಾರಿಯನ್ನಾಗಿ ಆರು (6) ತಿಂಗಳ ಅವಧಿಗೆ ಅಥವಾ ಸದರಿ ಸಂಸ್ಥೆಗೆ ಚುನಾವಣೆ ನಡೆಸಿ

ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಿದೆ.

ಆಡಳಿತಾಧಿಕಾರಿಗಳು ಸದರಿ ಅವಧಿಯಲ್ಲಿ ಸಂಘದಲ್ಲಿ ಹಾಲಿ ನೋಂದಾಯಿತವಾಗಿರುವ ಸದಸ್ಯರುಗಳಿಂದ ಚುನಾವಣೆ ನಡೆಸಿ ಹೊಸ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ನಂಜುಂಡಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಹಕಾರ ಇಲಾಖೆ.

ಪಿ.ಆರ್. 504

INFRASTRUCTURE DEVELOPMENT SECRETARIAT

Sub :- Development of Gulbarga and Shimoga airports

Read :-
1. G.O. No. IDD 24 DIA 2000 dated 23-03-2007.
2. G.O. No. IDD 16 DIA 2002 dated 23-03-2007.
3. G.O. No. IDD 14 DIA 2007 dated 15-11-2007.
4 Govt. letter No. IDD 72 DIA 2008 dated 09-07-2009
5. Letter dated 20-10-2009 of Joint Managing Director, Infrastructure Leasing and Financial Services Ltd., (IL & FS)
6. Letter dated 02-12-2009 of Chief of Operations (Infrastructure), IL & FS.
7. Letters dated 21-11-2009 and 01-12-2009 of the Vice President GADL & SADL

Preamble:

1. In G.Os read at Sl No. (1) & (2) above, Government had accorded sanction for development of Gulbarga and Shimoga airports respectively on PPP basis.

2. In G.Os. read at SI. No. (3) above, the development of Gulbarga and Shimoga airport projects was awarded to M/s Maytas Infra Ltd. The Project Development Agreement was signed on 02-04-2008 between Government of Karnataka and the SPV i.e. Gulbarga Airport Developers Pvt. Ltd., (GADL) and Shimoga Airport Developers Pvt. Ltd., (SADL). As per the PDA, the SPV Companies were not able to obtain all the required approvals and clearances till December 2008 and could not achieve the financial closure for the projects. GoK took serious note of this and also the adverse press reports regarding the alleged fraudulent activities and financial improprieties in the management of Sathyam Computers Ltd. And the linkages between Maytas Infra Ltd. That followed with investigations by various regulatory and statutory authorities. The matter was examined by Government in detail and based on the assurances given by the then Chairman of M/s Maytas Infra Ltd. Government after a review of these projects had agreed to continue with the PDA signed on 02-04-2008, vide letter dated 09-07-2009 read at SI. No. (4) above.

3. In the letter dated 20-10-2009, the Joint Managing Director, Infrastructure Leasing and Finanical Services Ltd. Had stated that on an approval from the Company Law Board on 31-08-2009 IL& FS has stepped in as the new Promoters of Maytas Infra Ltd. With effect from 30-09-2009. IL & FS has come on Board of Maytas Infra Ltd.., with four Directors replacing the earlier Promoter Group and two of the earlier Govt. Nominated Directors. However iDeCK, the consultant for Infrastructure Development Department has opined that in the present case stepping in of IL & FS as the new promoters of Maytas Infra Ltd. Will not in reality change the legal status of Maytas Infra Ltd. As such, the obligation of Maytas Infra Ltd. As lead member under the Project Development Agreement dated 02-04-2008 entered by Govt. of Karnataka with GADL and SADL would remain unchanged and will have no implication whatsoever on the existing circumstances. Further in their letter dated 02-12-2009, the Chief of Operations (infrastructure) of IL & FS had stated that, they have taken up a 40 % equity stake through their group

company, IL & FS Transportation Network Ltd. (ITNL), in Regional Airport Holdings International Ltd. (RAHI) and India Company Incorporated along with COMET Infra Developments Pvt. Ltd. To participate in and fund the above airports projects, in line with the PDA.

4. In the Letters read at Sl. No. (7) above, the Vice President,GADL & SADL had sent a proposal seeking deferment of lease rentals for the first 10 years of the project starting that, the combined effect of recession and the meltdown in real estate markets have rendered the airports unviable even when supported by real estate. In this background iDeCK has opined that the request of GADL & SADL " to defer payment of their respective lease rentals for the first 10 years and their offer to make a bullet payment at the end of 10th year which would be equal to the full amount of the lease rental payable until 10th year and that they would continue to pay lease rental on yearly basis from 11th year onwards as per the PDA and also provide mutually acceptable annual security for the value of lease rent payable every year" may be considered to improve the viability of the projects. Futher, iDeCK has suggested that Government of Karnataka shall also consider requesting the airport developers to submit the Bank Guarantee as a security cover for lease deferment in the manner as mentioned below:

Sl. No.	Airport	Value of bank Guarantee for 1-5 year (to be submitted at the beginning of the 1st year	Additional Value of Bank Guarantee for 6-10 year (to be submitted at the end of 5th year
1	Gulbarga Airport	Rs. 9.69 crores	Rs. 7.89 crores
2	Shimoga Airport	Rs. 12.36 crores	Rs. 10.06 crores

The above mentioned Bank Guarantee should be valid and in force till the end of the 10th year.

5) The Bank Guarantee value is calculated by takig into account future Value of the deferred lease rentals. The 'bullet payment' to be made by Airport Developers at the end of the 10th year shall be equal to the sum of above mentioned Bank Guarantees. Also, the present value of proposed lease rental structure by the Airport Developers is equal to the present value of the existing lease rental structure and have also recommended that a supplement to Project Developers Agreement dated 2ND April 2008 to be signed with the developers covering the terms, obligations, default events etc., of the lease deferment request.

6. Government have examined and reviewed the developments in this project and also the request of the developers. Hence this Order.

Government Order No. IDD 85 DIA 2008 Bangalore, dated : 18-02-2010

In the background of the developments that have taken place in the development of Gulbarga and Shimoga airport projects, the Government of Karnataka after careful consideration of the request of the developers has accorded sanction for:-

i. Deferment of the payment of Lease rentals for the first 10 years and to start the lease rentals payments from 11th year onwards as per the rates determined for that year and subsequent years as in the PDA.

ii. To obtain Bank Guarnatees as a security cover for the entire amount of Lease rentals as mentioned below and adjust the same against the performance security (Rs. 2.50 crores for each projects) which has been already submitted by the Developers:

Sl. No.	Airport	Value of bank Guarantee for 1-5 year (to be submitted at the beginning of the 1st year	Additional Value of Bank Guarantee for 6-10 year (to be submitted at the end of 5th year)
1	Gulbarga Airport	Rs. 9.69 crores	Rs. 7.89 crores
2	Shimoga Airport	Rs. 12.36 crores	Rs. 10.06 crores

iii. To draw a supplement to the Project Development Agreement already signed with the Developers covering the terms, obligations, default events etc., along with suitable termination payment clauses.

2. iDeCK, the consultant for Government of Karnataka will take necessary action immediately to draw the supplement Project Development Agreement indicating the new partners, promoters and also new terms & conditions, obligations and default events with suitable termination payment clauses and relative timelines for expeditious implementation of the project.

By Order and in the name of the Governor of Karnataka

(**N. Manjula Geetha)**

P.R. 505

Deputy Secretary to Government (I/c)
Infrastructure Development Department

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ತಿದ್ದುಪಡಿ

ಸಂಖ್ಯೆ : ಸಿಆಸುಇ 50 ಸಅಸೇ 2010, (ಭಾ) ಬೆಂಗಳೂರು, ದಿನಾಂಕ : 10-03-2010

ಕರ್ನಾಟಕ ಸರ್ಕಾರ ಸಚಿವಾಲಯದ ವಸತಿ ಇಲಾಖೆಯಲ್ಲಿ ಕಾರ್ಯದರ್ಶಿ ಹುದ್ದೆಯನ್ನು ಪೂರಕ ಸಿಬ್ಬಂದಿ ಹುದ್ದೆಗಳೊಂದಿಗೆ ಮುಂದುವರಿಸಲಾಗಿರುವ ಅದೇಶ ಸಂಖ್ಯೆ : ಸಿಆಸುಇ 50 ಸಅಸೇ 2010, ದಿನಾಂಕ : 20-02-2010ರ ಆದೇಶದಲ್ಲಿ "ಆಪ್ತ ಕಾರ್ಯದರ್ಶಿ (ಆಪ್ತ ಕಾರ್ಯದರ್ಶಿ ಗ್ರೇಡ್-2)" ಎಂಬುದರ ಬದಲಾಗಿ "ಆಪ್ತ ಕಾರ್ಯದರ್ಶಿ (ಆಪ್ತ ಕಾರ್ಯದರ್ಶಿ ಗ್ರೇಡ್-1)" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್
ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್.746

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವೆಗಳು-3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರ ಉಪಯೋಗಕ್ಕಾಗಿ 42 ಲ್ಯಾಪ್‌ಟಾಪ್ ಗಣಕ ಯಂತ್ರಗಳ ಖರೀದಿ - ಕೆ.ಟಿ.ಪಿ.ಪಿ. ಕಾಯಿದೆ 1999 ಕಲಂ 4(ಜಿ) ಅನ್ವಯ ವಿನಾಯಿತಿ ನೀಡುವ ಬಗ್ಗೆ.

ಓದಲಾಗಿದೆ : ಕರ್ನಾಟಕ ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್‌ರವರ ಪತ್ರ ಸಂಖ್ಯೆ: ಹೆಚ್‌ಸಿಸಿ ನಂ. 65/2008, ದಿನಾಂಕ : 13-01-2010.

ಪ್ರಸ್ತಾವನೆ :

ಮೇಲೆ ಓದಲಾದ ಕರ್ನಾಟಕ ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್ ಅವರ ಪತ್ರದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಮಾನ್ಯ ನ್ಯಾಯಾಧೀಶರುಗಳ ಉಪಯೋಗಕ್ಕಾಗಿ 42 Laptop model AVN-1520 Dell (TM) Vastro (TM) 1520 Note Book ಎಲ್ಲಾ ಪರಿಕರಗಳು ಸೇರಿ ಪ್ರತಿಯೊಂದಕ್ಕೆ ರೂ. 53,528/-ರ ವೆಚ್ಚದಲ್ಲಿ ನೇರವಾಗಿ ಮೆಸರ್ಸ್ ಡೆಲ್ ಇಂಡಿಯಾ ಲಿಮಿಟೆಡ್ ಸಂಸ್ಥೆಯಿಂದ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ಮೇರೆಗೆ ಸರ್ಕಾರದ ವಿನಾಯಿತಿ ಆದೇಶ ನೀಡಬೇಕಾಗಿ ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂ: ಸಿಆಸುಇ 15 ಸೇಉನ್ಯಾ 2010, ಬೆಂಗಳೂರು, ದಿನಾಂಕ : 10ನೇ ಮಾರ್ಚ 2010

ಕರ್ನಾಟಕ ಉಚ್ಛ ನ್ಯಾಯಾಲಯದ ಮಾನ್ಯ ಮುಖ್ಯ ನ್ಯಾಯಮೂರ್ತಿ ಹಾಗೂ ನ್ಯಾಯಾಧೀಶರುಗಳಿಗೆ ಅವರ ಕಛೇರಿ ಉಪಯೋಗಕ್ಕಾಗಿ 42 Laptop model AVN-1520 Dell (TM) Vastro (TM) 1520 Note Book ಎಲ್ಲಾ ಪರಿಕರಗಳು ಸೇರಿ ಪ್ರತಿಯೊಂದಕ್ಕೆ ರೂ. 53,528/-ರ ರೀತ್ಯಾ ನೇರವಾಗಿ ಮೆಸರ್ಸ್ ಡೆಲ್ ಇಂಡಿಯಾ ಲಿಮಿಟೆಡ್ ಸಂಸ್ಥೆಯಿಂದ

ಖರೀದಿಸುವ ಪ್ರಸ್ತಾವನೆಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ–1999ರ ಕಲಂ 4(ಜಿ) ಅಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ವಿನಾಯಿತಿ ನೀಡಲಾಗಿದೆ.

ಈ ಅದೇಶವನ್ನು ಆರ್ಥಿಕ ಇಲಾಖೆ ಅಧಿಸೂಚನೆ ಸಂಖ್ಯೆ : ಆಇ 145 ವೆಚ್ಚ–12/2010, ದಿನಾಂಕ : 4–3–2010 ಮತ್ತು 12–03–2010 ರಂತೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ ಸುಧಾರಣೆ ಇ–ಆಡಳಿತ) ಇವರೊಡನೆ ಸಮಾಲೋಚಿಸಿದ ನಂತರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ಎಸ್. ಶಿವರಾಮ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್.747 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವೆಗಳು–3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಕರ್ನಾಟಕ ಉಚ್ಚ ನ್ಯಾಯಾಲಯದ ಗುಲ್ಬರ್ಗಾ ಸಂಚಾರಿ ಪೀಠಕ್ಕೆ ಟೊಯೋಟಾ ಇನ್ನೋವಾ ಎ.ಸಿ. ಕಾರನ್ನು ಧನ ಪುನರ್‌ವಿನಿಯೋಗ ಮಾಡಿಕೊಂಡು ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ : ಕರ್ನಾಟಕ ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್‌ರವರ ಪತ್ರ ಸಂಖ್ಯೆ: ಹೆಚ್‌ಸಿಇ 1–1–2009, ದಿನಾಂಕ : 30–12–2009.

ಪ್ರಸ್ತಾವನೆ :

ಮೇಲೆ ಪ್ರಸ್ತಾವನೆಯಲ್ಲಿ ಓದಲಾದ ದಿನಾಂಕ : 30–12–2009ರ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಗುಲ್ಬರ್ಗಾ ಮತ್ತು ಧಾರವಾಡ ಸಂಚಾರಿ ಪೀಠಗಳಿಗೆ ಪ್ರತಿ ತಿಂಗಳು 4 ರಿಂದ 5 ಮಂದಿ ನ್ಯಾಯಾಧೀಶರುಗಳನ್ನು ಪೀಠಗಳಲ್ಲಿ ಕಾರ್ಯ ನಿರ್ವಹಿಸಲು ಅಗಿಂದಾಗ್ಯೆ ನೇಮಿಸುತ್ತಿದ್ದು, ಸದರಿ ನ್ಯಾಯಾಧೀಶರುಗಳು ಹೈದ್ರಾಬಾದ್ ವಿಮಾನ ನಿಲ್ದಾಣದಿಂದ ಗುಲ್ಬರ್ಗಾ ಸಂಚಾರಿ ಪೀಠಕ್ಕೆ ಹಾಗೂ ಸಂಚಾರಿ ಪೀಠದಿಂದ ಹೈದ್ರಾಬಾದ್ ವಿಮಾನ ನಿಲ್ದಾಣಕ್ಕೆ ಸುಮಾರು 250 ಕಿ.ಮೀ.ನಷ್ಟಿದ್ದು, ಒಟ್ಟಾರೆ 500 ಕಿ.ಮಿ. ನಷ್ಟು ಪ್ರಯಾಣಿಸಬೇಕಾಗಿರುತ್ತದೆ ಹಾಗೂ ಇಲ್ಲಿನ ರಸ್ತೆಗಳು ಸಹ ಒಳ್ಳೆಯ ಸ್ಥಿತಿಯಲ್ಲಿರುವುದಿಲ್ಲವೆಂದು ಸಹ ತೀಳಿಸಿ, ಲೆಕ್ಕ ಶೀರ್ಷಿಕೆ "2014–ಎಜೆ–00–102–0–10–195" ಸಾರಿಗೆ ವೆಚ್ಚ (Non-Plan charged) ಅಡಿಯಲ್ಲಿ ರೂ. 7.28 ಲಕ್ಷಗಳನ್ನು ಒದಗಿಸಿದ್ದು, ಸದರಿ ಮೊತ್ತವು ಪ್ರಸ್ತಾಪಿತ ವಾಹನವನ್ನು ಖರೀದಿಸಲು ಸಾಧ್ಯವಾಗುವುದಿಲ್ಲ, ಆದ್ದರಿಂದ ಕರ್ನಾಟಕ ಉಚ್ಚ ನ್ಯಾಯಾಲಯದ ಒಟ್ಟಾರೆ ಉಳಿತಾಯದ ಲೆಕ್ಕ ಶೀರ್ಷಿಕೆ 2014–00–102–0–10 establishment of High Court Circuit Bench at Gulbarga ಅಡಿಯಲ್ಲಿನ ಪುನರ್ ವಿನಿಯೋಗ ಆಗುವ ಮೊತ್ತ ರೂ. 9,86,620.00 ರಲ್ಲಿ ಖರೀದಿಸಲು ಅನುಮತಿ ನೀಡಬೇಕಾಗಿ ಕೋರಿರುತ್ತಾರೆ. ಇದನ್ನು ಪರಿಶೀಲಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂ: ಸಿಆಸುಇ 15 ಸೇಉನ್ಯಾ 2010, ಬೆಂಗಳೂರು, ದಿನಾಂಕ : 10ನೇ ಮಾರ್ಚ 2010

ಗುಲ್ಬರ್ಗಾದಲ್ಲಿ ಹೈಕೋರ್ಟ್ ಸಂಚಾರಿ ಪೀಠಕ್ಕೆ ಲೆಕ್ಕ ಶೀರ್ಷಿಕೆ 2014–00–102–0–10–071 (ಯೋಜನೇತರ) ಅಡಿ ಇರುವ ರೂ. 40.00 ಲಕ್ಷಗಳ ಉಳಿತಾಯದಿಂದ ಧನ ಪುನರ್ ವಿನಿಯೋಗ ಮಾಡಿಕೊಂಡು ಒಂದು ಟೊಯೋಟಾ ಇನ್ನೋವಾ ಎ.ಸಿ. ಕಾರನ್ನು ರೂ. 9,86,620/–ರ ವೆಚ್ಚದಲ್ಲಿ ಖರೀದಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಅದೇಶವನ್ನು ಆರ್ಥಿಕ ಇಲಾಖೆಯೊಡನೆ ಟಿಪ್ಪಣಿ ಸಂ : ಆಇ 62 ವೆಚ್ಚ–12/10, ದಿನಾಂಕ : 10–3–2010 ರಲ್ಲಿ ಸಮಾಲೋಚಿಸಿದ ನಂತರ, ಸರ್ಕಾರಿ ಆದೇಶ ಸಂ: ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ : 16–05–2008ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ಎಸ್. ಶಿವರಾಮ್

ಪಿ.ಆರ್.748 ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವೆಗಳು–3)

ಕಂದಾಯ ಸಚಿವಾಲಯ

ವಿಷಯ : ಶ್ರೀ ಎಸ್. ರಾಮಣ್ಣ, ಹಿರಿಯ ಉಪ ನೋಂದಣಾಧಿಕಾರಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆ ಇವರ ಸ್ವಯಂ ನಿವೃತ್ತಿಗೆ ಅನುಮತಿ ನೀಡುವ ಕುರಿತು.

ಓದಲಾಗಿದೆ : ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ : ಇಎಸ್‌ಟಿ 1–35/09–10 ದಿನಾಂಕ : 08–12–2009.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರು ತಮ್ಮ ಪ್ರಸ್ತಾವನೆಯಲ್ಲಿ ಶ್ರೀ ಎಸ್. ರಾಮಣ್ಣ, ಹಿರಿಯ ಉಪ ನೋಂದಣಾಧಿಕಾರಿ, ಮೂಡಿಗೆರೆ ಇವರು ತಮ್ಮ ಆರೋಗ್ಯದ ದೃಷ್ಟಿಯಿಂದ ಹಾಗೂ ಕೆಲವು ಕೌಟುಂಬಿಕ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 285(1)(ಬಿ) ರಡಿಯಲ್ಲಿ ಸರ್ಕಾರಿ ಸೇವೆಯಿಂದ ದಿನಾಂಕ : 31–12–2009 ರಿಂದ ಜಾರಿಗೆ ಬರುವಂತೆ ಸ್ವಯಂ ನಿವೃತ್ತಿ ಕೋರಿ ಸಲ್ಲಿಸಿರುವ ದಿನಾಂಕ : 24–09–2009 ರ ಮನವಿಯನ್ನು ಲಗತ್ತಿಸಿ, ಸದರಿಯವರ ಸೇವಾ ವಿವರಗಳೊಂದಿಗೆ ಸದರಿಯವರು ಸ್ವಯಂ ನಿವೃತ್ತಿ ಹೊಂದಲು ಸರ್ಕಾರದ ಅನುಮತಿ ನೀಡುವಂತೆ ಕೋರಿರುತ್ತಾರೆ.

ಮುಂದುವರೆದು, ಶ್ರೀ ಎಸ್. ರಾಮಣ್ಣ, ಹಿರಿಯ ಉಪ ನೋಂದಣಾಧಿಕಾರಿ ಇವರು ಸರ್ಕಾರಿ ಸೇವೆಗೆ ಸೇರಿದ ದಿನಾಂಕ : 18–08–1975 ರಿಂದ ಈ ತನಕ ವಿವಿಧ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಗಳಿಗೆ ಸಂಬಂಧಿಸಿದಂತೆ ಉಪ ನೋಂದಣಿ ಕಛೇರಿ, ಹೊಸಕೋಟೆ ಈ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಗೆ ಸಂಬಂಧಿಸಿದ ಬೇಬಾಕಿ ಪ್ರಮಾಣ ಪತ್ರವನ್ನು ಹೊರತುಪಡಿಸಿ ಇತರೇ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಗಳಿಗೆ ಬೇಬಾಕಿ ಪ್ರಮಾಣ ಪತ್ರಗಳನ್ನು ಸಲ್ಲಿಸಿರುತ್ತಾರೆ. ಸದರಿ ಅಧಿಕಾರಿಯ ವಿರುದ್ಧ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಕಛೇರಿಯ ಹಂತದಲ್ಲಿ ಯಾವುದೇ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲ ಮತ್ತು ಸದರಿ ಆಧಿಕಾರಿಯ ವಿರುದ್ಧ ಯಾವ ವಿಚಾರಣೆಯನ್ನು ಹೂಡಲು ಉದ್ದೇಶಿಸಿರುವುದಿಲ್ಲವೆಂದು ಅಥವಾ ವಿಚಾರಣೆಯನ್ನು ಹೂಡಲು ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆಯನ್ನು ಕಳುಹಿಸಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಅಲ್ಲದೇ, ಸದರಿ ಅಧಿಕಾರಿಯ ಜನ್ಮ ದಿನಾಂಕ : 06.08.1952 ಆಗಿದ್ದು, ಸರ್ಕಾರಿ ಸೇವೆಗೆ ಸೇರಿದ ದಿನಾಂಕ : 18–08–1975 ರಿಂದ ಆಗಿದ್ದು, ಸದರಿಯವರು ಸ್ವಇಚ್ಛಾ ನಿವೃತ್ತಿ ಕೋರಿದ ದಿನಾಂಕ : 31–12–2009ಕ್ಕೆ ಇವರ ಸೇವಾ ಅವಧಿಯು 34 ವರ್ಷ 4 ತಿಂಗಳುಗಳಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 285(1) (ಬಿ) ಪ್ರಕಾರ ಸ್ವಯಂ ನಿವೃತ್ತಿ ಹೊಂದಲು ಅರ್ಹತಾದಾಯಕ ಅವಧಿಯನ್ನು ಪೂರೈಸಿರುವುದರಿಮದ ಸದರಿ ಅಧಿಕಾರಿಗೆ ದಿನಾಂಕ : 31–12–2009 ರಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 285(1) (ಬಿ) ಪ್ರಕಾರ ಉಪ ನೋಂದಣಿ ಕಛೇರಿ, ಹೊಸಕೋಟೆ ಈ ಕಛೇರಿಯಿಂದ ಬೇಬಾಕಿ ಪ್ರಮಾಣ ಪತ್ರ ಕಾಯ್ದಿರಿಸಿ ಸ್ವಇಚ್ಛಾ ನಿವೃತ್ತಿ ಹೊಂದಲು ಸರ್ಕಾರದ ಅನುಮತಿ ನೀಡುವಂತೆ ಕೋರಿರುತ್ತಾರೆ.

ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸದರಿ ಅಧಿಕಾರಿಯ ವಿರುದ್ಧ ಸರ್ಕಾರದ ಹಂತದಲ್ಲಿಯೂ ಯಾವುದೇ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲ ಹಾಗೂ ಹೂಡುವ ಪ್ರಸ್ತಾವವೂ ಸದ್ಯಕ್ಕೆ ಇರುವುದಿಲ್ಲ. ಆದ್ದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಂಇ 3 ಮುನೋಸೇ 2010, ಬೆಂಗಳೂರು, ದಿನಾಂಕ : 05ನೇ ಮಾರ್ಚ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ ಎಸ್. ರಾಮಣ್ಣ, ಹಿರಿಯ ಉಪ ನೋಂದಣಾಧಿಕಾರಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆ ಇವರಿಗೆ ದಿನಾಂಕ : 31–03–2010 ರಿಂದ ಅನ್ವಯವಾಗುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 285(1)(ಬಿ) ರನ್ವಯ ಸ್ವಯಂ ನಿವೃತ್ತಿ ಹೊಂದಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಉಪ ನೋಂದಣಿ ಕಛೇರಿ, ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಕಛೇರಿಯಿಂದ ಸದರಿ ಅಧಿಕಾರಿಯ ಬೇಬಾಕಿ ಪ್ರಮಾಣ ಪತ್ರ ಪಡೆದು ಒದಗಿಸಿದ ನಂತರವೇ ಅವರ ನಿವೃತ್ತಿ ಸೌಲಭ್ಯಗಳನ್ನು ಮಂಜೂರು ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ.ಕೆ. ರಾಮಚಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ನೋಂದಣಿ & ಮುದ್ರಾಂಕ)

ಪಿ.ಆರ್.749

ಕಂದಾಯ ಸಚಿವಾಲಯ

ವಿಷಯ : 2009–10ನೇ ಸಾಲಿನ ಲೆಕ್ಕಶೀರ್ಷಿಕೆ 2030 ಮುದ್ರಾಂಕ ಮತ್ತು ನೋಂದಣಿ ಅಡಿಯಲ್ಲಿ ಪುನರ್ ವಿನಿಯೋಗ ಮಾಡುವ ಕುರಿತು.

ಓದಲಾಗಿದೆ : ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ : ಬಿಯುಡಿ/28/2009–10 ದಿನಾಂಕ : 03–03–2010 ಮತ್ತು 10–03–2010.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ : 03–03–2010 ಮತ್ತು 10–03–2010ರ ಪತ್ರಗಳಲ್ಲಿ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2030 ರಡಿ ರೂ. 223.89 ಲಕ್ಷಗಳು ನೀಡಿರುವ ಅನುದಾನ ಸಂಪೂರ್ಣ ವೆಚ್ಚವಾಗಿದೆ. ಈಗ ಸದರಿ ಶೀರ್ಷಿಕೆಯಡಿ ಅನುದಾನದ ಅವಶ್ಯಕತೆ ಇರುವುದರಿಂದ ಪುನರ್ ಹೊಂದಾಣಿಕೆ ಪ್ರಸ್ತಾವನೆಯನ್ನು ಸಲ್ಲಿಸಿ, ಸರ್ಕಾರದ ಪತ್ರ ದಿನಾಂಕ : ಫೆಬ್ರವರಿ 2009 ರಂತೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಮಂಜೂರಾದ 2030–03–001–2–051 ಸಾಮಾನ್ಯ ವೆಚ್ಚ ಲೆಕ್ಕ ಶೀರ್ಷಿಕೆಯಡಿ ಮಂಜೂರಾದ ರೂ. 3952.00 ಲಕ್ಷ ರೂ.ಗಳಲ್ಲಿ ರೂ. 1384.13 ಲಕ್ಷಗಳು ಉಳಿಕೆಯಾಗಿದ್ದು, ಸಕಾರದ ಆದೇಶ ಸಂಖ್ಯೆ : ಎಫ್‌ಡಿ 11 ಟಿಎಫ್‌ಪಿ 2007 ದಿನಾಂಕ : 27–11–2007ರ ಆದೇಶದಂತೆ ಆಡಳಿತ ಇಲಾಖೆಯ ಮುಖ್ಯಸ್ಥರಿಗೆ ಲೆಕ್ಕ ಶೀರ್ಷಿಕೆಯಡಿ ರೂ. 50.00 ಲಕ್ಷದವರೆಗೂ ಪುನರ್ ಹೊಂದಾಣಿಕೆ ಮಾಡುವ ಅಧಿಕಾರವಿರುತ್ತದೆ. ಈ ಅಧಿಕಾರ ವ್ಯಾಪ್ತಿಯಲ್ಲಿ ಪುನರ್ ಹೊಂದಾಣಿಕೆ ಮಾಡಿ ಆದೇಶ ಹೊರಡಿಸುವಂತೆ ಕೋರಲಾಗಿದೆ. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಂಇ 39 ಮುನೋಮು 2010, ಬೆಂಗಳೂರು, ದಿನಾಂಕ : 10ನೇ ಮಾರ್ಚಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಪ್ರಸ್ತುತ ಸಾಲಿನಲ್ಲಿ 2006–2007 ರಿಂದ ಇಲ್ಲಿಯವರೆಗೆ ಬಾಕಿಯಿರುವ ಕಟ್ಟಡದ ಬಾಡಿಗೆ ಮೊತ್ತ ರೂ. 149.00 ಲಕ್ಷಗಳಲ್ಲಿ ರೂ. 50.00 ಲಕ್ಷಗಳನ್ನು (ರೂ. ಐವತ್ತು ಲಕ್ಷಗಳು ಮಾತ್ರ) ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 2009–10ನೇ ಸಾಲಿನ ಲೆಕ್ಕ ಶೀರ್ಷಿಕೆ 2030–03–001–2–04–051 (ಯೋಜನೇತರ) ದಿಂದ ಈ ಲೆಕ್ಕ ಶೀರ್ಷಿಕೆ 2030–03–001–1–00–071 (ಯೋಜನೇತರ)ಕ್ಕೆ ಮರು ಹೊಂದಾಣಿಕೆಯಿಂದ ರೂ. 50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗೆ ಪುನರ್ ಹೊಂದಾಣಿಕೆ ಮಾಡಿ ಸರ್ಕಾರವು ಆದೇಶಿಸಿದೆ.

ಪುನರ್ ಹೊಂದಾಣಿಕೆ ಮೊತ್ತ	ರೂ. (ಲಕ್ಷಗಳಲ್ಲಿ)
ಲೆಕ್ಕ ಶೀರ್ಷಿಕೆ 2030–03–001–1–00–071 ಕಟ್ಟಡ ವೆಚ್ಚ (ಯೋಜನೇತರ)	50.00

ಪುನರ್ ವಿನಿಯೋಗ ಪ್ರಪತ್ರ 22–ಎ–ಕೆ.ಎಫ್.ಸಿ. (ಅನುಚ್ಛೇದ 308)ನ್ನು ಅನುಬಂಧಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ : ಕಂಇ 11516 ಆಂಆಸ 2010, ದಿನಾಂಕ : 10–03–2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಕೆ. ರಾಮಚಂದ್ರ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ನೋಂದಣಿ & ಮುದ್ರಾಂಕ)

ANNEXURE TO GOVERNMENT ORDER NO. 39 MUNOMU 2010 DATED : 10-03-2010

GOVERNMENT OF KARNATAKA

ANNESURE-XVI

Statement of approved Reappropriation forwarded to treasury Network Management Centre

Sl.No.	Sanction from which issued	G.O.No. & date	Demand No.	Head of Account				Total provision including reappropriation	
				Reappropriated from	Amount (In Rupees)	Reappropriated to	Amount (In Rupees)	Head of Account	Amount (In Rupees)
1	Revenue	G.O.No. RD 39 MUNOMU 2010, Dated : 10-03-2010	14	2030-02-102-0-00-015-Subsidary Expenses	50,00,000	2030-03-001-1-00-071 Building Expenses	50,00,000	2030-03-001-1-00-071 Building Expenses	25939000

T.K. RAMACHANDRA
Under Secretary to Government,
Revenue Department
(Stamps & Registration)

ಪಿ.ಆರ್.750

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಯಾದಗಿರಿ ಜಿಲ್ಲಾ ಪಂಚಾಯತ್‌ಗೆ ನಿಧಿ ಸ್ಥಾಪನೆ ಬಗ್ಗೆ.

ಉಲ್ಲೇಖ : 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಆರ್‌ಡಿ 59 ಭೂ ದಾಪು 2008 ದಿನಾಂಕ : 26–12–2009.
2. ಸರ್ಕಾರದ ಅಧಿಸೂಚನೆ ಸಂಖ್ಯೆ : ಗ್ರಾಅಪ 227(1) ಜಿಪಸ 2009 ದಿನಾಂಕ : 29–12–2009.

ಪ್ರಸ್ತಾವನೆ :

ಸರ್ಕಾರವು ರಾಜ್ಯದಲ್ಲಿ ಯಾದಗಿರಿ ಎಂಬ ಹೊಸ ಜಿಲ್ಲೆಯನ್ನು ರಚಿಸಿದ್ದು, ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತಿಯನ್ನು ರಚಿಸಲಾಗಿದೆ. ಜಿಲ್ಲಾ ಪಂಚಾಯತಿಗಳ ಕಾರ್ಯ ನಿರ್ವಹಣೆಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಸೆಕ್ಷನ್ 225ರ ಮೇರೆಗೆ ಪ್ರತಿಯೊಂದು ಜಿಲ್ಲಾ ಪಂಚಾಯತ್‌ನಲ್ಲಿ ಆರ್ಥಿಕ ವಹಿವಾಟುಗಳ ನಿರ್ವಹಣೆಗಾಗಿ ಜಿಲ್ಲಾ ಪಂಚಾಯತ್ ನಿಧಿಯನ್ನು ಸ್ಥಾಪಿಸಬೇಕಾಗಿರುತ್ತದೆ. ಆದ್ದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 01 ಎಎಫ್‌ಎನ್ 2010, ಬೆಂಗಳೂರು, ದಿನಾಂಕ : 02ನೇ ಮಾರ್ಚ 2010

ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಯಾದಗಿರಿ ಜಿಲ್ಲಾ ಪಂಚಾಯತಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಸೆಕ್ಷನ್ 225 ಮತ್ತು ಕರ್ನಾಟಕ ಜಿಲ್ಲಾ ಪಂಚಾಯತ್ (ಹಣಕಾಸು ಮತ್ತು ಲೆಕ್ಕಗಳು) ನಿಯಮಗಳು 1996ರಲ್ಲಿನ ನಿಯಮ 5ರ ಮೇರೆಗೆ ಲೆಕ್ಕ ಶೀರ್ಷಿಕೆ "8448–ಸ್ಥಳೀಯ ನಿಧಿ ಠೇವಣಿಗಳು–00–109– ಪಂಚಾಯತ್ ಸಂಸ್ಥೆಗಳ ನಿಧಿ–2–ಜಿಲ್ಲಾ ಪಂಚಾಯತಿ ನಿಧಿ–21–ಯಾದಗಿರಿ ಜಿಲ್ಲಾ ಪಂಚಾಯತಿ ನಿಧಿ" (8448–00–109–2–21)ಯನ್ನು ದಿನಾಂಕ : 1–4–2010 ರಿಂದ ಸ್ಥಾಪಿಸಲು ಸರ್ಕಾರದ ಮಂಜೂರಾತಿ ನೀಡಿದೆ.

ಹೀಗೆ ಸ್ಥಾಪಿಸಲಾಗುವ ಜಿಲ್ಲಾ ಪಂಚಾಯತ್ ನಿಧಿಯನ್ನು ಸರ್ಕಾರದ ಅದೇಶ ಸಂಖ್ಯೆ : ಎಫ್‌ಡಿ 7 ಜಡ್‌ಪಿಎ 2003 ದಿನಾಂಕ : 8–9–2004 ರಲ್ಲಿನ ಸೂಚನೆಗಳ ಅನ್ವಯ 3 ವರ್ಗಗಳಲ್ಲಿ ಅಂದರೆ ನಿಧಿ–I, II ಮತ್ತು III ರಲ್ಲಿ ಜಿಲ್ಲಾ ಪಂಚಾಯತ್, ಖಜಾನೆ ಹಾಗೂ ಮಹಾಲೇಖಪಾಲರ ಕಛೇರಿಯಲ್ಲಿ ನಿರ್ವಹಿಸತಕ್ಕದ್ದು.

ಈ ನಿಧಿಯನ್ನು ನಿರ್ವಹಿಸಲು ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಯಾದಗಿರಿ ಇವರನ್ನು ಹಣ ಸೆಳೆಯುವ ಹಾಗೂ ಬಟವಾಡೆ ಅಧಿಕಾರಿಯಾಗಿ ಘೋಷಿಸಿ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ : ಆಇ 10 ವೆಚ್ಚ-6/2010 ದಿನಾಂಕ : 02-02-2010 ರಲ್ಲಿ ನೀಡಲಾದ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎ. ಎಸ್. ಶಿವಾನಂದಾಚಾರ್ಯ
ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾ.ಅ. ಮತ್ತು ಪಂಚಾಯತ್ ರಾಜ್ ಇಲಾಖೆ.

ಪಿ.ಆರ್.751

ನಗರಾಭಿವೃದ್ಧಿ ಸಚಿವಾಲಯ

ವಿಷಯ : ಶ್ರೀಮತಿ ನಂದಿತಾ ಗುಪ್ತ, ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು (ಪರಿವೀಕ್ಷಣಾ ಅವಧಿ ಮೇಲಿರುವ) ಇವರನ್ನು ಸೇವೆಯಿಂದ ವಿಮುಕ್ತಿಗೊಳಿಸುವ Discharge ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ : ನಅಇ 09 ನಯೋಸೇ 2009, ದಿನಾಂಕ : 29-05-2009.
2. ಶ್ರೀಮತಿ ನಂದಿತಾ ಗುಪ್ತ ರವರ ಮನವಿ ಅರ್ಜಿ ದಿನಾಂಕ : 19-11-2009.

ಪ್ರಸ್ತಾವನೆ :

ಶ್ರೀಮತಿ ನಂದಿತಾ ಗುಪ್ತ, ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು (ನಿಯೋಜನೆ ಮೇಲೆ, ನಗರ ಭೂ ಸಾರಿಗೆ ನಿರ್ದೇಶನಾಲಯ, ಬೆಂಗಳೂರು) ಇವರು ಕರ್ನಾಟಕ ಲೋಕ ಸೇವಾ ಅಯೋಗದಿಂದ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಹುದ್ದೆಗೆ ನೇರ ನೇಮಕಾತಿಯಡಿ ಆಯ್ಕೆ ಹೊಂದಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ : ನಅಇ 82 ನಯೋಸೇ 2004, ದಿನಾಂಕ : 16-9-2004 ರಲ್ಲಿ ಸದರಿ ಹುದ್ದೆಗೆ ನೇಮಕಾತಿ ಹೊಂದಿದ್ದು, ದಿನಾಂಕ : 1-10-2004 ರಂದು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಸದರಿಯವರು 2 ವರ್ಷದ ಪರಿವೀಕ್ಷಣಾ ಅವಧಿಯಲ್ಲಿ ಸದರಿ ಹುದ್ದೆಗೆ ನಿಗಧಿಪಡಿಸಲಾದ ಇಲಾಖಾ ಪರಿಕ್ಷೆಯಾದ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿಲ್ಲವಾದ್ದರಿಂದ ಇವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣೆ) ನಿಯಮಗಳು, 1977ರ ನಿಯಮ 4(i)(ii)ರನ್ವಯ 1 ವರ್ಷದ ಅವಧಿಗೆ (ದಿನಾಂಕ : 30-9-2007) ವಿಸ್ತರಿಸಲಾಗಿತ್ತು. ಆದರೆ ಸದರಿ ಅಧಿಕಾರಿಯವರು ವಿಸ್ತರಿಸಲಾದ ಪರಿವೀಕ್ಷಣಾ ಅವಧಿಯೊಳಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿಲ್ಲದ ಕಾರಣ ದಿನಾಂಕ : 21-2-2009 ರಂದು ಅವರಿಗೆ ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿತ್ತು. ಅದಕ್ಕೆ ಉತ್ತರವಾಗಿ ಸದರಿ ಅಧಿಕಾರಿಯವರು ದಿನಾಂಕ : 24-04-2009 ರಂದು ಉತ್ತರ ನೀಡಿ ಕೆಲಸದ ಒತ್ತಡದಿಂದ ಸದರಿ ಪರಿಕ್ಷೆಯಲ್ಲಿ ತೇರ್ಗಡೆ ಹೊಂದಲು ಸಾಧ್ಯವಾಗಲಿಲ್ಲವೆಂದು ತಿಳಿಸಿ ಇನ್ನೂ 1 ವರ್ಷ ಅಂದರೆ ದಿನಾಂಕ : 30-09-2009ರವರೆಗೆ ತಮ್ಮ ಪರಿವೀಕ್ಷಣಾ ಅವಧಿಯನ್ನು ವಿಸ್ತರಿಸುವಂತೆ ಕೋರಿರುತ್ತಾರೆ. ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ : (I)ರ ಸರ್ಕಾರದ ಆದೇಶ ದಿನಾಂಕ : 29-05-2009 ರಲ್ಲಿ ಸದರಿಯವರ ಪರಿವೀಕ್ಷಣಾ ಅವಧಿಯನ್ನು ದಿನಾಂಕ : 30-09-2009ರವರೆಗೆ ವಿಸ್ತರಿಸಲಾಗಿತ್ತು. ವಿಸ್ತರಿಸಿದ ಈ ಪರಿವೀಕ್ಷಣಾ ಅವಧಿಯಲ್ಲಿಯೂ ಸಹ ಸದರಿಯವರು ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ನೀಡಿರುವುದಿಲ್ಲ. ಸದರಿಯವರು ಪರಿವೀಕ್ಷಣಾ ಅವಧಿ ಮೇಲಿದ್ದ 2 ವರ್ಷ ಮತ್ತು ಪರಿವೀಕ್ಷಾವಧಿ ವಿಸ್ತರಿಸಿದ ಅವಧಿ 3 ವರ್ಷ ಸೇರಿ ಒಟ್ಟು 5 ವರ್ಷಗಳಾದರೂ ಸಹ ಇವರು ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಲು ಆಸಕ್ತಿ ತೋರದೆ ನಿರ್ಲಕ್ಷ್ಯ ತೋರಿರುತ್ತಾರೆ. ಇದಲ್ಲದೆ, ಶ್ರೀಮತಿ. ನಂದಿತಾ ಗುಪ್ತ ರವರು ಮೇಲೆ ಓದಲಾದ ಕ್ರಮ ಸಂಖ್ಯೆ: (2) ರನ್ವಯ ಸರ್ಕಾರಕ್ಕೆ ಸಲ್ಲಿಸಿದ ಮನವಿ ಅರ್ಜಿಯಲ್ಲಿ ಖಾಸಗಿ ರಂಗದಲ್ಲಿ ತನ್ನ ವೃತ್ತಿ ಜೀವನವನ್ನು ತೊಡಗಿಸಿಕೊಳ್ಳಲು ಇಚ್ಛಿಸಿದ್ದು, ತನ್ನನ್ನು ಈ ಹುದ್ದೆಯಿಂದ ಬಿಡುಗಡೆ ಮಾಡಿ ಈ ರಾಜೀನಾಮೆ ಪತ್ರ ಅಂಗೀಕರಿಸಬೇಕೆಂದು ಕೋರಿದ್ದಾರೆ.

ಈ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ. ನಂದಿತಾ ಗುಪ್ತ ರವರು ಸರ್ಕಾರಿ ಹುದ್ದೆಯನ್ನು ಹೊಂದಲು ಹಾಗೂ ಸದರಿ ಹುದ್ದೆಯಲ್ಲಿ ಅವರನ್ನು ಮುಂದುವರೆಸುವುದು ಸೂಕ್ತವಲ್ಲವೆಂದು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 169 ನಯೋಸೇ 2009, ಬೆಂಗಳೂರು, ದಿನಾಂಕ : 10ನೇ ಮಾರ್ಚಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀಮತಿ. ನಂದಿತಾ ಗುಪ್ತ, ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು ಹಾಲಿ ನಿಯೋಜನೆ ಮೇಲೆ, ನಗರ ಭೂ ಸಾರಿಗೆ ನಿರ್ದೇಶನಾಲಯ, ಬೆಂಗಳೂರು ಇಲ್ಲಿ

ಕಾರ್ಯನಿರ್ವಹಿಸುತ್ತಿರುವ ಇವರು 2 ವರ್ಷಗಳ ಪರಿವೀಕ್ಷಣಾ ಅವಧಿ ಹಾಗೂ ನಂತರ ವಿಸ್ತರಿಸಿದ 3 ವರ್ಷಗಳ ಪರಿವೀಕ್ಷಣಾ ಅವಧಿ ಸೇರಿ ಒಟ್ಟು 5 ವರ್ಷಗಳವರೆವಿಗೂ ಹುದ್ದೆಗೆ ನಿಗಧಿಪಡಿಸಿದ ಕನ್ನಡ ಭಾಷಾ ಪರಿಕ್ಷೆಯನ್ನು ತೇರ್ಗಡೆ ಹೊಂದದೇ ನಿರಾಸಕ್ತಿ ತೋರಿಸಿರುವುದರಿಂದ ಸದರಿಯವರನ್ನು ಸರ್ಕಾರಿ ಸೇವೆಯಲ್ಲಿ (ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಹುದ್ದೆ) ಮುಂದುವರಿಸುವುದು ಸೂಕ್ತವಲ್ಲವೆಂದು ಸರ್ಕಾರವು ಪರಿಗಣಿಸಿ ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಾವಳಿ, 1977ರ ನಿಯಮ 6 ರನ್ವಯ ಸರ್ಕಾರಿ ಸೇವೆಯಿಂದ ಈ ಕೂಡಲೇ ಜಾರಿಗೆ ಬರುವಂತೆ ವಿಮುಕ್ತಿಗೊಳಿಸಿ (Discharge) ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಿ.ಟಿ. ನಾರಾಯಣಸ್ವಾಮಿ
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪಿ.ಆರ್.752

ನಗರಾಭಿವೃದ್ಧಿ ಸಚಿವಾಲಯ

ವಿಷಯ : ಹೊಸಕೋಟೆ ಪಟ್ಟಣದ ಸರ್‌॥ ಎಂ. ವಿಶ್ವೇಶ್ವರಯ್ಯ ಬಡಾವಣೆ ಪ್ರದೇಶಕ್ಕೆ ನೀರು ಸರಬರಾಜು ಅಭಿವೃದ್ಧಿಪಡಿಸುವ ರೂ.470.00 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ : ವ್ಯ.ನಿ. ಕನನೀಸ ಮತ್ತು ಒಚ ಮಂಡಳಿ, ಬೆಂಗಳೂರು ರವರ ಪತ್ರ ಸಂಖ್ಯೆ : ಕಜಮಂ/ಮುಅ/ಅಶ್ರೆ.ಕಾಅ–1/ಸಅ–5/ಹೊಸಕೋಟೆ/3446/2009–10,ದಿನಾಂಕ 29.1.2009.

ಪ್ರಸ್ತಾವನೆ :

ಹೊಸಕೋಟೆ ಪಟ್ಟಣದ ಜನಸಂಖ್ಯೆಯು 1991ರ ಜನಗಣತಿಯಂತೆ 25,516 ಹಾಗೂ 2001ರ ಜನಗಣತಿ ಪ್ರಕಾರ 11,610 ಇರುತ್ತದೆ. ಪಟ್ಟಣಕ್ಕೆ ಮಂಡಳಿ ವತಿಯಿಂದ 1998–99ನೇ ಸಾಲಿನಲ್ಲಿ ರೂ.19.50 ಲಕ್ಷಗಳ ಮೊತ್ತದ ಅಂದಾಜಿನಲ್ಲಿ ನೀರು ಸರಬರಾಜು ಯೋಜನೆಯನ್ನು ಅನುಷ್ಠಾನಗೊಳಿಸಿ, ನಂತರ ಪುರಸಭೆ ವತಿಯಿಂದ ಅವಶ್ಯ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುತ್ತಾರೆ.

ಸರ್‌॥ ಎಂ. ವಿಶ್ವೇಶ್ವರಯ್ಯ ಬಡಾವಣೆಯು, ಹೊಸ ಬಡಾವಣೆಯಾಗಿದ್ದು, ಈ ಬಡಾವಣೆಗೆ ನೀರು ಸರಬರಾಜು ವ್ಯವಸ್ಥೆ ಸರಿಯಾಗಿ ಇರುವುದಿಲ್ಲ. ಆದ್ದರಿಂದ, ಸಮರ್ಪಕ ನೀರು ಸರಬರಾಜು ವ್ಯವಸ್ಥೆಯನ್ನು ಕಲ್ಪಿಸಲು ರೂ.470.00 ಲಕ್ಷಗಳ ಅಂದಾಜಿನಲ್ಲಿ 2038ರ ಇಸವಿಯಲ್ಲಿ ನಿರೀಕ್ಷಿಸಲಾದ 19,128 ಜನಸಂಖ್ಯೆಗೆ ನೀರು ಒದಗಿಸಲು ಯೋಜನೆಯನ್ನು ವಿನ್ಯಾಸಿಸಲಾಗಿದೆ. ಸದರಿ ಅಂದಾಜಿನಲ್ಲಿ 10 ಸಂಖ್ಯೆ ಕೊಳವೆ ಬಾವಿಗಳನ್ನು ಕೊರೆಯಲು ಮತ್ತು ಅವುಗಳಿಗೆ ಸೂಕ್ತ ವಿದ್ಯುತ್ ಚಾಲಿತ ಪಂಪುಗಳನ್ನು ಅಳವಡಿಸಲು ಹಾಗೂ ಹಾಲಿ ಗಟ್ಟಿಗನಟ್ಟಿ ರಸ್ತೆಯಲ್ಲಿ ಇರುವ ಸಂಪಿಗೆ ಪಿ.ವಿ.ಸಿ. ಕೊಳವೆ ಮಾರ್ಗ ಅಳವಡಿಕೆ ಮತ್ತು ಹಾಲಿ ಇರುವ ಪಂಪ್ ಹೌಸ್‌ನಲ್ಲಿ 2 ಸಂಖ್ಯೆಯ 50 ಅಶ್ವಶಕ್ತಿ ಸಾಮರ್ಥ್ಯದ ಪಂಪುಗಳ ಅಳವಡಿಕೆ ಹಾಗೂ ಪಂಪ್ ಮನೆಯಿಂದ ಜೂನಿಯರ್ ಕಾಲೇಜ್ ಆವರಣ ಹಾಗೂ ಮಜ್ಜಿನಕುಂಟೆಯಲ್ಲಿ 5.00 ಲಕ್ಷ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗಾರಗಳ ನಿರ್ಮಾಣ ಹಾಗೂ ಸದರಿ ಜಲಸಂಗ್ರಹಾಗಾರಕ್ಕೆ ಡಿ.ಐ. ಏರು ಕೊಳವೆ ಮಾರ್ಗ ಅಳವಡಿಸಲು ಮತ್ತು ಸರ್. ಎಂ. ವಿಶ್ವೇಶ್ವರಯ್ಯ ಬಡಾವಣೆಗೆ ವಿತರಣಾ ಕೊಳವೆ ಮಾರ್ಗವನ್ನು ಅಳವಡಿಸಲು ಅವಕಾಶ ಕಲ್ಪಿಸಲಾಗಿದೆ.

ಅದರಂತೆ, ಯೋಜನೆಯ ಅಂದಾಜನ್ನು ಮಂಡಳಿಯ 2008–09ನೇ ಸಾಲಿನ ದರಪಟ್ಟಿಯನ್ವಯ (2009–10ನೇ ಸಾಲಿಗೆ ಮುಂದುವರೆಸಿದೆ) ರೂ.470.00 ಲಕ್ಷಗಳಲ್ಲಿ ಈ ಕೆಳಕಂಡ ಆರ್ಥಿಕ ಮಾದರಿಯಲ್ಲಿ ನಗರ ನೀರು ಸರಬರಾಜು ಯೋಜನೆಯಡಿ ಕೈಗೆತ್ತಿಕೊಳ್ಳಲು ಹೊಸಕೋಟೆ ಪಟ್ಟಣ ಪುರಸಭೆಯ ಮೇಲುಸಹಿ ಪಡೆದು, ವ್ಯವಸ್ಥಾಪಕ ನಿರ್ದೇಶಕರು, ಕನನೀಸ ಮತ್ತು ಒಚ ಮಂಡಳಿ ರವರು ಆಡಳಿತಾತ್ಮಕ ಅನುಮೋದನೆ ಕೋರಿ ಮೇಲೆ ಓದಲಾದ ಪತ್ರದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸರ್ಕಾರದಿಂದ ಅನುದಾನ ಶೇ. 50	ರೂ. 235.00 ಲಕ್ಷಗಳು
ಆರ್ಥಿಕ ಸಂಸ್ಥೆಯಿಂದ ಸಾಲ ಶೇ. 50	ರೂ. 235.00 ಲಕ್ಷಗಳು
ಒಟ್ಟು	**ರೂ. 470.00 ಲಕ್ಷಗಳು**

ಈ ಯೋಜನೆಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2009–10ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಪ್ರವರ್ಗ 'ಡಿ' ಯಡಿಯಲ್ಲಿ ಸೇರಿಸಿ ರೂ. 157.00 ಲಕ್ಷಗಳನ್ನು ಅನುವು ಮಾಡಲಾಗಿದೆ.

ಮಂಡಳಿಯ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಸಿದೆ.

ಸರ್ಕಾರದ ಆದೇಶ ಸಂಖ್ಯೆ : ನಅಇ 2 ಯುಡಬ್ಲ್ಯೂಎಸ್ 2010 ಬೆಂಗಳೂರು, ದಿನಾಂಕ : 12–03–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹೊಸಕೋಟೆ ಪುರಸಭೆಯ ಸರ್: ಎಂ. ವಿಶ್ವೇಶ್ವರಯ್ಯ ಬಡಾವಣೆ ಪ್ರದೇಶಕ್ಕೆ ನೀರು ಸರಬರಾಜು ಅಭಿವೃದ್ಧಿಪಡಿಸುವ ಕಾಮಗಾರಿಗಳನ್ನು ಅಂದಾಜು ರೂ.470.00 ಲಕ್ಷಗಳಲ್ಲಿ (ರೂ. ನಾಲ್ಕು ನ್ನೂರ ಎಪ್ಪತ್ತು ಲಕ್ಷಗಳು ಮಾತ್ರ) ಕಲ್ಪಿಸುವ ಯೋಜನೆಯನ್ನು ನಗರ ನೀರು ಸರಬರಾಜು ಯೊಜನೆಯಡಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಕೈಗೆತ್ತಿಕೊಳ್ಳಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

1) ETP and WCE escalation charges should not be more than 5% and the estimates should be revised accordingly.
2) Water rates as proposed by KUWS&DB have to be implemented to meet O&M cost.
3) KTPP provisions, quality control and timely completion of the project should be ensured.
4) ಸದರಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ನ್ನು ಪಾಲಿಸುವುದು.
5) ಅಂದಾಜು ಪರಿಷ್ಕರಣೆಗೆ ಯಾವುದೇ ಅವಕಾಶ ನೀಡಕೂಡದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ವಿಭಾಗ ರವರ ಟಿಪ್ಪಣಿ ಸಂಖ್ಯೆ : ವನಇ 60 ಅಂಅಸ 2010 ದಿನಾಂಕ 6–3–2010 ರಲ್ಲಿ ನೀಡಿರುವ ಸಹಮತಿಯನ್ವಯ ಮತ್ತು ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ 16–5–2008 ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಸಿ.ಟಿ. ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಪಿ.ಆರ್. 802

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಗೆ ಸೃಜಿಸಲಾಗಿರುವ ಆಯುಕ್ತರ ಹುದ್ದೆಯನ್ನು ಮುಂದರವರೆಸುವ ಕುರಿತು.

ಓದಲಾಗಿದೆ :
1. ಆದೇಶ ಸಂಖ್ಯೆ ಸಂಕಇ 12 ಕೆಎಂಯು 2004, ದಿ : 25–3–2004.
2. ಸರ್ಕಾರಿ ಆದೇಶ ಸಂಖ್ಯೆ ಸಂಕಇ 9 ಕೆಎಂಯು 2006, ದಿ : 14–2–2006
3. ಸರ್ಕಾರಿ ಆದೇಶ ಸಂಖ್ಯೆ ಸಂಕಇ 46 ಕೆಎಂಯು 2007, ದಿ : 26–3–2007
4. ಸರ್ಕಾರಿ ಆದೇಶ ಸಂಖ್ಯೆ ಸಂಕಇ 284 ಕೆಎಂಯು 2007, ದಿ : 04–02–2008
5. ಸರ್ಕಾರದ ಆದೇಶ ಸಂಖ್ಯೆ ಕಸಂವಾಪ್ರ 46 ಕೆಎಂಯು 2009, ದಿ : 26–06–2009
6. ಆಯುಕ್ತರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ, ಇವರ ಪತ್ರ ಸಂಖ್ಯೆ ಆಪ್ರಾಸಂಪ/ಇಎಸ್‌ಟಿ/ಅ.ಹು.ಮು./2009–10/494, ದಿನಾಂಕ 08–02–2010.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ದಿನಾಂಕ 25–03–2004ರ ಸರ್ಕಾರಿ ಆದೇಶದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಕಛೇರಿಗೆ ಭಾರತೀಯ ಆಡಳಿತ ಸೇವೆಯ ಸೂಪರ್‌ಟೈಮ್ ವೇತನ ಶ್ರೇಣಿಯಲ್ಲಿ (ರೂ.18400–500–22400) ಆಯುಕ್ತರ ಹುದ್ದೆಯನ್ನು ತಾತ್ಕಾಲಿಕವಾಗಿ ಒಂದು ವರ್ಷದ ಅವಧಿಗೆ ಸೃಜಿಸಲಾಗಿದೆ. ಮೇಲೆ ಓದಲಾದ (5)ರ ದಿನಾಂಕ 26–06–2009ರ ಸರ್ಕಾರಿ ಆದೇಶದಲ್ಲಿ ಸದರಿ ಹುದ್ದೆಯನ್ನು ದಿನಾಂಕ 11–2–2009 ರಿಂದ ಒಂದು ವರ್ಷದವರೆಗೆ ಮುಂದುವರೆಸಲಾಗಿತ್ತು. ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಇವರು ಮೇಲೆ (6) ರಲ್ಲಿ ಓದಲಾದ ದಿನಾಂಕ 08–02–2010ರ ಪತ್ರದಲ್ಲಿ ಪರಂಪರೆ ಇಲಾಖೆಯ ಕಾರ್ಯವ್ಯಾಪ್ತಿಯು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದು, ರಾಜ್ಯಾದ್ಯಂತ ವಿದ್ಯಾ ಸಂಸ್ಥೆಗಳ ಮೂಲಕ ವಿದ್ಯಾರ್ಥಿಗಳು ಹಾಗೂ

ಸಾರ್ವಜನಿಕರಲ್ಲಿ ಪಾರಂಪರಿಕ ಇತಿಹಾಸ ತಿಳುವಳಿಕೆ ಮೂಡಿಸುವ ನಿಟ್ಟಿನಲ್ಲಿ ಪಾರಂಪರಿಕ ಕೂಟಗಳನ್ನು ಸ್ಥಾಪಿಸಲಾಗಿದ್ದು, ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ತಿಳಿಸಿ, ಮೈಸೂರು, ಶ್ರೀರಂಗಪಟ್ಟಣ, ಗುಲ್ಬರ್ಗ, ಕಿತ್ತೂರು, ಬಿಜಾಪುರ ಹಾಗೂ ಬೀದರ್ ನಗರಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿರುವುದರಿಂದ 2009-10ನೇ ಸಾಲಿನಲ್ಲಿ ಮಂಜೂರಾಗಿರುವ ಪರಂಪರಾ ಸಂರಕ್ಷಣಾ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಶ್ರಮವಹಿಸಲಾಗುತ್ತಿದ್ದು, ಇದಕ್ಕಾಗಿ ಸಿದ್ಧಪಡಿಸಿರುವ ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿರುವುದರಿಂದ ಮತ್ತು ಪ್ರಸಕ್ತ ಸಾಲಿಗೆ ಸರ್ಕಾರವು ಪರಂಪರೆ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ಉದ್ದೇಶಿತ ಕಾರ್ಯಗಳಿಗೆ ಉಪಯೋಗಿಸಿಕೊಳ್ಳುವ ಸಲುವಾಗಿ ಪರಂಪರೆ ಆಯುಕ್ತರ ಹುದ್ದೆಯನ್ನು ದಿನಾಂಕ 11-02-2010 ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಲು ಸರ್ಕಾರದ ಆದೇಶ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಈ ಹುದ್ದೆಯನ್ನು ದಿನಾಂಕ 11-02-2010 ರಿಂದ ಇನ್ನೊಂದು ವರ್ಷದ ಅವಧಿಗೆ ಮುಂದುವರೆಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ,

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 39 ಕೆಎಂಯು 2010 ಬೆಂಗಳೂರು, ದಿನಾಂಕ : 18-03-2010

ಪ್ರಸ್ತಾವನೆಯಲ್ಲಿ. ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ : ಸಂಕಇ 12 ಕೆಎಂಯು 2004, ದಿನಾಂಕ 25-3-2004 ರಲ್ಲಿ ಸೃಜಿಸಲಾಗಿರುವ ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಈ ಹುದ್ದೆಯನ್ನು ತಾತ್ಕಾಲಿಕವಾಗಿ ದಿನಾಂಕ 11-2-2010 ರಿಂದ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ, ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರವು ಮುಂದುವರೆಸಿ ಆದೇಶಿಸಿದೆ.

ಈ ಆದೇಶವನ್ನು ದಿನಾಂಕ 06-03-2010 ರ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ ಶಿಇ 187 ಐಎಫ್(ಬಿ&ಎ) 2010 ರಲ್ಲಿ ನೀಡಿದ ಸಹಮತಿ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10-7-96 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ. ಕೆ. ಧರ್ಮರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಪಿ.ಆರ್. 803

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಚಾಮರಾಜನಗರ ಜಿಲ್ಲೆ, ಚಾಮರಾಜನಗರ ತಾಲ್ಲೂಕು, ಬಿಳಿಗಿರಿರಂಗನ ಬೆಟ್ಟದಲ್ಲಿರುವ ದಿವಾನ್ ಪೂರ್ಣಯ್ಯ ಸ್ಮಾರಕ ಛತ್ರದ ಅಭಿವೃದ್ಧಿ ಕಾಮಗಾರಿ – ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :
1. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಅವರ ಪತ್ರ ಸಂಖ್ಯೆ ಡಿಎಎಂ/ಎಸಿಟಿ/6/136/2009-10, ದಿನಾಂಕ 21-11-2009 ಮತ್ತು 13.01.2010.
2. ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ 02-02-2010.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ದಿನಾಂಕ 21-11-2009 ರ ಪತ್ರದಲ್ಲಿ ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರು ಪ್ರಸ್ತಾವನೆ ಸಲ್ಲಿಸಿ 2009-10ನೇ ಆರ್ಥಿಕ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮದಡಿ ಲೆಕ್ಕಶೀರ್ಷಿಕೆ 2205-00-103-0-01 (ಯೋಜನೆ) 059 ಇತರೆ ಖರ್ಚುಗಳ ಅಡಿಯಲ್ಲಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ ತಾಲ್ಲೂಕು, ಬಿಳಿಗಿರಿರಂಗನ ಬೆಟ್ಟದಲ್ಲಿರುವ ದಿವಾನ್ ಪೂರ್ಣಯ್ಯ ಸ್ಮಾರಕ ಛತ್ರದ ಅಭಿವೃದ್ಧಿ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ, ಚಾಮರಾಜನಗರ ಇವರಿಂದ ಕೈಗೊಳ್ಳಲು ರೂ.23.00 ಲಕ್ಷಗಳ ಅನುದಾನವನ್ನು ಕ್ರಿಯಾಯೋಜನೆಯಲ್ಲಿ ನಿಗದಿಗೊಳಿಸಲಾಗಿದೆ ಎಂದು ತಿಳಿಸಿರುವರು.

ಮೇಲೆ (2) ರಲ್ಲಿ ಓದಲಾದ ದಿನಾಂಕ 02-02-2010 ರ ಸರ್ಕಾರಿ ಪತ್ರದಲ್ಲಿ ಉಲ್ಲೇಖಿತ ಕಾಮಗಾರಿಯ ಬಗೆಗಿನ ತಾಂತ್ರಿಕ ಸಲಹಾ ಸಮಿತಿಯಲ್ಲಿ ಅನುಮೋದನೆಗೊಂಡ ಅಂದಾಜು ಪಟ್ಟಿ ಮತ್ತು ನೀಲಿ ನಕ್ಷೆಯನ್ನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ಇವರಿಂದ ಪಡೆದು ಒದಗಿಸುವಂತೆ ಕೋರಲಾಗಿತ್ತು.

ನಿರ್ದೇಶಕರು ದಿನಾಂಕ 13–01–2010 ರ ಪತ್ರದ ಮುಖಾಂತರ ದಿವಾನ್ ಪೂರ್ಣಯ್ಯ ಸ್ಮಾರಕ ಛತ್ರದ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದ ಅಂದಾಜು ಪಟ್ಟಿ ಮತ್ತು ನೀಲಿ ನಕ್ಷೆಯನ್ನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ಇವರಿಂದ ಪಡೆದು ಒದಗಿಸಿ ರೂ. 23.00 ಲಕ್ಷಗಳ ಅನುದಾನವನ್ನು ಪೇಯಿಸ್ ರಸೀತಿ ಮೂಲಕ, ಬಳಕೆ ಪ್ರಮಾಣ ಪತ್ರವನ್ನು ಒದಗಿಸುವ ಷರತ್ತಿಗೊಳಪಟ್ಟು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಿರುವರು.

ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರು ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ರೂ.23.00 ಲಕ್ಷಗಳನ್ನು (ರೂಪಾಯಿ ಇಪ್ಪತ್ಮೂರು ಲಕ್ಷಗಳು ಮಾತ್ರ) ಪೇಯಿಸ್ ರಸೀತಿ ಮೂಲಕ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ಇವರಿಗೆ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 54 ಕೆಎಂಯು 2009, ಬೆಂಗಳೂರು, ದಿನಾಂಕ : 12–03–2010

ಚಾಮರಾಜನಗರ ಜಿಲ್ಲೆ, ಚಾಮರಾಜನಗರ ತಾಲ್ಲೂಕು, ಬಿಳಿಗಿರಿರಂಗನ ಬೆಟ್ಟದಲ್ಲಿರುವ ದಿವಾನ್ ಪೂರ್ಣಯ್ಯ ಸ್ಮಾರಕ ಛತ್ರದ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ಇವರಿಗೆ ಬಳಕೆ ಪ್ರಮಾಣ ಪತ್ರಗಳನ್ನು ಒದಗಿಸುವ ಷರತ್ತಿಗೊಳಪಟ್ಟು ರೂ.23.00 ಲಕ್ಷಗಳನ್ನು (ರೂಪಾಯಿ ಇಪ್ಪತ್ಮೂರು ಲಕ್ಷಗಳು ಮಾತ್ರ) ಆಡಳಿತಾತ್ಮಕ ಅನುಮೋದನೆ ನೀಡಿ DC Bill ಮೂಲಕ ಬಿಡುಗಡೆ ಮಾಡಲು ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ಇಲಾಖೆ, ಮೈಸೂರು ಇವರಿಗೆ ಸರ್ಕಾರದ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2205–00–103–0–01 (ಯೋಜನೆ) 059 ಇತರೆ ಖರ್ಚುಗಳು ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ 25–02–2010 ರ ಟಿಪ್ಪಣಿ ಸಂಖ್ಯೆ : ಶಿಇ 407 ಐಎಫ್ (ಬಿ&ಎ) 2010 ರಲ್ಲಿ ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ವಯ ಹಾಗೂ ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ 10–7–96 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದ ಪ್ರತ್ಯಾಯೋಜನೆಯನ್ವಯ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಆಇ 01 ಟಿಎಫ್‌ಸಿ 2009, ದಿನಾಂಕ 31–01–2009 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
(ಎಂ. ಕೆ. ಧರ್ಮರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಪಿ.ಆರ್. 804

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಶ್ರೀ ಬಸವರಾಜ ಕುಕ್ಕುಂದ, ನಿವೃತ್ತ ಮುಖ್ಯ ಇಂಜಿನಿಯರ್ ಇವರ ವಿರುದ್ಧ ಇಲಾಖಾ ವಿಚಾರಣೆ–ದಂಡನೆ ವಿಧಿಸಿ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 21 ಎಸ್‌ಇಎನ್ 2002, ದಿನಾಂಕ 22.06.2007
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು, ಇವರ ವಿಚಾರಣಾ ವರದಿ, ದಿನಾಂಕ 17–10–2008.
3. ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ : ಸಿಆಸುಇ 21 ಎಸ್‌ಇಎನ್ 2002, ದಿನಾಂಕ 04–05–2009
4. ಶ್ರೀ ಬಸವರಾಜ ಕುಕ್ಕುಂದ, ನಿವೃತ್ತ ಮುಖ್ಯ ಇಂಜಿನಿಯರ್ ಇವರ ಉತ್ತರ ದಿನಾಂಕ 15–06–2009.
5. ಸರ್ಕಾರದ ಪತ್ರ ಸಂಖ್ಯೆ ಸಿಆಸುಇ 21 ಎಸ್‌ಇಎನ್ 2002, ದಿನಾಂಕ 10–12–2009.
6. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ ಅವರ ಪತ್ರ ಸಂಖ್ಯೆ ಪಿಎಸ್‌ಸಿ 183 ಸಿಎನ್‌ಎಸ್ 09, ದಿನಾಂಕ 18–02–2010.

ಪ್ರಸ್ತಾವನೆ :

ಶ್ರೀ ಬಸವರಾಜ ಕುಕ್ಕುಂದ, ನಿವೃತ್ತ ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಇವರು 1998–2000ದ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲಾ ಯಾದಗಿರಿ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದಾಗ, ಬೆಂಡಬೆಂಬಲ ಸಂಗಮ ರಸ್ತೆ 21,22,23 ಮತ್ತು 24ನೇ ಕಿ.ಮೀ.ಗಳ ಮಧ್ಯೆ ನಬಾರ್ಡ್ ಯೋಜನೆಯಡಿ ಮಾಡಿರುವ

ಡಾಂಬರೀಕರಣ ಕಾಮಗಾರಿಯಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ಹಾಗೂ ವಾಸ್ತವವಾಗಿ ಕಾಮಗಾರಿ ಮಾಡಿರುವುದಕ್ಕಿಂತ ಹೆಚ್ಚಿಗೆ ಕಾಮಗಾರಿ ಮಾಡಿರುವುದರ ಬಗ್ಗೆ ದೃಢೀಕರಿಸಿ ಆ ಮೂಲಕ ಸರ್ಕಾರಕ್ಕೆ ರೂ.3,16,700/– ಗಳಷ್ಟು ನಷ್ಟ ಉಂಟು ಮಾಡಿದ ಆರೋಪಗಳಿಗಾಗಿ ಮೇಲೆ (1) ರಲ್ಲಿ ಓದಲಾದ ದಿನಾಂಕ 15–11–2005ರ ಸರ್ಕಾರಿ ಆದೇಶದಲ್ಲಿ ಇಲಾಖಾ ವಿಚಾರಣೆಯನ್ನು ಆದೇಶಿಸಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಗುಲ್ಬರ್ಗಾ ಅವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ವಿಚಾರಣೆ ನಡೆಸಿದ ವಿಚಾರಣಾಧಿಕಾರಿಗಳು ಮೇಲೆ (2)ರಲ್ಲಿ ಓದಲಾದ ದಿನಾಂಕ 17–10–2008 ರ ವಿಚಾರಣಾ ವರದಿ ಸಲ್ಲಿಸಿ ಆರೋಪ ಕುರಿತಂತೆ ಈ ಕೆಳಕಂಡ ನಿರ್ಣಯ ನೀಡಿದರು.

ಹಿಂದೆ ಇದೇ ಪ್ರಕರಣದಲ್ಲಿ ಭಾಗಿಯಾಗಿದ್ದ ಇತರ ಇಬ್ಬರು ಆರೋಪಿಗಳಾದ ಶ್ರೀ ಭೀಮರೆಡ್ಡಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಪಲ್ಲ ಸತ್ಯಶೀಲ ರೆಡ್ಡಿ, ಸಹಾಯಕ ಇಂಜಿನಿಯರ್ ಅವರುಗಳ ವಿರುದ್ಧ ಸನ್ಮಾನ್ಯ ಉಪ ಲೋಕಾಯುಕ್ತರ ಮೂಲಕ ವಿಚಾರಣೆ ನಡೆದು ಆರೋಪಗಳು ಸಾಬೀತಾಗಿಲ್ಲದ ಕಾರಣ ಅವರುಗಳನ್ನು ಲೋಕೋಪಯೋಗಿ ಇಲಾಖೆಯು ಆರೋಪ ಮುಕ್ತರನ್ನಾಗಿಸದೆ ಬಸವರಾಜ ಕುಕ್ಕುಂದ ಇವರು ಡಾಂಬರೀಕರಣ ಕೆಲಸಕ್ಕಾಗಿ ಭಾಗಶಃ ಸಂಗ್ರಹಿಸಲಾದ ಜಲ್ಲಿ ಪ್ರಮಾಣಕ್ಕೆ ಮಾತ್ರ ಹಣವನ್ನು ಪಾವತಿಸಲಾಗಿದೆಯೆಂದು ತಿಳಿಸಿದ್ದಾರೆ. ವಿವಿಧ ಹಂತಗಳಲ್ಲಿ ಕಾಮಗಾರಿ ಪ್ರಗತಿಯನ್ನು ಪರಿವೀಕ್ಷಣೆ ಮಾಡಿ ಉಪಯೋಗಿಸಿರುವ ಸಾಮಗ್ರಿಗಳ ಪ್ರಮಾಣದ ಬಗ್ಗೆ ದೃಢೀಕರಿಸಿ ನಂತರ ಅಷ್ಟು ಮೊತ್ತವನ್ನು ಪಾವತಿಸಿರುವುದಾಗಿ ತಿಳಿಸಿರುತ್ತಾರೆ. ಸಾಕ್ಷಿಯು ಹಾಜರಾಗಿ ಈಗಾಗಲೇ ಇಬ್ಬರ ಪ್ರಕರಣದಲ್ಲಿ ಲೋಕಾಯುಕ್ತಕ್ಕೆ ನೀಡಿದ ಹೇಳಿಕೆಯೇ ಈಗಲೂ ಸಹ ಅನ್ವಯಿಸುತ್ತದೆ ಎಂದು ತಿಳಿಸಿದ್ದು, ಆದರೆ ಲೋಕಾಯುಕ್ತಕ್ಕೆ ನೀಡಿದ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ. ಈ ಕಾರಣಗಳಿಂದಾಗಿ ಇವರ ವಿರುದ್ಧ ಮಾಡಲಾದ ಆರೋಪವು ಭಾಗಶಃ ರುಜುವಾತಾಗಿದೆ.

ವಿಚಾರಣಾ ವರದಿಯ ಪ್ರತಿಯೊಡನೆ, ಮೇಲೆ (3)ರಲ್ಲಿ ಓದಲಾದ ದಿನಾಂಕ 04–05–2009ರ 2ನೇ ಕಾರಣ ಕೇಳುವ ನೋಟೀಸ್‌ನ್ನು ಆರೋಪಿತ ಅಧಿಕಾರಿಯವರಿಗೆ ಜಾರಿ ಮಾಡಿ ವಿಚಾರಣಾ ವರದಿ ಕುರುತು ಅಹವಾಲು ಇದ್ದಲ್ಲಿ ಅದನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಯಿತು. ಆರೋಪಿತ ಅಧಿಕಾರಿಯವರು ಮೇಲೆ (4)ರಲ್ಲಿ ಓದಲಾದ ದಿನಾಂಕ 15–06–2009ರ ಹೇಳಿಕೆಯನ್ನು ಸಲ್ಲಿಸಿ, ಸದರಿ ಕಾಮಗಾರಿಗೆ ಸಂಬಂಧಿಸಿದಂತೆ ಸೇವೆಯಲ್ಲಿದ್ದ ಉಳಿದ ಇಬ್ಬರು ಆರೋಪಿಗಳ ವಿರುದ್ಧ ಸನ್ಮಾನ್ಯ ಉಪ ಲೋಕಾಯುಕ್ತರ ಮೂಲಕ ಇಲಾಖಾ ವಿಚಾರಣೆ ನಡೆದು ಅವರ ಶಿಫಾರಸ್ಸಿನ ಮೇರೆಗೆ ಲೋಕೋಪಯೋಗಿ ಇಲಾಖೆಯು ಅವರುಗಳನ್ನು ಆರೋಪಮುಕ್ತರನ್ನಾಗಿಸಿದೆ ಎಂದು ಹಾಗೂ ತಾವು ನಿವೃತ್ತಿ ಹೊಂದಿದ ಕಾರಣ ಪ್ರತ್ಯೇಕವಾಗಿ ವಿಚಾರಣೆ ನಡೆಸಲಾಗಿದೆ. ಇದನ್ನು ಬಿಟ್ಟರೆ ಇದು ಜಂಟಿ ಇಲಾಖಾ ವಿಚಾರಣೆಯೇ ಆಗಿದೆ. ತಮ್ಮ ವಿರುದ್ಧ ಆರೋಪದಲ್ಲಿ ರೂ.3,16,700/– ಗಳಿಗೆ ತಮ್ಮನ್ನು ಜವಾಬ್ದಾರರನ್ನಾಗಿ ಮಾಡಲಾಗಿತ್ತು. ಆದರೆ ಇದರಲ್ಲಿ ರೂ. 2,35,120/– ನ್ನು ನಷ್ಟಕ್ಕೆ ಜವಾಬ್ದಾರರಲ್ಲ ತಾವು ಮಾಡಿಲ್ಲ ಎಂದು ತಿಳಿಸಿ ಲೋಕೋಪಯೋಗಿ ಇಲಾಖೆಯು ಇತರ ಆರೋಪಿಗಳನ್ನು ಆರೋಪ ಮುಕ್ತರನ್ನಾಗಿಸಿರುವಂತೆಯೇ ತಮ್ಮನ್ನು ಆರೋಪಣೆ ಮುಕ್ತರನ್ನಾಗಿಸಬೇಕೆಂದು ಕೋರಿದ್ದಾರೆ.

ಸದರಿಯವರ ಲಿಖಿತ ಹೇಳಿಕೆ, ಉತ್ತರದಿಂದಾಗಿ ಪ್ರಕರಣದ ವಿಚಾರಣಾ ವರದಿ ಹಾಗೂ ದಾಖಲೆಗಳೊಡನೆ ಮತ್ತೆ ವಿವರವಾಗಿ ಪರಿಶೀಲಿಸಲಾಗಿದೆ. ಈ ಪ್ರಕರಣದಲ್ಲಿ ತಾನು ಲೋಕಾಯುಕ್ತರ ಮುಂದೆ ಈಗಾಗಲೇ ಇತರ ಇಬ್ಬರ ಪ್ರಕರಣಗಳಲ್ಲಿ ನೀಡಿದ ಹೇಳಿಕೆಯು ಈ ವಿಚಾರಣೆಗೂ ಅನ್ವಯಿಸುತ್ತದೆ ಎಂದು ಸಾಕ್ಷಿಯು ನುಡಿದಿದ್ದು ಏನು ಹೇಳಿಕೆ ನೀಡಿದ್ದರೆಂದು ತಿಳಿಸಿಲ್ಲ. ಈ ಪರಿಸ್ಥಿತಿಯಲ್ಲಿ ತಮ್ಮ ವಿರುದ್ಧ ಆರೋಪದಲ್ಲಿ ತಿಳಿಸಲಾದ ರೂ. 3,16,700/– ಗಳ ಪೈಕಿ ರೂ. 2,35,120/– ಕ್ಕೆ ತಾನು ಜವಾಬ್ದಾರನಲ್ಲವೆಂದು ಆರೋಪಿ ನಿವೃತ್ತಿ ಮುಖ್ಯ ಇಂಜಿನಿಯರ್ ಅವರ ಹೇಳಿಕೆಯನ್ನ ಪರಿಗಣನೆಗೆ ತೆಗೆದುಕೊಂಡು ಆರೋಪ ಭಾಗಶಃ ಸಾಬೀತಾಗಿದೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಪರಿಗಣಿಸಿ ರೂ. 81,580/–ಗಳನ್ನು ಆಪಾದಿತ ಅಧಿಕಾರಿಯು ಅಕ್ರಮವಾಗಿ ಪಾವತಿ ಮಾಡಿದ್ದಾರೆಂದು ನಿರ್ಣಯಿಸಿದೆ. ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಿಕೊಂಡ ಸರ್ಕಾರವು ಕರ್ನಾಟಕ ಲೋಕಸೇವಾ ಆಯೋಗದ ಸಹಮತಿಯೊಡನೆ ದಂಡನೆ ವಿಧಿಸಲು ನಿರ್ಣಯಿಸಿ ಈ ಮುಂದಿನಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 21 ಎಸ್‌ಇಎನ್ 2002, ಬೆಂಗಳೂರು, ದಿನಾಂಕ : 18–03–2010

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ 214 ನೇ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ಬಸವರಾಜ ಕುಕ್ಕುಂದ, ನಿವೃತ್ತ ಮುಖ್ಯ ಇಂಜಿನಿಯರ್, ಅವರಿಂದ ಸರ್ಕಾರಕ್ಕೆ ಉಂಟಾದ ರೂ.81,581/– (ಎಂಬತ್ತೊಂದು ಸಾವಿರದ ಐನೂರ ಎಂಬತ್ತೊಂದು ರೂ.ಗಳು ಮಾತ್ರ) ನಷ್ಟವನ್ನು ಅವರು ಪಾವತಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಶೇಕಡ 8ರ ಬಡ್ಡಿಯೊಡನೆ ವಸೂಲು ಮಾಡುವ ಹಾಗೂ ಅವರ ಮಾಸಿಕ ವಿಶ್ರಾಂತಿ ವೇತನದಿಂದ ಪ್ರತಿ ತಿಂಗಳು ರೂ.1000/– ಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಎರಡು ವರ್ಷಗಳ ಅವಧಿಗೆ ಕಡಿತಗೊಳಿಸುವ ದಂಡನೆಯನ್ನು ವಿಧಿಸಿ ಆದೇಶಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಎಂ.ಎಸ್. ಶಿವರಾಮ್),

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವೆಗಳು–3)

ಪಿ.ಆರ್. 805

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಸಂ. ಸಿಆಸುಇ 21 ಇಆಸು 2008, ಬೆಂಗಳೂರು, ದಿನಾಂಕ 17ನೇ ಮಾರ್ಚ್ 2010

ಅಧಿಕೃತ ಜ್ಞಾಪನ

ವಿಷಯ : ಬೆಳಗಾಂ ವಿಭಾಗದ ಬಿಜಾಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ಹಾಗೂ ಗುಲ್ಬರ್ಗಾ ವಿಭಾಗದಲ್ಲಿ ಬೇಸಿಗೆ ಕಾಲದಲ್ಲಿ ಕಛೇರಿ ಕೆಲಸದ ವೇಳೆಯನ್ನು ನಿಗದಿಪಡಿಸುವ ಬಗ್ಗೆ.

ಉಲ್ಲೇಖ : ದಿನಾಂಕ 30–03–1995ರ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 84 ಇಆಸು 94.

ಉಲ್ಲೇಖ (1) ರಲ್ಲಿ ನಮೂದಿಸಿದ ದಿನಾಂಕ 30–03–1995ರ ಸರ್ಕಾರಿ ಅಧಿಕೃತ ಜ್ಞಾಪನದಲ್ಲಿ ಗುಲ್ಬರ್ಗಾ ವಿಭಾಗದಲ್ಲಿರುವ ಮತ್ತು ಬೆಳಗಾಂ ವಿಭಾಗದ ಬಿಜಾಪುರ ಜಿಲ್ಲೆಯಲ್ಲಿರುವ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳು, ಕಛೇರಿ ಕೆಲಸದ ವೇಳೆಯನ್ನು ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಬೆಳಿಗ್ಗೆ 8–00 ರಿಂದ ಮಧ್ಯಾಹ್ನ 1–30 ಘಂಟೆಯವರೆಗೆ ನಿರ್ವಹಿಸತಕ್ಕದೆಂದೇ ನಿರ್ಧರಿಸಲಾಗಿತ್ತು.

ಗುಲ್ಬರ್ಗಾ ವಿಭಾಗದಲ್ಲಿ ಮತ್ತು ಬೆಳಗಾಂ ವಿಭಾಗದ ಬಿಜಾಪುರ ಜಿಲ್ಲೆಯಲ್ಲಿ ಬೇಸಿಗೆ ಕಾಲದಲ್ಲಿ ಬಿಸಿಲಿನ ತಾಪ ಹೆಚ್ಚಾಗಿರುತ್ತದೆಂಬ ಕಾರಣದಿಂದ ಬೆಳಗಿನ ಕಛೇರಿ ವೇಳೆಯನ್ನು ಹಿಂದೆ ನಿಗದಿಪಡಿಸಲಾಗಿತ್ತು. ಆದರೆ, ಸದರಿ ಸ್ಥಳಗಳಲ್ಲಿರುವ ಎಲ್ಲಾ ಕೇಂದ್ರ ಸರ್ಕಾರದ ಕಛೇರಿಗಳು, ಬ್ಯಾಂಕುಗಳು, ಇತ್ಯಾದಿ ಕಛೇರಿಗಳು ಸಹ ಬೆಳಿಗ್ಗೆ 10–00 ಘಂಟೆಯಿಂದ ಸಂಜೆ 5–30 ರವರೆಗೆ ಬೇಸಿಗೆ ಕಾಲದಲ್ಲೂ ಕೆಲಸ ನಿರ್ವಹಿಸುತ್ತಿವೆ. ಆದರೆ, ಸರ್ಕಾರಿ ಕಛೇರಿಗಳ ಕೆಲಸದ ಅವಧಿಯನ್ನು ಬೆಳಿಗ್ಗೆ 8–00 ರಿಂದ ಮಧ್ಯಾಹ್ನ 1–30 ಘಂಟೆಯವರೆಗೆ ನಿಗದಿಪಡಿಸಿರುವುದರಿಂದ ಸರ್ಕಾರಿ ನೌಕರರಿಗೆ ಬೆಳಿಗ್ಗೆ 8–00 ಘಂಟೆಗೆ ಕಛೇರಿಗೆ ಬರುವುದಕ್ಕೆ ಅನಾನುಕೂಲವಾಗುತ್ತದೆಯೆಂದೂ ಮತ್ತು ಮಧ್ಯಾಹ್ನ 1–30ಕ್ಕೆ ಕಛೇರಿಯನ್ನು ಬಿಟ್ಟು ಹೋಗುವಾಗ ಬಿಸಿಲಿನ ತಾಪ ಹೆಚ್ಚಾಗಿರುತ್ತದೆಂದೂ ಪರಿಗಣಿಸಿ ಬೆಳಿಗ್ಗೆ 10–00 ರಿಂದ ಸಂಜೆ 5–30 ಘಂಟೆಯವರೆಗೆ ಕೆಲಸದ ವೇಳೆಯನ್ನು ನಿಗದಿಪಡಿಸಿದರೆ, ಸರ್ಕಾರಿ ನೌಕರರಿಗೆ ಅನುಕೂಲವಾಗುತ್ತದೆಂದು ಹಾಗೂ ಕಛೇರಿ ಕೆಲಸದ ವೇಳೆಯಲ್ಲಿ ತಾರತಮ್ಯ ಇಲ್ಲದೆ ಸಮಾನವಾದ ಕಛೇರಿ ಕೆಲಸದ ವೇಳೆಯನ್ನು ನಿಗದಿಪಡಿಸಿದಲ್ಲಿ, ಸಾರ್ವಜನಿಕರಿಗೆ ಅನುಕೂಲವಾಗುತ್ತದೆ ಎಂಬುದನ್ನು ಗಮನದಲ್ಲಿಟ್ಟುಕೊಂಡು, ಉಲ್ಲೇಖ (1)ರಲ್ಲಿ ನಮೂದಿಸಿರುವ ದಿನಾಂಕ 30–03–1995ರ ಅಧಿಕೃತ ಜ್ಞಾಪನವನ್ನು ಈ ಮೂಲಕ ವಾಪಸ್ಸು ಪಡೆಯಲಾಗಿದೆ. ಆದುದರಿಂದ ಗುಲ್ಬರ್ಗಾ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಮತ್ತು ಬೆಳಗಾಂ ವಿಭಾಗದ ಬಿಜಾಪುರ, ಬಾಗಲಕೋಟೆ ಜಿಲ್ಲೆಗಳಲ್ಲಿರುವ ಎಲ್ಲಾ ಸರ್ಕಾರಿ ಕಛೇರಿಗಳ ಕೆಲಸದ ವೇಳೆಯನ್ನು ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ 2010–11ನೇ ಸಾಲಿನಿಂದ ಅನ್ವಯವಾಗುವಂತೆ ಎಂದಿನಂತೆ ಬೆಳಿಗ್ಗೆ 10–00 ರಿಂದ ಸಂಜೆ 5–30 ಘಂಟೆಯವರೆಗೆ ಎಂದು ನಿಗದಿಪಡಿಸಲಾಗಿದೆ.

(ಅಬ್ದುಲ್ ರೆಹಮಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು–ತರಬೇತಿ)

ಪಿ.ಆರ್. 806

ಕಾರ್ಮಿಕ ಸಚಿವಾಲಯ

ವಿಷಯ : ಕನಿಷ್ಠ ವೇತನ ಕಾಯ್ದೆ 1948ರ ಕಲಂ 5(1)(ಎ) ಅಡಿ ತಜ್ಞರ ಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ :

1. ಸನ್ಮಾನ್ಯ ಮುಖ್ಯಮಂತ್ರಿಗಳು ಸಿ.ಐ.ಟಿ.ಯು, ಪದಾಧಿಕಾರಿಗಳೊಂದಿಗೆ ನಡೆಸಿದ್ದ ದಿ : 3–12–2009ರ ಸಭೆಯ ನಡವಳಿ.
2. ಸರ್ಕಾರದ ಆದೇಶ ಸಂಖ್ಯೆ : ಕಾಇ 160 ಎಲ್‌ಡಬ್ಲ್ಯೂಎ 2009, ದಿ : 19–1–2010.
3. ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ದಿ:19–2–2010ರ ತಜ್ಞರ ಸಮಿತಿಯ ಸಭೆಯ ನಡವಳಿ.
4. ಕಾರ್ಮಿಕ ಆಯುಕ್ತರ ಪತ್ರ ಸಂಖ್ಯೆ : ಕವೇಕಾ–2/ಇತರೇ/ಸಿಆರ್–71/09–10, ದಿ : 1–3–2010.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಸಭೆಯಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಕನಿಷ್ಠ ವೇತನ ಕಾಯ್ದೆ 1948ರ ಕಲಂ 5(1)(ಎ)ರ ಅಡಿ ತಜ್ಞರ ಸಮಿತಿಯನ್ನು ರಚಿಸುವುದಾಗಿ ತಿಳಿಸಿದ್ದು, ಆ ಪ್ರಕಾರ ಮೇಲೆ ಓದಲಾದ (2)ರ ಆದೇಶದಲ್ಲಿ ಕನಿಷ್ಠ ವೇತನ ಕಾಯ್ದೆ 1948ರ ಕಲಂ 5(1)(ಬಿ)ರ ಅಡಿಯಲ್ಲಿ ಎಲ್ಲಾ ಉದ್ಯೋಗಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಕನಿಷ್ಠ

ವೇತನವನ್ನು ಮುಂದುವರೆಸುವ ಅಥವಾ ಪರಿಷ್ಕರಿಸುವ ಬಗ್ಗೆ ಹಾಗೂ ದೆಹಲಿ ಮಾದರಿಯಂತೆ ಎಲ್ಲಾ ಉದ್ಯೋಗಗಳಿಗೆ ಏಕೈಕ ಅಧಿಸೂಚನೆಯ ಪ್ರಕಾರ ಕನಿಷ್ಠ ವೇತನವನ್ನು ನಿಗದಿಪಡಿಸುವುದೇ ಎನ್ನುವ ಬಗ್ಗೆ ಚರ್ಚಿಸಿ ಸರ್ಕಾರಕ್ಕೆ ಸಲಹೆ ನೀಡಲು ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ತಜ್ಞರ ಸಮಿತಿಯ ಪ್ರಥಮ ಸಭೆಯನ್ನು ದಿ: 19-2-2010 ರಂದು ಏರ್ಪಡಿಸಿದ್ದು ಸದರಿ ಸಭೆಯಲ್ಲಿ, ಕನಿಷ್ಠ ವೇತನ ಕಾಯಿದೆ 1948ರ ಪ್ರಕರಣ 5(1)(ಎ) ಪ್ರಕಾರ ಕಾರ್ಮಿಕ ಮತ್ತು ಮಾಲೀಕ ಪ್ರತಿನಿಧಿಗಳ ಸಂಖ್ಯೆ ಸಮನಾಗಿದ್ದು, ಒಟ್ಟು ಸದಸ್ಯರ ಸಂಖ್ಯೆಯು 1/3 ಭಾಗಕ್ಕೆ ಮೀರದಂತೆ ಸ್ವತಂತ್ರ ಸದಸ್ಯರು ಇರಬೇಕಾಗಿದ್ದು, ಆದರೆ ಈಗ ರಚಿಸಿರುವ ತಜ್ಞರ ಸಮಿತಿಯು ಆ ಪ್ರಕಾರ ಇಲ್ಲದಿರುವುದರಿಂದ ತಜ್ಞರ ಸಮಿತಿಯನ್ನು ಪುನರ್ ರಚಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಕೆಳಗಿನ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಾಇ 160 ಎಲ್‌ಡಬ್ಲ್ಯೂಎ 2009, ಬೆಂಗಳೂರು, ದಿನಾಂಕ : 12-03-2010

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಕನಿಷ್ಠ ವೇತನ ಕಾಯ್ದೆ 1948ರ ಸೆಕ್ಷನ್ 5(1)(ಎ)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶವನ್ನು ಮಾರ್ಪಡಿಸಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡಂತೆ ತಜ್ಞರ ಸಮಿತಿಯನ್ನು ಪುನರ್ ರಚಿಸಲಾಗಿದೆ.

ಕ್ರ. ಸಂ.	ಹೆಸರು	ಪದನಾಮ
	ಸ್ವತಂತ್ರ ಸದಸ್ಯರು	
1.	ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು	ಅಧ್ಯಕ್ಷರು
2.	ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು	ಸದಸ್ಯರು
3.	ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು	ಸದಸ್ಯರು
4.	ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು	ಸದಸ್ಯರು
5.	ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, 9ನೇ ಮಹಡಿ, ವಿಶ್ವೇಶ್ವರಯ್ಯ, ಟವರ್, ಬೆಂಗಳೂರು	ಸದಸ್ಯರು
6.	ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು	ಸದಸ್ಯರು
7.	ಪ್ರೊ. ನಾಗರಾಜ್, ರಿಜಿಸ್ಟ್ರಾರ್, ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯನ್ ಯೂನಿವರ್ಸಿಟಿ, ಅಂಚೆ ಪೆಟ್ಟಿಗೆ ಸಂ. 7201, ನಾಗರಬಾವಿ, ಬೆಂಗಳೂರು	ಸದಸ್ಯರು
8.	ಪ್ರೊ. ಮಹದೇಶ್ವರನ್, ಇನ್‌ಸ್ಟಿಟ್ಯೂಟ್ ಆಫ್ ಸೋಶಿಯೋ ಅಂಡ್ ಎಕನಾಮಿಕ್ ಚೇಂಜ್, ನಾಗರಬಾವಿ, ಬೆಂಗಳೂರು	ಸದಸ್ಯರು
9.	ಜಂಟಿ ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು	ಸದಸ್ಯ ಕಾರ್ಯದರ್ಶಿ
	ಮಾಲೀಕ ಪ್ರತಿನಿಧಿಗಳು	
1.	ಅಧ್ಯಕ್ಷರು, ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕೆಗಳ ಮಹಾಮಂಡಳಿ, ಕೆ.ಜಿ. ರಸ್ತೆ, ಬೆಂಗಳೂರು	ಸದಸ್ಯರು
2.	ಅಧ್ಯಕ್ಷರು, ಕಾನ್‌ಫೆಡರೇಷನ್ ಆಫ್ ಇಂಡಿಯನ್ ಇಂಡಸ್ಟ್ರಿ, ಬೆಂಗಳೂರು	ಸದಸ್ಯರು
3.	ಅಧ್ಯಕ್ಷರು, (ಕಾಸ್ಸಿಯಾ), ಕರ್ನಾಟಕ ಸ್ಮಾಲ್ ಸ್ಕೇಲ್ ಇಂಡಸ್ಟ್ರೀಸ್, ನಂ.106, 17ನೇ ಕ್ರಾಸ್, ಮಾಗಡಿ ಕಾರ್ಡ್ ರಸ್ತೆ, ವಿಜಯನಗರ, ಬೆಂಗಳೂರು	ಸದಸ್ಯರು
4.	ಶ್ರೀ ಬಿ.ಸಿ. ಪ್ರಭಾಕರ್, ಅಧ್ಯಕ್ಷರು, ಕರ್ನಾಟಕ ಎಂಪ್ಲಾಯರ್ಸ್ ಅಸೋಸಿಯೇಷನ್, ನಂ.74, ಶಂಕರ್ ಆರ್ಕೆಡ್, ವಾಣಿ ವಿಲಾಸ ರಸ್ತೆ, ಬಸವನಗುಡಿ, ಬೆಂಗಳೂರು	ಸದಸ್ಯರು

5.	ಶ್ರೀ ರಾಜೇಂದ್ರ ಹಿಂದೂಜ, ಅಧ್ಯಕ್ಷರು, ಕ್ಲಾತ್ ಮ್ಯಾನುಫ್ಯಾಕ್ಚರಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ, ಗೀತಾ ಮ್ಯಾನ್‌ಷನ್, 6ನೇ ಮಹಡಿ, 40/1, ಕೆಂಪೇಗೌಡ ರಸ್ತೆ, ಬೆಂಗಳೂರು	ಸದಸ್ಯರು
6.	ಆಡಳಿತ ವರ್ಗ, ಮಂಗಳೂರು ಗಣೇಶ ಬೀಡಿ ವರ್ಕ್ಸ್, ಬೆಂಗಳೂರು	ಸದಸ್ಯರು
7.	ಶ್ರೀ ಬೋಸ್‌ಮಂದಣ್ಣ, ಸಂಚಾಲಕರು, ಕರ್ನಾಟಕ ಪ್ಲಾಂಟರ್ಸ್ ಅಸೋಸಿಯೇಷನ್, ಸ್ಪೆನ್ಸರ್ ರಸ್ತೆ, ಪಿ.ಬಿ. ನಂ.18, ಚಿಕ್ಕಮಗಳೂರು–577101.	ಸದಸ್ಯರು
8.	ಅಧ್ಯಕ್ಷರು, ಬೆಂಗಳೂರು ವಾಣಿಜ್ಯ ಮತ್ತು ಕೈಗಾರಿಕೆಗಳ ಮಹಾ ಮಂಡಳಿ, ಬೆಂಗಳೂರು	ಸದಸ್ಯರು
9.	CREDAI, No. 607, 6th Floor, BARTON CENTRE, No. 84, M.G. Road, Bangalore-560001 (Building Contractors Association)	ಸದಸ್ಯರು
	ಕಾರ್ಮಿಕ ಪ್ರತಿನಿಧಿಗಳು	
1.	ಶ್ರೀ ವಿ.ಜಿ.ಕೆ. ನಾಯರ್, ಅಧ್ಯಕ್ಷರು, (ಸಿಐಟಿಯು) ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್, "ಸೂರಿ ಭವನ" ನಂ. 40/5, 2ನೇ 'ಬಿ' ಮೇನ್, 16ನೇ ಕ್ರಾಸ್, ಸಂಪಂಗಿರಾಮನಗರ, ಬೆಂಗಳೂರು–27	ಸದಸ್ಯರು
2.	ಶ್ರೀ ಎಂ.ಸಿ. ನರಸಿಂಹನ್, ಸೀನಿಯರ್ ಕೌನ್ಸಿಲ್ ಹೈಕೋರ್ಟ್ ಅಧ್ಯಕ್ಷರು, ಆಲ್ ಇಂಡಿಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್, ನಂ.6, ಸಿರೂರು ಪಾರ್ಕ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು	ಸದಸ್ಯರು
3.	ಅಧ್ಯಕ್ಷರು, ಇಂಡಿಯನ್ ನ್ಯಾಷನಲ್ ಟ್ರೇಡ್ ಯೂನಿಯನ್ ಕಾಂಗ್ರೆಸ್, ನಂ.26/1, 2ನೇ ಮೈನ್, 11ನೇ ಕ್ರಾಸ್, ವೈಯಾಲಿ ಕಾವಲ್, ಬೆಂಗಳೂರು–3	ಸದಸ್ಯರು
4.	ಅಧ್ಯಕ್ಷರು, ಭಾರತೀಯ ಮಜ್‌ದೂರ್ ಸಂಘ, ಸುಭೇದಾರ್ ಛತ್ರಂ ರಸ್ತೆ, ಬೆಂಗಳೂರು	ಸದಸ್ಯರು
5.	ಅಧ್ಯಕ್ಷರು, ಹಿಂದ್ ಮಜ್ದೂರ್ ಸಭಾ, ನಂ.304, ಗೌರವ್ ಆರ್ಕೇಡ್, ಅತ್ಮಾನಂದ ಕಾಲೋನಿ, ಆರ್.ಟಿ.ನಗರ, ಬೆಂಗಳೂರು–32	ಸದಸ್ಯರು
6.	ಶ್ರೀ ಅನಂತ ಸುಬ್ಬರಾವ್, ಪ್ರಧಾನ ಕಾರ್ಯದರ್ಶಿ, ಆಲ್ ಇಂಡಿಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್, ನಂ.6, ಸಿರೂರು ಪಾರ್ಕ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು–560020	ಸದಸ್ಯರು
7.	ಶ್ರೀ ಪ್ರಸನ್ನ ಕುಮಾರ್, ಪ್ರಧಾನ ಕಾರ್ಯದರ್ಶಿ, ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್, "ಸೂರಿ ಭವನ" ನಂ. 40/5, 2ನೇ 'ಬಿ' ಮೇನ್, 16ನೇ ಕ್ರಾಸ್, ಸಂಪಂಗಿರಾಮನಗರ, ಬೆಂಗಳೂರು–27	ಸದಸ್ಯರು
8.	ಶ್ರೀ ಹೆಚ್. ಮಂಗಳಾಂಭರಾವ್, ರಾಷ್ಟ್ರೀಯ ಕಾರ್ಯದರ್ಶಿ, ಭಾರತೀಯ ಮಜ್‌ದೂರ್ ಸಂಘ, ಸುಭೇದಾರ್ ಛತ್ರಂ ರಸ್ತೆ, ಬೆಂಗಳೂರು–9	ಸದಸ್ಯರು
9.	ಶ್ರೀ ಕೆ.ಎಸ್. ಮೇಲುಕೋಟೆ, ಅಧ್ಯಕ್ಷರು, ಗಾರ್ಮೆಂಟ್ಸ್ ಲೇಬರ್ ಯೂನಿಯನ್, ನಂ.27, 2ನೇ ಮುಖ್ಯ ರಸ್ತೆ, ಕಸ್ತೂರಿ ಬಾ ನಗರ, ಮೈಸೂರು ರಸ್ತೆ, ಬೆಂಗಳೂರು–26	ಸದಸ್ಯರು

ಸಮಿತಿಯು 3 ತಿಂಗಳಲ್ಲಿ ತನ್ನ ವರದಿಯನ್ನು ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಯು.ಎನ್. ನಾಗೇಂದ್ರ),
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಪಿ.ಆರ್. 808